# ಅಶೋಕಾ ಕೋಟೆ

ಪ್ರಾದೇಶಿಕ ಕನ್ನಡ ದಿನ ಪತ್ರಿಕೆ, ಬೀದರ
ASHOKA KOTE REGIONAL KANNADA DAILY, BIDAR

* ಬೀದರ * ಕಲಬುರಗಿ * ಯಾದಗಿರಿ * ರಾಯಚೂರು * ವಿಜಯಪುರ * ವಿಜಯನಗರ * ಬಳ್ಳಾರಿ * ಕೊಪ್ಪಳ, ಬಾಗಲಕೋಟೆ

ಮೊಬೈಲ್ : 9448026040 8296721164

ಸಂಪಾದಕರು : ಅಶೋಕ ಕುಮಾರ ಕರಂಜಿ ಗಾದಗಿ | ಸಹ ಸಂಪಾದಕರು : ನವೀನಕುಮಾರ ಕರಂಜಿ ಗಾದಗಿ | ವ್ಯವಸ್ಥಾಪಕ ಸಂಪಾದಕರು ಸಚಿನ ಕುಮಾರ ಕರಂಜಿ ಗಾದಗಿ

ಸಂಪುಟ:24 ಸಂಚಿಕೆ:260 ದಿನಾಂಕ 03-02-2026 ಗುರುವಾರ RNINO.KAR/KAN/2002/6831 Postal Regn.No.PMG/KA/NK/736.2024-2026 ಪುಟ :-08 ಬೆಲೆ.2.00ರೂ.email:ashokakote press@gmail.com


## ‘ಜಿ ರಾಮ್ ಜಿನಲ್ಲಿ ರಾಮನೂ ಇಲ್ಲ, ಸಿದ್ದರಾಮನೂ ಇಲ್ಲ’! ವಿಧಾನಸಭೆಯಲ್ಲಿ ಸಿಎಂ ವ್ಯಂಗ್ಯ



ಬೆಂಗಳೂರು: ಪೆ. 02-: ವಿಬಿ ಜಿ ರಾಮ್ ಜಿನಲ್ಲಿ ರಾಮನಿಲ್ಲ ಅಂತ ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ. ರಾಜ್ಯಪಾಲರ ಭಾಷಣದ ಮೇಲಿನ ಚರ್ಚೆಯಲ್ಲಿ ಮಾತನಾಡಿದ ಸಿದ್ದರಾಮಯ್ಯ, ವಿಬಿ ಜಿ ರಾಮ್ ಜಿನಲ್ಲಿ ರಾಮ ಇಲ್ಲ, ದಶರಥ ರಾಮನೂ ಇಲ್ಲ, ಸೀತಾ ರಾಮನು ಇಲ್ಲ ಎಂದಿದ್ದಾರೆ. ಅದರಲ್ಲಿ ರಾಮಾಯಣದ ರಾಮನೂ ಇಲ್ಲ, ಸಿದ್ದರಾಮನೂ ಇಲ್ಲ ಅಂತ ವ್ಯಂಗ್ಯವಾಡಿದ್ರು. ನಾವು ರಾಜ್ಯಪಾಲರ ವಿರುದ್ಧವಿಲ್ಲ. ನಾವು ಕೇಂದ್ರ ಸರ್ಕಾರದ ವಿರುದ್ಧ ಇರುವವರು ಅಂತ ಸರ್ಕಾರದ ಭಾಷಣಕ್ಕೆ ಸಿಎಂ ಸಮರ್ಥನೆ ನೀಡಿದ್ರು.

**ನಮ್ಮ ಐಡಿಯಾಲಜಿ ನಮಗೆ, ನಿಮ್ಮದು ನಿಮಗೆ**

ಜನ ಅವರ ಪ್ರತಿನಿಧಿಯಾಗಿ ನಮ್ಮನ್ನ ಆಯ್ಕೆ ಮಾಡಿದ್ದಾರೆ ಎಂದ ಸಿಎಂ, ಅವರ ಹಿತಕಾಪಾಡಲಿ ಎಂದು ಮಾಡಿದ್ದು. ನಮ್ಮ ಭಿನ್ನಾಬಿಪ್ರಾಯಗಳು ಏನೇ ಇರಬಹುದು. ಆದರೆ ನಮ್ಮ ಐಡಿಯಾಲಜಿ ಬೇರೆ, ನಿಮ್ಮದು ಬೇರೆ. ನಿಮ್ಮದು ನಿಮಗೆ, ನಮ್ಮದು ನಮಗೆ. ನೀವು ನಮ್ಮ ಐಡಿಯಾಲಜಿ ಒಪ್ಪಬೇಕಿಲ್ಲ, ಜೆಡಿಎಸ್ ಐಡಿಯಾಲಜಿ ಒಪ್ಪಬೇಕಿಲ್ಲ. ಆದರೆ ಯಾರೂ ಸಂವಿಧಾನದ ವಿರೋಧ ಮಾಡುವಂತಿಲ್ಲ ಅಂತ ಸಿಎಂ ಹೇಳಿದ್ರು.

ವಿಬಿ ಜಿ ರಾಮ್ ಜಿನಲ್ಲಿ ರಾಮ ಇಲ್ಲ, ಸಿದ್ದರಾಮನೂ ಇಲ್ಲ

ರಾಜ್ಯಪಾಲರು ಮೂಲತಃ ಒಳ್ಳೆಯವರು. ನಾವು ರಾಜ್ಯಪಾಲರ ವಿರುದ್ಧವಿಲ್ಲ. ನಾವು ಕೇಂದ್ರ ಸರ್ಕಾರದ ವಿರುದ್ಧ ಇರುವವರು ಅಂತ ಸಿಎಂ ಹೇಳಿದ್ರು. ವಿಬಿ ಜಿ ರಾಮ್ ಜಿನಲ್ಲಿ ರಾಮನಿಲ್ಲ, ದಶರಥ ರಾಮನೂ ಇಲ್ಲ, ಸೀತಾ ರಾಮನೂ ಇಲ್ಲ. ರಾಮಾಯಣದ ರಾಮನೂ ಇಲ್ಲ, ಸಿದ್ದರಾಮನೂ ಇಲ್ಲ ಅಂತ ಸಿಎಂ ವ್ಯಂಗ್ಯವಾಡಿದ್ರು.

ರಾಜ್ಯಪಾಲರ ನಡೆಗೆ ಬೇಸರ

ಸಂವಿಧಾನದ 176ನೇ ವಿಧಿ ಪ್ರಕಾರ ರಾಜ್ಯಪಾಲರು ಭಾಷಣ ಓದಬೇಕಿತ್ತು. ಓದದಿದ್ದರೆ ಅದು ಸಂವಿಧಾನ ಬಾಹಿರ ಅಂತ ರಾಜ್ಯಪಾಲರ ನಡೆಗೆ ಸಿಎಂ ಸಿದ್ದರಾಮಯ್ಯ ಬೇಸರ ವ್ಯಕ್ತಪಡಿಸಿದ್ರು. ಮನರೇಗಾ ಬಗ್ಗೆ ಕುಮಾರಸ್ವಾಮಿ ಗ್ರಾಮೀಣ ಜನರ ಸಂಜೀವಿನಿ ಅಂತ ಹೇಳಿದ್ರು. ಈಗ ಬಿಜೆಪಿಯವ್ರ ಜೊತೆ ಸೇರಿದ್ಮೇಲೆ ಕೂಡಿಕೆ ಆಗಿದೆ ಎಂದು ಕೈ ಕೈ ಸೇರಿಸಿ ಸಿಎಂ ವ್ಯಂಗ್ಯವಾಡಿದ್ರು.

**ಅಸಹಾಯಕ ಮುಖ್ಯಮಂತ್ರಿ ಎಂದಿದ್ದಾರೆ**

ರಾಜ್ಯಪಾಲರ ನಡೆ ಬಗ್ಗೆ ಸಂವಿಧಾನದ ಕಲಂ 176, 163 ಬಗ್ಗೆ ಈಗಾಗಲೇ ಚರ್ಚೆ ಮಾಡಲಾಗಿದೆ. ಶಾಸಕ ಸುನಿಲ್ ಕುಮಾರ್ ಅವರು ‘ಸರ್ಕಾರ ಆಡಳಿತ ಹದಗೆಟ್ಟಿದೆ ಮತ್ತು ಸಂವಿಧಾನರಹಿತ ಸರ್ಕಾರ’, ‘ಅಸಹಾಯಕ ಮುಖ್ಯಮಂತ್ರಿ’ ಎಂದಿದ್ದಾರೆ. ಆದರೆ ಕೆಲವೊಮ್ಮ ಅಸತ್ಯದ ಎದುರು ಸತ್ಯ ಅಸಹಾಯಕವಾಗುತ್ತದೆ. ಜನರು ನಮ್ಮನ್ನು ಅವರ ಪ್ರತಿನಿಧಿಯಾಗಿ ಆಯ್ಕೆ ಮಾಡುತ್ತಾರೆ. ವಿರೋಧಪಕ್ಷದವರ ಮತ್ತು ಸರ್ಕಾರದವರ ಸಿದ್ಧಾಂತಗಳು ವಿಭಿನ್ನವಾಗಿರುತ್ತವೆ ಎಂದರು.

## ನ್ಯಾಯಾಲಯದಲ್ಲಿ ವಿಚಾರಣೆ ನಡೆದು ಆಪಾದಿತ ಸರ್ಕಾರಿ ನೌಕರರಿಗೆ ಶಿಕ್ಷೆ

ಬೆಂಗಳೂರು, ಫೆಬ್ರವರಿ 02 :ಎನ್.ಲಕ್ಷ್ಮಣ ಬಿನ್ ನಾರಾಯಣಪ್ಪ, ಕುಂದಾಣ ಗ್ರಾಮ & ಹೋಬಳಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರು ಸಾಸಲು ಗ್ರಾಮದ ಸರ್ವೆ ನಂಬರ್ 26/2 ರಲ್ಲಿ 0-30 ಗಂಟೆ ಜಮೀನಿನ 11 ಇ ನಕ್ಷೆಯನ್ನು ಪಡೆಯಲು ಆನ್‌ಲೈನ್‌ನಲ್ಲಿ ಅರ್ಜಿಯನ್ನು ತಾಲ್ಲೂಕು ಕಛೇರಿಯಲ್ಲಿ ಸಲ್ಲಿಸಿದ್ದು, ಈ ಸಂಬಂಧ ಆರೋಪಿತರಾದ ಸರ್ವೆಯರ್ ಡಿ.ಬಿ ಗೌಡ ಎಂಬುವರು ಜಮೀನಿನ ಸರ್ವೆ ಕಾರ್ಯ ನಡೆಸಿದ್ದು, ಪಿರ್ಯಾದಿಯವರು ಸರ್ವೆ ನಕ್ಷೆ ಬಗ್ಗೆ ವಿಚಾರಿಸಿದಾಗ ಆರೋಪಿತ ಡಿ.ಬಿ ಗೌಡ ರವರು 3000/- ರೂಗಳ ಲಂಚದ ಹಣಕ್ಕೆ ಬೇಡಿಕೆ ಇಟ್ಟು ಅದೇ ದಿನ ಪಡೆದುಕೊಂಡು, ಪಿರ್ಯಾದಿಯವರ ಸರ್ವೆ ನಕ್ಷೆ ಮಾಡಿಕೊಡದೇ ಇದ್ದು, ಮತ್ತೊಮ್ಮೆ ಪಿರ್ಯಾದಿ ಆರೋಪಿತ ಡಿ.ಬಿ ಗೌಡ ರವರನ್ನು ಭೇಟಿ ಮಾಡಿ ಸರ್ವೆ ನಕ್ಷೆ ಆಗಿರುವ ಬಗ್ಗೆ ವಿಚಾರಿಸಿದಾಗ ಆರೋಪಿತರು 11 ಇ ನಕ್ಷೆ ಮಾಡಿಕೊಡಲು ದಿನಾಂಕ: 29-11-2013ರಂದು ಆಪಾದಿತರಾದ ಪಿರ್ಯಾದುದಾರರನ್ನು ರೂ.3,000/-ಗಳ ಲಂಚದ ಹಣಕ್ಕೆ ಒತ್ತಾಯಿಸಿ, ನಂತರ ದಿನಾಂಕ:03/12/2013ರಂದು ನಡೆಸಿದ ಟ್ರ್ಯಾಪ್ ಕಾರ್ಯಾಚರಣೆಯಲ್ಲಿ ಪಿರ್ಯಾದಿದಾರರಿಂದ ಆರೋಪಿತರು ಲಂಚದ ಹಣವನ್ನು ಸ್ವೀಕರಿಸಿ ಟ್ರ್ಯಾಪ್ ತಂಡಕ್ಕೆ ಸಿಕ್ಕಿಬಿದ್ದಿರುತ್ತಾರೆ.

ಸುಬ್ರಮಣ್ಯ, ಪೊಲೀಸ್ ಇನ್ಸ್‌ಪೆಕ್ಟರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರು ಪ್ರಕರಣದ ತನಿಖೆ ನಡೆಸಿದ್ದು, ಎಂ.ಜೆ ದಯಾನಂದ, ಪೊಲೀಸ್ ಇನ್ಸ್‌ಪೆಕ್ಟರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರು ಆರೋಪಿತರ ವಿರುದ್ದ ಘನ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರ ಸನ್ನಿದಾನಕ್ಕೆ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿದ್ದು, ಸದರಿ ಪ್ರಕರಣವು ಘನ ನ್ಯಾಯಾಲಯದಲ್ಲಿ ಸಿಸಿ 193/2015 ರಂತೆ ವಿಚಾರಣೆ ನಡೆದಿರುತ್ತದೆ.

ದಿನಾಂಕ:30/01/2026ರಂದು ಘನ ನ್ಯಾಯಾಲಯದ ನ್ಯಾಯಾಧೀಶರಾದ ವಿಜಯಕುಮಾರ್ ರವರು ಸದರಿ ಪ್ರಕರಣದಲ್ಲಿ ಅಂತಿಮ ತೀರ್ಪು ನೀಡಿದ್ದು, ತೀರ್ಪಿನಲ್ಲಿ ಆರೋಪಿತರಾದ ಡಿ.ಬಿ.ಗೌಡ, ಖಾಸಗಿ ಸರ್ವೇಯರ್, ದೇವನಹಳ್ಳಿ ತಾಲ್ಲೂಕು ರವರ ವಿರುದ್ದ ಆರೋಪ ಸಾಬೀತಾಗಿರುವುದರಿಂದ ಸದರಿ ಆರೋಪಿತರಿಗೆ ಭ್ರಷ್ಟಾಚಾರ ತಡೆ ಕಾಯ್ದೆ ಕಲಂ:7 ರಡಿಯಲ್ಲಿ ಆರು ತಿಂಗಳ ಸರಳ ಜೈಲು ಶಿಕ್ಷೆ ಮತ್ತು ರೂ 10,000/- ರೂ ದಂಡ ಮತ್ತು ಕಲಂ:13(1)(ಡಿ) ರ/ಜೋ 13(2) ರಡಿಯಲ್ಲಿ ಆರೋಪಿಗೆ ಒಂದು ವರ್ಷ ಸರಳ ಜೈಲು ಶಿಕ್ಷೆ ಮತ್ತು ರೂ 15,000/- ರೂ ದಂಡ ವಿಧಿಸಿರುತ್ತಾರೆ.

## ರಾಯಚೂರು ಉತ್ಸವದ ಮಕ್ಕಳ ಹಬ್ಬಕ್ಕೆ ಕಿಕ್ಕಿರಿದು ತುಂಬಿದ ಸ್ಟೇಡಿಯಂ, ಚಿಣ್ಣರ ಸಂಭ್ರಮ



ರಾಯಚೂರು ಫೆಬ್ರವರಿ 02 : ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ-2026ರ ಆಚರಣೆ ಹಿನ್ನೆಲೆಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಫೆ.2 ಮತ್ತು ಫೆ.3ರಂದು ಎರಡು ದಿನಗಳ ಕಾಲ ಆಯೋಜನೆ ಮಾಡಿದ ಮಕ್ಕಳ ಹಬ್ಬಕ್ಕೆ ಮೊದಲನೇ ದಿನ ಫೆ.2ರಂದು ಯಶಸ್ವಿಯಾಗಿ ಚಾಲನೆ ಸಿಕ್ಕಿತು.

ನಗರದ ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಮಕ್ಕಳ ಹಬ್ಬದ ನಿಮಿತ್ತ ಹಾಕಿದ್ದ ಬೇರೆ ಬೇರೆ ಬಗೆಯ ಪ್ರದರ್ಶನ ಕಾರ್ಯಕ್ರಮಕ್ಕೆ ಖಾಸಗಿ ಶಿಕ್ಷಣ ಸಂಸ್ಥೆಗಳ ಸಂಘದ ಅಧ್ಯಕ್ಷರಾದ ಕೇಶವರೆಡ್ಡಿ ಅವರು ಚಾಲನೆ ನೀಡಿದರು.

ರಾಯಚೂರಿನ ಕವಿ ಲೇಖಕ ಈರಣ್ಣ ಬೆಂಗಾಲಿ ಅವರ

2ನೇಯ ಪುಟನೋಡಿ)

## ಸ್ಪರ್ಷ ಕುಷ್ಠರೋಗ ಜಾಗೃತಿ ಅಭಿಯಾನಕ್ಕೆ ಚಾಲನೆ



ಯಾದಗಿರಿ:ಫೆಬ್ರವರಿ 02,:ಸ್ಪರ್ಷ ಕುಷ್ಠರೋಗ ಜಾಗೃತಿ ಅಭಿಯಾನದ ಹಮ್ಮಿಕೊಳ್ಳಲಾಗಿಯಿತು ಎಂದು ಯಾದಗಿರಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ.ಮಹೇಶ ಬಿರಾದರ ಅವರು ಹೇಳಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಭಾಂಗಣದಲ್ಲಿ ಇತ್ತೀಚಿನ ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನದ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

“ತಾರತಮ್ಯವನ್ನು ಕೊನೆಗೊಳಿಸುವುದು, ಘನತೆಯನ್ನು ಕಾಪಾಡುವುದು”ಎಂಬ ಪ್ರತಿಜ್ಞೆ ಮತ್ತು ಮೌನಾಚಾರಣೆ ಮಾಡಿ ಕುಷ್ಠರೋಗ ಮುಕ್ತ ಜಿಲ್ಲೆ ಮಾಡಲು ಎಲ್ಲರೂ ಕೈ ಜೋಡಿಸಬೇಕೆಂದು ತಿಳಿಸಿದರು.

ಕುಷ್ಠರೋಗ ನಿರ್ಮೂಲನಾ ಅಧಿಕಾರಿ ಡಾ.ಸಂಜೀವಕುಮಾರ ರಾಯಚೂರಕರ್ ಅವರು ಮಾತನಾಡಿ, ಜನೇವರಿ 30 ರಂದು ನಾವು ಕುಷ್ಠರೋಗ ನಿರ್ಮೂಲನಾ ದಿನಾಚರಣೆ ಆಚರಿಸಲಾಗುತ್ತದೆ ಎಂದು ಹೇಳಿದರು.

2026ರ ಜನವರಿ 30 ರಿಂದ ಫೆಬ್ರವರಿ 13ರ ವರೆಗೆ ಪಾಕ್ಷಿಕ ದಿನ ಸ್ಪರ್ಷ ಕುಷ್ಠರೋಗ ಜಾಗೃತಿ ಅಭಿಯಾನ ಕಾರ್ಯಕ್ರಮ ನಡೆಯಲಿದೆ, ಪ್ರಾ.ಆ.ಕೇಂದ್ರ, ಗ್ರಾಮ ಪಂಚಾಯತಿ ಮತ್ತು ಶಾಲಾ ಕಾಲೇಜುಗಳಲ್ಲಿ, ಜಾತ್ರೆ, ಸಂತೆಗಳಲ್ಲಿ ಕುಷ್ಠರೋಗದ ಬಗ್ಗೆ ಅರಿವು

2ನೇಯ ಪುಟನೋಡಿ)

## ರೈತರ ಸಮಸ್ಯೆ ಸರಿಪಡಿಸಿ: ಶಾಸಕ ಪ್ರಭು ಚವ್ಹಾಣ ಸೂಚನೆ



ಔರಾದ(ಬಿ): ಫೆ. 02-ಮಾಜಿ ಸಚಿವರು ಹಾಗೂ ಶಾಸಕರಾದ ಪ್ರಭು ಬಿ. ಚವ್ಹಾಣ ಅವರು ಫೆ.1 ರಂದು ಔರಾದ(ಬಿ) ವಿಧಾನಸಭಾ ಕ್ಷೇತ್ರದ ಖೇರ್ಡಾ, ಭಂಡಾರಕುಮಟಾ, ಡೊಂಗರಗಾಂವ, ಕರಕ್ಯಾಳ, ಹುಲ್ಯಾಳ, ಏಕಂಬಾ, ಗಣೇಶಪೂರ(ಎ), ಜಮಾಲಪೂರ, ಖಂಡಿಕೇರಿ ಹಾಗೂ ಹಸ್ಸಿಖೇರಾದಲ್ಲಿ ಗ್ರಾಮ ಸಂಚಾರ ನಡೆಸಿದರು.

ಗ್ರಾಮಸ್ಥರ ಅಹವಾಲುಗಳನ್ನು ಆಲಿಸಿದ ಅವರು, ಅತೀವೃಷ್ಟಿಯಿಂದ ಉಂಟಾಗಿರುವ ಬೆಳೆ ಹಾನಿ ಪರಿಹಾರ ವಿತರಣೆಯಲ್ಲಿ ತಾರತಮ್ಯ ನಡೆಯುತ್ತಿರುವ ಬಗ್ಗೆ ಹಲವು ದೂರುಗಳು ಬರುತ್ತಿವೆ. ತಕ್ಷಣವೇ ಈ ಸಮಸ್ಯೆಗಳನ್ನು ಸರಿಪಡಿಸಿ ರೈತರಿಗೆ ನ್ಯಾಯ ದೊರಕುವಂತೆ ಕ್ರಮ ಕೈಗೊಳ್ಳಬೇಕೆಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಖೇರ್ಡಾ(ಬಿ) ಗ್ರಾಮಕ್ಕೆ ಭೇಟಿ ನೀಡಿದಾಗ ಈಗಿರುವ

2ನೇಯ ಪುಟನೋಡಿ)

## ಕೇಂದ್ರದ ಮುಂಗಡ ಪತ್ರ ಮಂಡನೆ, ರಾಜ್ಯಕ್ಕೆ ಯಾವುದೇ ಘೋಷಣೆ ಇಲ್ಲ: ಕರ್ನಾಟಕಕ್ಕೆ ದೊಡ್ಡ ಅನ್ಯಾಯ, ನಿರಾಶದಾಯಕ-ದೂರದೃಷ್ಟಿ ಇಲ್ಲದ ಬಜೆಟ್ -ಸಿದ್ದರಾಮಯ್ಯ




ಕಲಬುರಗಿ,ಜ.2.ಕೇಂದ್ರಸರ್ಕರವು ತನ್ನ 2026-27ನೇ ಸಾಲಿನ ಮುಂಗಡ ಪತ್ರ ಭಾನುವಾರ ಮಂಡಿಸಿದ್ದು, ರಾಜ್ಯಕ್ಕೆ ನ್ಯಾಯ ದೊರಕಿಸುವಂತಹ ಯಾವುದೇ ಘೋಷಣೆ ಮಾಡದೆ ಇರುವ ನಿರಾಶದಾಯಕ ಮತ್ತು ದೂರದೃಷ್ಟಿ ಇಲ್ಲದ ಬಜೆಟ್ ಇದಾಗಿದೆ. ಕರ್ನಾಟಕ ರಾಜ್ಯಕ್ಕೆ ಬಹುದೊಡ್ಡ ಅನ್ಯಾಯ ಮಾಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ರವಿವಾರ ಕಲಬುರಗಿ ವಿಮಾನ ನಿಲ್ದಾಣದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಹಣಕಾಸು ಖಾತೆ ಸಚಿವೆ ನಿರ್ಮಲಾ ಸೀತಾರಾಮನ್ ಅವರು 13ನೇ ಬಾರಿಗೆ ಆಯವ್ಯಯ ಮಂಡಿಸಿದ್ದಾರೆ. ರಾಜ್ಯಕ್ಕೆ ಒಂದು ಯೋಜನೆಗಳಿಲ್ಲ. ಬರೀ ಹೇಳಿಕೆಗಳಿಂದ ಕೂಡಿದ ಬಜೆಟ್ ಇದಾಗಿದೆ. ರಾಜ್ಯಕ್ಕೆ ಏನೇನೂ ಕೊಟ್ಟಿಲ್ಲ. ಬೆಂಗಳೂರು-ಹೈದ್ರಾಬಾದ್, ಬೆಂಗಳೂರು-ಚೆನ್ನೈ ಹೈಸ್ಪೀಡ್ ರೈಲು ಕೊಟ್ಟಿದ್ದಾರೆ. ಆದರೆ ಇದರಿಂದ ನಮಗಿಂತ ಆಂದ್ರಪ್ರದೇಶ ಹಾಗೂ ತಮಿಳುನಾಡಿನವರಿಗೆ ಅನುಕೂಲ ಆಗುತ್ತದೆ. ಬೆಂಗಳೂರು-ಮುಂಬೈ, ಬೆಂಗಳೂರು-ಪುಣೆ, ಬೆಂಗಳೂರು-ಮಂಗಳೂರು ಹೈಸ್ಪೀಡ್ ರೈಲು ನೀಡಲು ಬೇಡಿಕೆ ಸಲ್ಲಿಸಲಾಗಿತ್ತು. ಅದಕ್ಕೆ ಕೇಂದ್ರ ಸರ್ಕಾರ ಸ್ಪಂದಿಸಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಕಳೆದ 2025-26ನೇ ಸಾಲಿನ ಕೇಂದ್ರದ ಆಯವ್ಯಯದಲ್ಲಿ 50,65,345 ಕೋಟಿ ರೂ. ಮೊತ್ತದ ಬಜೆಟ್ ಮಂಡಿಸಿದ್ದರು ಅದು ಪರಿಷ್ಕೃತಗೊಂಡು 49,64,842 ಕೋಟಿ ರೂ. ಮೀಸಲಾಗಿದೆ.

2ನೇಯ ಪುಟನೋಡಿ)

## ಕೊಪ್ಪಳ ಎಂ.ಹೆಚ್.ಪಿ.ಎಸ್ ಶಾಲೆಯಲ್ಲಿ ಸ್ಪರ್ಶ್ ಕುಷ್ಠರೋಗ ಜಾಗೃತಿ ಅಭಿಯಾನ



ಕೊಪ್ಪಳ ಫೆಬ್ರುವರಿ 02 : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿಗಳ ಕಛೇರಿ, ತಾಲೂಕಾ ಆರೋಗ್ಯಾಧಿಕಾರಿಗಳ ಕಛೇರಿ, ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಶಾಸಕರ ಸರಕಾರಿ ಮಾದರಿಯ ಹಿರಿಯ ಪ್ರಾಥಮಿಕ ಶಾಲೆ, ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ಸೋಮವಾರ ಶಾಲಾ ಆವರಣದಲ್ಲಿ “ಸ್ಪರ್ಶ್ ಕುಷ್ಠರೋಗ ಜಾಗೃತಿ ಅಭಿಯಾನ-2026”ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು.

ಕೊಪ್ಪಳ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಮಹೇಶ ಉಮಚಗಿ ಅವರು ಕಾರ್ಯಕ್ರಮ ಕುರಿತು ಮಾತನಾಡಿ, “ತಾರತಮ್ಯವನ್ನು ಕೊನೆಗೊಳಿಸುವುದು ಘನತೆಯನ್ನು ಕಾಪಾಡುವುದು”ಎಂಬ ಈ ವರ್ಷದ ಘೋಷವಾಕ್ಯದೊಂದಿಗೆ ಕಾರ್ಯಕ್ರಮ ಆಚರಿಸಲಾಗುತ್ತದೆ. ಜನವರಿ 30 ರಿಂದ ಫೆಬ್ರವರಿ 13 ರವರೆಗೆ “ಸ್ಪರ್ಶ್ ಕುಷ್ಠರೋಗ ಜಾಗೃತಿ ಅಭಿಯಾನ ಕಾರ್ಯಕ್ರಮ-2026” ಹಮ್ಮಿಕೊಳ್ಳಲಾಗಿದೆ. ಇದರ ಉದ್ದೇಶ ಪ್ರತಿಯೊಬ್ಬರಿಗೂ ಕುಷ್ಠರೋಗದ ಬಗ್ಗೆ ಅರಿವು ಮೂಡಿಸಿ, ಶೀಘ್ರ ಪತ್ತೆ ತ್ವರಿತ ಚಿಕಿತ್ಸೆ ಪಡೆದುಕೊಳ್ಳುವುದು ಹಾಗೂ ಸಾಮಾಜಿಕ ಕಳಂಕದಿಂದ ಹೊರಬರುವುದು. ಇದು ಮೈಕೊಬ್ಯಾಕ್ಟೀರಿಯಾ ಲೆಪ್ರೈ ಎಂಬ ಸುಕ್ಷ್ಮಾಣುವಿನಿಂದ ಹರಡುತ್ತದೆ. ರೋಗಿಯು ಕೆಮ್ಮಿದಾಗ ಮತ್ತು ಸೀನಿದಾಗ ಗಾಳಿಯಲ್ಲಿ ಸೇರಿಕೊಂಡು ಒಬ್ಬರಿಂದ ಇನ್ನೊಬ್ಬರಿಗೆ ಹರುಡುತ್ತದೆ. ರೋಗದ ಲಕ್ಷಣಗಳು ಚರ್ಮದ ಮೇಲೆ ಯಾವುದೇ ತಿಳಿಬಿಳಿ, ತಾಮ್ರ ಬಣ್ಣದ ಸ್ಪರ್ಶ ಜ್ಞಾನವಿಲ್ಲದ ಮಚ್ಚೆ, ದಪ್ಪನಾದ ಎಣ್ಣೆ ಪಸರಿಸಿದಂತಹ ಹೊಳೆಯುವ ಚರ್ಮ, ದೇಹದ ಮೇಲಿನ ಗಂಟುಗಳು, ಕಣ್ಣಿನ ರೆಪ್ಪೆಗಳನ್ನು ಮುಚ್ಚುವಲ್ಲಿ ತೊಂದರೆ, ಕೈ ಅಥವಾ ಕಾಲುಗಳಲ್ಲಿ

2ನೇಯ ಪುಟನೋಡಿ)

## ಸ್ಪರ್ಶ್ ಕುಷ್ಠರೋಗ ಅರಿವು ಆಂದೋಲನ ಕಾರ್ಯಾಕ್ರಮ



ಬೀದರ, ಫೆಬ್ರವರಿ.02 -ಬೀದರ ನಗರದ ಹಿಂದುಳಿದ ವರ್ಗಗಳ ಬಾಲಕಿಯರ ವಸತಿ ನಿಲಯದಲ್ಲಿ ಇತ್ತೀಚಿಗೆ ಹಮ್ಮಿಕೊಂಡಿದ್ದ ಸ್ಪರ್ಶ್ ಕುಷ್ಠರೋಗ ಅರಿವು ಆಂದೋಲನ ಕಾರ್ಯಕ್ರಮಕ್ಕೆ ಬೀದರ ತಹಸೀಲ್ದಾರ ರವೀಂದ್ರ ದಾಮಾ ಅವರು ಉದ್ಘಾಟಿಸಿದರು.

ನಂತರ ಮಾತನಾಡಿ, ಆರೋಗ್ಯ ಮತ್ತು ಶಿಕ್ಷಣ ಒಂದು ನಾಣೆದ ಎರಡು ಮುಖಗಳಿದ್ದಂತೆ ಮಕ್ಕಳು ತಮ್ಮ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಿ ಯಾವುದೇ ತರಹದ ರೋಗ ಲಕ್ಷಣಗಳನ್ನು ಕಂಡುಬಂದಲ್ಲಿ ತಮ್ಮ ವಸತಿ ಶಾಲೆಯ ಮೇಲ್ವಿಚಾಕರಿಗೆ ತಕ್ಷಣ ತಿಳಿಸಬೇಕು ಹಾಗೂ ಆರೋಗ್ಯ ಇಲಾಖೆಯ ವೈದ್ಯಾಧಿಕಾರಿಗಳು ಮತ್ತು ಸಿಬ್ಬಂದಿಗಳು ಬಂದಾಗ ಅವರನ್ನು ಸಹಕರಿಸಿ ಪರೀಕ್ಷಿಸಿಕೋಳ್ಳಬೇಕು ಮತ್ತು ಸ್ವಚ್ಛತೆಯ ಬಗ್ಗೆ ಗಮನಹರಿಸಬೇಕು. ಇವಾಗ ದಿನಾಂಕ:-30-01-2026 ರಿಂದ 13-02-2026 ರವರೆಗೆ

2ನೇಯ ಪುಟನೋಡಿ)

### ಬೀದರನಲ್ಲಿ ಪ್ರಥಮ ಅಂತರಾಷ್ಟ್ರೀಯ ಪ್ರಯೋಗಾಲಯ ತಂತ್ರಜ್ಞರ ದಿನಾಚರಣೆ, ಅಭಿನಂದನಾ ಸಮಾರಂಭ

## ಪ್ರಯೋಗಾಲಯ ತಂತ್ರಜ್ಞರ ಸೇವೆ ಅದಮ್ಯ ಆದರೆ ಅಗೋಚರ: ಕೃಷ್ಣಾಚಾರಿ



ಅಶೋಕಾ ಕೋಟೆ ವಾರ್ತೆ

ಬೀದರ: ಫೆ. 02-ಕೋವಿಡ್ ಸಂದರ್ಭದಲ್ಲಿ ಪ್ರಯೋಗಾಲಯ ತಂತ್ರಜ್ಞರ ಸೇವೆ ಅದಮ್ಯವಾಗಿತ್ತು. ಆದರೆ ಅಗೋಚರವಾಗಿದೆ. ತಂತ್ರಜ್ಞರಿಗೂ ತಮ್ಮದೇ ಆದ ಹಲವು ಸಮಸ್ಯೆಗಳಿವೆ. ಅವುಗಳನ್ನು ಈಡೇರಿಸಲು ಐಕ್ಯತೆಯಿಂದ ಹೋರಾಡಬೇಕಾಗಿದೆ ಎಂದು ಕರ್ನಾಟಕ ರಾಜ್ಯ ಸರ್ಕಾರಿ ವೈದ್ಯಕೀಯ ಶಿಕ್ಷಣ ಇಲಾಖೆ ಪ್ರಯೋಗಶಾಲಾ ತಾಂತ್ರಿಕ ಅಧಿಕಾರಿಗಳ ಸಂಘದ ರಾಜ್ಯಾಧ್ಯಕ್ಷ ವಿ.ಬಿ.ಕೃಷ್ಣಾಚಾರಿ ತಿಳಿಸಿದರು.

ಕರ್ನಾಟಕ ರಾಜ್ಯ ಸರ್ಕಾರಿ ವೈದ್ಯಕೀಯ ಶಿಕ್ಷಣ ಇಲಾಖೆ ಪ್ರಯೋಗಶಾಲಾ ತಾಂತ್ರಿಕ ಅಧಿಕಾರಿಗಳ ಸಂಘ ಬೆಂಗಳೂರು ಜಿಲ್ಲಾ ಘಟಕ ಬೀದರ ವತಿಯಿಂದ ಚಿಕ್ಕಪೇಟ್ ಸಮೀಪದ ಹೆಬ್ಬಾಳೆ ಕನ್ವೇನ್‌ಶನ್ ಹಾಲ್‌ನಲ್ಲಿ ಆಯೋಜಿಸಿದ ಅಂತರಾಷ್ಟ್ರೀಯ ಪ್ರಯೋಗಾಲಯ ತಂತ್ರಜ್ಞರ ದಿನಾಚರಣೆ ಹಾಗೂ ಅಭಿನಂದನಾ ಸಮಾರಂಭ ಉದ್ದೇಶಿಸಿ ಮಾತನಾಡಿದರು.

ಈ ಹಿಂದೆ ನಮ್ಮಲ್ಲಿ ಒಗ್ಗಟ್ಟು ಇರಲಿಲ್ಲ. ಸಂಘಟನೆಯೂ ಇರಲಿಲ್ಲ. ನಮಗೆ ಇದುವರೆಗೆ ಕೆಜಿಐಡಿ ಹಾಗೂ ಜಿಪಿಎಫ್

2ನೇಯ ಪುಟನೋಡಿ)

### ಅಖಿಲ ಭಾರತ ಕಾರ್ಮಿಕ MNREGA ಮಾನಿಟರಿಂಗ್

## ಸಮಿತಿಯ ಕರ್ನಾಟಕ ರಾಜ್ಯಾಧ್ಯಕ್ಷರಾಗಿ ಸೋಮಶೇಖರ್ ಗೌಡಪ್ಪನೌರ್ ನೇಮಕ



ನವದೆಹಲಿ ಫೇ 2 : ಅಖಿಲ ಭಾರತ ಕಾರ್ಮಿಕ MNREGA ಮಾನಿಟರಿಂಗ್ ಸಮಿತಿಯು ಕರ್ನಾಟಕ ರಾಜ್ಯ ಘಟಕದ ಅಧ್ಯಕ್ಷರಾಗಿ ಶ್ರೀ ಸೋಮಶೇಖರ್ ಗೌಡಪ್ಪನೌರ್ ಅವರನ್ನು ನೇಮಕ ಮಾಡಲಾಗಿದೆ. ಈ ನೇಮಕಾತಿ ಸಮಾರಂಭವು ನವದೆಹಲಿ ರಫಿ ಮಾರ್ಗದಲ್ಲಿರುವ ಸಂವಿಧಾನ ಕ್ಲಬ್ ಆಫ್ ಇಂಡಿಯಾದಲ್ಲಿ ನಡೆಯಿತು.

ಸಮಾರಂಭದಲ್ಲಿ ಸಮಿತಿಯ ರಾಷ್ಟ್ರೀಯ ಅಧ್ಯಕ್ಷರಾದ ಶ್ರೀ ಪ್ರಮೋದ್ ತ್ಯಾಗಿ ಅವರು ಶ್ರೀ ಸೋಮಶೇಖರ್ ಗೌಡಪ್ಪನೌರ್ ಅವರಿಗೆ ನೇಮಕಾತಿ ಪತ್ರವನ್ನು ಅಧಿಕೃತವಾಗಿ ಹಸ್ತಾಂತರಿಸಿದರು. ಈ

2ನೇಯ ಪುಟನೋಡಿ)

(ಒಂದನೇ ಪುಟದಿಂದ)

## ಸ್ಪರ್ಶ್ ಕುಷ್ಠರೋಗ ಅರಿವು ಆಂದೋಲನ ಕಾರ್ಯಕ್ರಮ

ಸ್ಪರ್ಶ ಕುಷ್ಠ ರೋಗ ಅರಿವು ಆಂದೋಲನ ಕಾರ್ಯಕ್ರಮವನ್ನುಹಮ್ಮಿಕೊಂಡಿದ್ದು,ಕುಷ್ಠರೋಗದ ಲಕ್ಷಣಗಳನ್ನುಕಂಡುಬಂದಲ್ಲಿ ಹೆದರದೆ ಪರೀಕ್ಷಿಸಿಕೊಳ್ಳಿ ಒಂದು ವೇಳೆ ರೋಗ ದೃಡಪಟ್ಟಲ್ಲಿ ಬಹು ಔಷಧಿಯಿಂದ ಸಂಪೂರ್ಣವಾಗಿ ಗುಣಪಡಿಸಬಹುದು ಎಂದು ಹೇಳಿದರು.

ತಾಲೂಕಾ ಆರೋಗ್ಯ ಅಧಿಕಾರಿ ಡಾ:ಸಂಗಾರೆಡ್ಡಿ ಮಾತನಾಡಿ, ಕುಷ್ಠ ರೋಗವು ಒಂದು ಸಾಂಕ್ರಾಮಿಕ ರೋಗವಾಗಿದ್ದು ತಮ್ಮ ದೇಹದ ಮೇಲೆ ತಿಳಿ ಬಿಳಿ ತಾಮ್ರ ಬಣ್ಣದ ನೋವು ನವೆ ಸ್ಪರ್ಶ ಜ್ಞಾನ ಇಲ್ಲದ ಮಚ್ಚೆಗಳು ಕಂಡುಬಂದಲ್ಲಿ ತಮ್ಮ ಸಮೀಪದ ಸರ್ಕಾರಿ ಆಸ್ಪತ್ರೆಯಲ್ಲಿ ಪರೀಕ್ಷಿಸಿಕೋಳ್ಳಬೇಕು ಹಾಗೂ ಸಿಬ್ಬಂದಿಗಳು ರೋಗದ ಬಗ್ಗೆ ಸಾರ್ವಜನಿಕರಿಗೆ ಸೂಕ್ತ ತಿಳುವಳಿಕೆ ನೀಡಿ ಪ್ರಾರಂಭದ ಹಂತದಲ್ಲೆ ರೋಗ ಪತ್ತೆ ಮಾಡಿಬಹು ಔಷದಿ ಚಿಕಿತ್ಸೆ, ಪಡೆಯುವುದರಿಂದ ಸಂಪೂರ್ಣವಾಗಿ ಗುಣ ಮುಖರಾಗುವುದಲ್ಲದೆ, ಮುಂದಾಗಬಹುದಾದ ವಿಕಲಾಂಗತೆಯನ್ನು ಕೂಡ ತಡೆಗಟ್ಟಬಹುದು, ಗಾಂಧೀಜಿಯವರ ಕನಸು "ಕುಷ್ಠರೋಗ ಮುಕ್ತ ಭಾರತವನ್ನು" ನಿರ್ಮಿಸಬಹುದಾಗಿದೆ ಎಂದು ಹೇಳಿದರು.

ಓಂಕಾರ ಮಲ್ಲಿಗೆ ತಾಲೂ ಕಾಆರೋಗ್ಯ ಶಿಕ್ಷಣಾಧಿಕಾರಿಗಳು ರವರು ಮಕ್ಕಳಿಗೆ ಪ್ರತಿಜ್ಞೆ ಭೋಧಿಸಿದರು.

ಈ ಕಾರ್ಯಕ್ರಮದಲ್ಲಿ ಸಂಗೀತಾ ಬಿರಾದರ ತಾಲೂಕಾ ಹಿಂದುಳಿದವರ್ಗಗಳ ಕಲ್ಯಾಣಾಧಿಕಾರಿಗಳು, ಅಂಬಿಕಾ ನಿಲಯ ಮೇಲ್ವಿಚಾರಕರು, ಹಿರಿಯ ಆರೋಗ್ಯನೀರಿಕ್ಷಣಾಧಿಕಾರಿ ಅಬ್ರಾಹಂಧನರಾಜ ಮತ್ತು ವೀರಶೆಟ್ಟಿ ಚನ್ನಶೆಟ್ಟಿ, ಬಸವರಾಜ, ರಾಜಕುಮಾರ ಎ.ಎಸ್.ಓ ಹಾಗೂ ರೇವಣಪ್ಪಾ ತಿಮಗೊಂಡಿ, ಅಬ್ದುಲ ಹೈ, ಅಫಜಲೋದ್ದಿನ್, ಸೇರಿದಂತೆ ಮಕ್ಕಳು ಸೇರಿದಂತೆ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ತಂತ್ರಜ್ಞರ ಸೇವೆ ಅದಮ್ಯ ಆದರೆ ಅಗೋಚರ: ಕೃಷ್ಣಾಚಾರಿ

ವ್ಯವಸ್ಥೆ ಕೂಡ ಇಲ್ಲ. ಆದ್ದರಿಂದ ನಮಗೆ ಜಿಂದಾಲ್ ಕಂಪನಿಯ ನೌಕರರು ಎಂದು ಅಣಕಿಸುತಿದ್ದಾರೆ. ಈ ಕಾರಣಕ್ಕಾಗಿ ಸಂಘವನ್ನುಹುಟ್ಟುಹಾಕಿ ಅದರ ಮೂಲಕವೇ ನಮ್ಮ ಬೇಕು ಬೇಡಗಳನ್ನು ಸರ್ಕಾರದ ಮುಂದಿಡಲು ಪ್ರಯತ್ನಿಸಬೇಕಾಗಿದೆ. ಸರ್ಕಾರ ಇನ್ನೂ ಹೆಚ್ಚಿನ ಪ್ರಯೋಗಾಲಯ ತಂತ್ರಜ್ಞರ ನೇಮಕ ಮಾಡಿಕೊಳ್ಳಬೇಕು. ಕೋವಿಡ್ ಸಂದರ್ಭದಲ್ಲಿ ಸಲ್ಲಿಸಿದ ಸೇವೆ ಆಧರಿಸಿ ಕೋವಿಡ್ ಭತ್ಯೆ ನೀಡಬೇಕು. ಕೆಜಿಐಡಿ ಹಾಗೂ ಜಿಪಿಎಫ್ ವ್ಯವಸ್ಥೆ ಮಾಡಬೇಕು. ಸ್ಟಾಫ್ ನರ್ಸ್‌ಗಳಿಗೆ ನೀಡುವಂತೆ ತಂತ್ರಜ್ಞರಿಗೂ ಪರಿಹಾರ ರಜೆ ಜೊತೆಗೆ 15 ದಿವಸಗಳ ಪರಿಹಾರ ವೇತನ ಹೆಚ್ಚುವರಿಯಾಗಿ ನೀಡಬೇಕು. ಕರ್ತವ್ಯದ ಸಂಧ್ಯಾಕಾಲದಲ್ಲಿ ತಂತ್ರಜ್ಞರಿಗೂ ನಿವೃತ್ತಿ ವೇತನ ನೀಡುವಂತೆ ಸರ್ಕಾರದ ಮೇಲೆ ಒತ್ತಡ ಹೇರುವ ಅವಶ್ಯಕತೆ ಇದೆ. ಒಗ್ಗಟ್ಟಿನಿಂದ ಸಂಘವನ್ನು ಮುನ್ನಡೆಸೋಣ. ಬೀದರನಲ್ಲಿ ಇಂದು ಪ್ರಪ್ರಥಮ ಪ್ರಯೋಗಾಲಯ ತಂತ್ರಜ್ಞರ ದಿನಾಚರಣೆ ಆಯೋಜಿಸಿದ್ದು ಖುಷಿ ತಂದಿದೆ. ದೇಶದ ಬೆನ್ನೆಲುಬು ರೈತನಾದರೆ, ರೈತರಂತಹ ಬಡರೋಗಿಗಳ ಬೆನ್ನೆಲುಬು ತಂತ್ರಜ್ಞರಾಗಿದ್ದಾರೆ ಎಂದರು. ಬ್ರಿಮ್ಸ್ ಬೋಧಕ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕರಾದ ಡಾ. ಶಿವಯೋಗ ಬಾಳಿ ಮಾತನಾಡಿ ತಂತ್ರಜ್ಞರು ಪ್ರಯೋಗಾಲಯಕ್ಕೆ ಬಂದ ರೋಗಿಗಳಿಗೆ ಪ್ರೀತಿಯಿಂದ ಜವಾಬ್ದಾರಿಯಿಂದ ಪರೀಕ್ಷಿಸುವುದು ನಮ್ಮ ಕರ್ತವ್ಯ. ಜೊತೆಗೆ ಮುಂಜಾಗ್ರತಾ ಕ್ರಮವೂ ಅನುಸರಿಸಬೇಕು. ಸ್ವಚ್ಛತೆ ಮತ್ತು ಶಿಸ್ತು ನಮ್ಮ ಮೂಲಮಂತ್ರವಾಗಬೇಕು. ನಾವು ಶಿಸ್ತು ಕಾಪಾಡಿದರೆ ಮುಂದೆ ನಮ್ಮ ಮಕ್ಕಳು ಅದನ್ನು ಅನುಸರಿಸುತ್ತಾರೆ. ಆದ್ದರಿಂದ ಐಕ್ಯತೆಯಿಂದ ನಿಮ್ಮ ಹಕ್ಕುಗಳಿಗಾಗಿ ಸಮಯ ಕೊಟ್ಟು ಹೋರಾಡಿ ಎಂದರು. ಪ್ರಯೋಗಾಲಯ ತಂತ್ರಜ್ಞ ಅರವಿಂದ ಕುಲಕರ್ಣಿ ಮಾತನಾಡಿ ತಂತ್ರಜ್ಞರು ಮೌನ ವೀರರು. ಆಯುಧವಿಲ್ಲದೆ ರೋಗಿಯ ರೋಗಗಳನ್ನು ಹೋರಾಡಲು ಸತತ ಪ್ರಯತ್ನಶೀಲರು. ಕೈಯಲ್ಲಿ ಸಾಧನ, ಮನದಲ್ಲಿ ಕರ್ತವ್ಯ ನಿರ್ವಹಿಸುವ ಮನೋಭಾವ. ಇಂತಹ ತಂತ್ರಜ್ಞರ ಸೇವೆ ಅಗಾಧವಾಗಿದೆ ಎಂದರು. ಪ್ರಯೋಗಾಲಯ ತಂತ್ರಜ್ಞರಾದ ಡಾ. ರಾಜಕುಮಾರ ಹೆಬ್ಬಾಳೆ ಮಾತನಾಡಿ ಬೀದರನಲ್ಲಿ ಪ್ರಯೋಗಾಲಯ ತಂತ್ರಜ್ಞರ ಪ್ರಥಮ ರಾಜ್ಯ ಸಮ್ಮೇಳನ ಆಯೋಜಿಸಲು ನಿರ್ಧರಿಸಲಾಗಿದೆ. ಹೀಗಾಗಿ ರಾಜ್ಯ ಸಂಘಕ್ಕೆ ಎಲ್ಲಾ ರೀತಿಯ ಸಹಕಾರ ನೀಡಲಾಗುವುದು ಎಂದು ರಾಜ್ಯಾಧ್ಯಕ್ಷ ವಿ.ಬಿ.ಕೃಷ್ಣಾಚಾರಿ ಅವರಿಗೆ ಹೆಬ್ಬಾಳೆ ಭರವಸೆ ನೀಡಿದರು. ಇದೇ ವೇಳೆ ಕರ್ನಾಟಕ ರಾಜ್ಯ ಸರ್ಕಾರಿ ವೈದ್ಯಕೀಯ ಶಿಕ್ಷಣ ಇಲಾಖೆ ಪ್ರಯೋಗಶಾಲಾ ತಾಂತ್ರಿಕ ಅಧಿಕಾರಿಗಳ ಸಂಘದ ರಾಜ್ಯಾಧ್ಯಕ್ಷ ವಿ.ಬಿ.ಕೃಷ್ಣಾಚಾರಿ ಅವರನ್ನು ಸನ್ಮಾನಿಸಿ ಅಭಿನಂದಿಸಲಾಯಿತು. ಪ್ರಿಯಂಕಾ ಗುರುದೇವ ವಂದೇ ಮಾತರಂ ಹಾಡಿದರು. ರೇಣುಕಾ ರಾಜಕುಮಾರ ಸ್ವಾಗತ ಗೀತೆ ಹಾಡಿದರು. ಭಾರತಿಬಾಯಿ ಸ್ವಾಗತಿಸಿದರು. ಡಾ. ರಾಜಕುಮಾರ ಹೆಬ್ಬಾಳೆ ನಿರೂಪಿಸಿದರು. ಗುರುನಾಥ ಉದಗಿರೆ ವಂದಿಸಿದರು. ವೇದಿಕೆ ಮೇಲೆ ಬೆಂಗಳೂರಿನ ತಂತ್ರಜ್ಞರಾದ ಶ್ರೀಮತಿ ಗೀತಾ, ಉಮಾ ಪಾಟೀಲ, ಕರ್ನಾಟಕ ರಾಜ್ಯ ಸರ್ಕಾರಿ ವೈದ್ಯಕೀಯ ಶಿಕ್ಷಣ ಇಲಾಖೆ ಪ್ರಯೋಗಶಾಲಾ ತಾಂತ್ರಿಕ ಅಧಿಕಾರಿಗಳ ಸಂಘದ ನಿರ್ದೇಶಕ ಸಂತೋಷರೆಡ್ಡಿ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಸಂಘದ ಸದಸ್ಯರಾದ ಗಿರಿರಾಜ್ ಸ್ವಾಮಿ, ಶಿವು ಮುತ್ತತಿ, ಶಿವರಾಜಪ್ಪ, ಉದಯ ಚಿಮಕೊಡೆ, ವಿಷ್ಣುವರ್ಧನ ರೆಡ್ಡಿ, ಕನ್ಯಾಕುಮಾರಿ, ಅಮೆರಖಾನ್, ಶಿವಕುಮಾರ, ಶಕುಂತಲಾ, ರಾಜಕುಮಾರ ಕುಂಬಾರ, ರವಿ ರಾಠೋಡ್, ಮಹಾನಂದ, ಧನರಾಜ ನಾಗಮಾರಪಳ್ಳಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ನಿರಾಶದಾಯಕ-ದೂರದೃಷ್ಟಿ ಇಲ್ಲದ ಬಜೆಟ್ -ಸಿದ್ದರಾಮಯ್ಯ

ಸುಮಾರು 1 ಲಕ್ಷ ಕೋಟಿಗೂ ಕಡಿಮೆ ಗಾತ್ರಕ್ಕೆ ಪರಿಷ್ಕರಿಸಿದ್ದಾರೆ. 2026-27ನೇ ಸಾಲಿನ ಆಯವ್ಯಯ ನೋಡುವುದಾದರೆ ಕಳೆದ ವರ್ಷಕ್ಕಿಂತ ಶೇ.5.56 ರಷ್ಟು ಹೆಚ್ಚಿನ ಗಾತ್ರದೊಂದಿಗೆ 53,47,315 ಕೋಟಿ ರೂ. ಮೊತ್ತದ ಬಜೆಟ್ ಮಂಡಿಸಿದ್ದರು, ರಾಜ್ಯಗಳಿಗೆ ನ್ಯಾಯ ದೊರಕಿಸಲು ಸಾಧ್ಯವಾಗಿಲ್ಲ ಎಂದು ಮುಖ್ಯಮಂತ್ರಿ ಬಜೆಟ್ ಕುರಿತು ಪ್ರತಿಕ್ರಿಯೆಸಿದರು.

ಕೇಂದ್ರ ಸರ್ಕಾರ ವಿಕಸಿತ ಭಾರತದ ಬಗ್ಗೆ ಬಹಳ ಮಾತಾನಾಡುತ್ತದೆ. ಇದೆಲ್ಲಾ ಮಾತಿನಲ್ಲಿ ಇದೆಯೇ ಹೊರತು ಕೃತಿಗೆ ಇಳಿದಿಲ್ಲ. ನಾವು ನಮ್ಮ ರಾಜ್ಯದ ನೀರಾವರಿ ಯೋಜನೆ ಬಗ್ಗೆ ಕೇಳಿದ್ದೇವು. ಪ್ರಮುಖವಾಗಿ ಕೃಷ್ಣಾ ಮೇಲ್ದಂಡೆ ಯೋಜನೆ ರಾಷ್ಟೀಯ ಯೋಜನೆ ಮಾಡಿ ಎಂದು ಕೇಳಲಾಗಿತ್ತು. 2023-24ನೇ ಸಾಲಿನ ಬಜೆಟ್‌ನಲ್ಲಿ 5,300 ಕೋಟಿ ರೂ. ನೀಡುವುದಾಗಿ ಘೋಷಣೆ ಮಾಡಿದ್ದೀರಿ, ಅದನ್ನಾದರು ಕೊಡಿ ಎಂದು ಕೇಳಿದ್ವಿ ಒಂದು ರೂಪಾಯಿ ಕೊಟ್ಟಿಲ್ಲ. ಗೆಜಟ್ ನೋಟಿಫಿಕೇಷನ್ ಸಹ ಮಾಡಿಲ್ಲ ಎಂದು ತಮ್ಮ ಅಸಮಾಧಾನ ವ್ಯಕ್ತಪಡಿಸಿದರು.

ಮಹಾದಾಯಿ ಯೋಜನೆಗೆ ಪರಿಸರ ಅನುಮತಿ ನೀಡಬಹುದು ಎಂದು ನಿರೀಕ್ಷಿಸಲಾಗಿತ್ತು, ಅದು ಹುಸಿಯಾಗಿದೆ. ಮೇಕೆದಾಟು ಯೋಜನೆಗೆ ತಮಿಳುನಾಡು ಸುಪ್ರೀಂ ಕೋರ್ಟನಲ್ಲಿ ಅರ್ಜಿ ಹಾಕಿದ್ರು. ಅರ್ಜಿ ವಜಾ ಆಗಿದೆ. ಆದ್ರೂ ಮೇಕೆ ದಾಟು ಯೋಜನೆಗೆ ಹಸಿರು ನಿಶಾನೆ ತೋರುತ್ತಿಲ್ಲ. ಮೇಕೆದಾಟು ತಮಿಳುನಾಡಿನಲ್ಲಿ ಅಲ್ಲ ಕರ್ನಾಟಕದಲ್ಲಿ ಕಟ್ಟೋದು. ಮಳೆಗಾಲ ಸರಿಯಾಗಿ ಆದ್ರೆ 177.25 ಟಿ.ಎಂ.ಸಿ ಕೊಡಬೇಕು ಅಂತ ತೀರ್ಪು ಇದೆ. ಈ ವರ್ಷ ಅದರ ಎರಡರಷ್ಟು ನೀರು ಬಿಟ್ಟಿದ್ದೀವಿ. ಇದರಿಂದ ತಮಿಳುನಾಡಿನವರಿಗೆ ಏನು ತೊಂದರೆ ಆಗಲ್ಲ. ಕ್ಲಿಯರ್ ಮಾಡಿಕೊಡಿ ಎಂದು ಒತ್ತಾಯ ಮಾಡಿದ್ವಿ. ಇದುವರೆಗೂ ಕ್ಲಿಯರೆನ್ಸ್ ಕೊಟ್ಟಿಲ್ಲ. ಇದರಿಂದ ಉತ್ತರ ಕರ್ನಾಟಕಕ್ಕೆ ಮತ್ತು ಕರ್ನಾಟಕಕ್ಕೆ ಅನ್ಯಾಯವಾಗಿದೆ ಎಂದು ಪುನರುಚ್ಚಿಸಿದರು.

ನಮ್ಮ ಮೆಟ್ರೋಗೆ ನೆರವು ಕೊಟ್ಟಿಲ್ಲ. ರಾಯಚೂರು ಏಮ್ಸ್ ಬಗ್ಗೆ ಯಾವುದೇ ಚಕಾರ ಎತ್ತಿಲ್ಲ. 371ಜೆ ಅನ್ವಯ ವಿಶೇಷ ಮೀಸಲಾತಿ ಸೌಲಭ್ಯ ಪಡೆದಿರುವ ಹಿಂದುಳಿದ ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ಕೆ.ಕೆ. ಆರ್.ಡಿ.ಬಿ ಮಂಡಳಿಗೆ ನಮ್ಮ ಸರ್ಕಾರ ಪ್ರತಿ ವರ್ಷ 5,000 ಕೋಟಿ ರೂ. ನೀಡುತ್ತಿದ್ದು, ಮ್ಯಾಚಿಂಗ್ ಗ್ರಾಂಟ್ ನೀಡುವಂತೆ ಕೋರಲಾಗಿತ್ತು. ಅದು ಸಹ ಕೊಟ್ಟಿಲ್ಲ. ಇದರ ಬಗ್ಗೆ ಒಂದೇ ಒಂದು ಶಬ್ದ ಇಲ್ಲ. ನಾವು ಅಧಿಕಾರಕ್ಕೆ ಬಂದ ಮೇಲೆ ಕಳೆದ 2.5 ವರ್ಷದಲ್ಲಿ 13 ಸಾವಿರ ಕೋಟಿ ರೂ. ಕಲ್ಯಾಣ ಕರ್ನಾಟಕ ಅಭಿವೃದ್ಧಿಗೆ ಕೊಟ್ಟಿದ್ದೇವೆ ಎಂದರು.

16ನೇ ಹಣಕಾಸು ಅನುದಾನದ ನೀಡುವಲ್ಲಿಯೂ ತಾರತಮ್ಯ: 16ನೇ ಹಣಕಾಸು ಆಯೋಗವು ರಾಜ್ಯಕ್ಕೆ ಶೇ.4.131ರಷ್ಟು ಪಾಲು ಹಂಚಿಕೆ ಮಾಡಲು ಶಿಫಾರಸ್ಸು ಮಾಡಿರುವುದು ಸಹ ರಾಜ್ಯಕ್ಕೆ ಅನ್ಯಾಯವಾದಂತಾಗಿದೆ. 14ನೇ ಹಣಕಾಸಿನ ಆಯೋಗದ ವರದಿಯಲ್ಲಿ ಕರ್ನಾಟಕಕ್ಕೆ ಶೇ.4.71 ತೆರಿಗೆ ಪಾಲು ಸಿಕ್ಕಿತ್ತು. ಆದರೆ 15ನೇ ಹಣಕಾಸು ಆಯೋಗದಲ್ಲಿ ಅದು ಶೇ.3.64ಕ್ಕೆ ಇಳಿದಿದ್ದರಿಂದ ಶೇ.23ರಷ್ಟು ನಷ್ಟವಾಗಿತ್ತು. ಇದು ಪುನರಾವರ್ತನೆ ಆಗಬಾರದೆಂದು 16ನೇ ಹಣಕಾಸು ಶಿಫಾರಸ್ಸು ಮುನ್ನ ಪ್ರಬಲವಾಗಿ ವಾದ ಮಂಡಿಸಿ ಕನಿಷ್ಟ ಪಕ್ಷ 14ನೇ ಹಣಕಾಸಿನ ಆಯೋಗದಕ್ಕಿಂತ ಜಾಸ್ತಿ ಮಾಡಲು ಕೇಳಿದ್ವಿ. ಇಷ್ಟಾದರೂ 16ನೇ ಹಣಕಾಸು ಆಯೋಗದಲ್ಲಿ ಶೇ.4.131 ರಷ್ಟು ಮಾತ್ರ ಕೊಟ್ಟಿದ್ದಾರೆ ಎಂದರು.

ಇನ್ನು ನಗರ ಮತ್ತು ಗ್ರಾಮೀಣ ಸ್ಥಳೀಯ ಸಂಸ್ಥೆಗಳಿಗೆ ಮುಂದಿನ 5 ವರ್ಷಗಳಿಗೆ ಅನುದಾನ ಹಂಚಿಕೆ ಮಾಡಿದ್ದು, ಇದರಲ್ಲಿ ಉತ್ತರ ಪ್ರದೇಶಕ್ಕೆ 1,16,804 ಕೋಟಿ ರೂ., ಮಹಾರಾಷ್ಟ್ರ ರಾಜ್ಯಕ್ಕೆ 79,620 ಕೋಟಿ ರೂ., ಪಶ್ಚಿಮ ಬಂಗಾಲ ರಾಜ್ಯಕ್ಕೆ 50,226 ಕೋಟಿ ರೂ., ಮಧ್ಯಪ್ರದೇಶ ರಾಜ್ಯಕ್ಕೆ 48,049 ಕೋಟಿ ರೂ., ರಾಜಸ್ಥಾನ ರಾಜ್ಯಕ್ಕೆ 44,147 ಕೋಟಿ ರೂ., ಗುಜರಾತ್ ರಾಜ್ಯಕ್ಕೆ 42,566 ಕೋಟಿ ರೂ., ತಮಿಳುನಾಡು ರಾಜ್ಯಕ್ಕೆ 41,999 ಕೋಟಿ ರೂ. ನೀಡಿದರೆ ಕರ್ನಾಟಕಕ್ಕೆ ನೀಡಿರುವುದು 37,372 ಕೋಟಿ ರೂ. ಮಾತ್ರ. ಹೆಚ್ಚಿನ ಅನುದಾನ ಉತ್ತರದ ರಾಜ್ಯಗಳಿಗೆ ನೀಡಲಾಗಿದ್ದು, ದಕ್ಷಿಣದ ರಾಜ್ಯಗಳನ್ನು ಕಡೆಗಣಿಸಲಾಗಿದೆ. ಬೇರೆ ರಾಜ್ಯಗಳಿಗೆ ಅನುದಾನ ಕೊಡಬೇಡಿ ಅನ್ನೋದಿಲ್ಲ, ನಮಗೂ ನ್ಯಾಯ ಕೊಡಿ ಅನ್ನೋದು ನಮ್ಮ ವಾದ. ಬಜೆಟ್ ಮುನ್ನವೆ ಪ್ರಧಾನಮಂತ್ರಿ, ಹಣಕಾಸು ಸಚಿವರನ್ನು ಭೇಟಿಯಾಗಿ ರಾಜ್ಯಕ್ಕೆ ನ್ಯಾಯ ಒದಗಿಸುವಂತೆ ಮನವಿ ಮಾಡಿದ್ದೇ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

5 ಲಕ್ಷ ಕೋಟಿ ತೆರಿಗೆ ಕಟ್ತೇವಿ,ವಾಪಸ್ ಬರೋದು 1 ರೂ.ಗೆ 14 ಪೈಸೆ ಮಾತ್ರ: ದೇಶದಲ್ಲಿ ತಲಾ ಆದಾಯದಲ್ಲಿ ರಾಜ್ಯ ನಂಬರ್-1 ಸ್ಥಾನದಲ್ಲಿದೆ. ಜಿ.ಎಸ್.ಟಿ. ಸಂಗ್ರಹಣೆಯಲ್ಲಿ ದೇಶದಲ್ಲಿಯೇ ನಾವು ದ್ವಿತೀಯ ಸ್ಥಾನದಲ್ಲಿದ್ದೇವೆ. ವಿದೇಶಿ ಬಂಡವಾಳ ಹೂಡಿಕೆಯಲ್ಲಿ ಕರ್ನಾಟಕ ಮೊದಲನೇ ಸ್ಥಾನದಲ್ಲಿದೆ. ವಾರ್ಷಿಕ ಸರಿ ಸುಮಾರು 4.50 ರಿಂದ 5 ಲಕ್ಷ ಕೋಟಿ ರೂ. ತೆರಿಗೆ ಕೇಂದ್ರ ಸರ್ಕಾರ-ಕ್ಕೆ ನೀಡುತ್ತೇವೆ. ಆದರೆ ಇದರಲ್ಲಿ ನಮಗೆ ಬರೋದು ಒಂದು ರೂಪಾಯಿಗೆ ಕೇವಲ 14 ಪೈಸೆ ಮಾತ್ರ. ಉಳಿದಿದ್ದೆಲ್ಲ ಕೇಂದ್ರ ಸರಕಾರವೇ ಬಳಸಿಕೊಳ್ಳುತ್ತಿದೆ. ಇದು ಕೇಂದ್ರದಿಂದ ಮಾಡುತ್ತಿರುವ ಅನ್ಯಾಯ. ಇನ್ನು ಕೇಂದ್ರ ಪುರಸ್ಕೃತ ಯೋಜನೆಗಳಿಗೆ ಹಿಂದೆಲ್ಲ ಕೇಂದ್ರ ಸರ್ಕಾರ ಶೇ.75 ಅನುದಾನ ನೀಡಿದರೆ ರಾಜ್ಯಗಳು ಶೇ.25 ಭರಿಸುತ್ತಿದ್ದವು. ಇದೀಗ ಈ ಅನುಪಾತ ಶೇ.60-40ಗೆ ಇಳಿಸಲಾಗಿದೆ. ಜಲ ಜೀವನ್ ಮಿಷನ್‌ದಲ್ಲಂತೂ 50-50 ಅನುಪಾತ ನಿಗದಿಪಡಿಸಿದೆ. ನಿಷ್ಠಾಗಿಯೂಕಳೆದ ಮೂರು ಆರ್ಥಿಕ ವರ್ಷದಲ್ಲಿ ಜೆ.ಜೆ.ಎಂ. ಯೋಜನೆಯಡಿ ರಾಜ್ಯಕ್ಕೆ ನೀಡಬೇಕಾದ 13,004 ಕೋಟಿ ರೂ. ಕೇಂದ್ರ ಬಾಕಿ ಇರಿಸಿಕೊಂಡಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಅಸಮಾನತೆ ನಿವಾರಣೆಗೆ ಬಜೆಟ್‌ನಲ್ಲಿ ಹಣ ಮೀಸಲು: ರಾಜ್ಯದಲ್ಲಿನ ಪ್ರಾದೇಶಿಕ ಅಸಮಾನತೆ ನಿವಾರಣೆ ನಿಟ್ಟಿನಲ್ಲಿ ರಚಿಸಲಾಗಿದ್ದ ಆರ್ಥಿಕ ತಜ್ಞ ಪ್ರೊ. ಗೋವಿಂದರಾವ ನೇತೃತ್ವದ ಅಧ್ಯಯನ ಸಮಿತಿಯು ಈಗಾಗಲೆ ತನ್ನ ವರದಿ ನೀಡಿದ್ದು, ಸಮಿತಿಯ ಶಿಫಾರಸ್ಸಿನಂತೆ ಹಿಂದುಳಿದ ತಾಲೂಕುಗಳ ಅಭಿವೃದ್ಧಿಗೆ ವಿಶೇಷವಾಗಿ ಉತ್ತರ ಕರ್ನಾಟಕ ಭಾಗಕ್ಕೆ ಬರುವಂತಹ 2026-27ನೇ ಆಯವ್ಯಯದಲ್ಲಿ ಹೆಚ್ಚಿನ ಅನುದಾನ ಮೀಸಲಿಡಲು ಕ್ರಮ ವಹಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದರು.

ಪತ್ರಿಕಾಗೋಷ್ಠಿಯಲ್ಲಿ ರಾಜ್ಯದ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಖಾತೆ ಸಚಿವ ಡಾ. ಶರಣಪ್ರಕಾಶ ಪಾಟೀಲ, ಸಣ್ಣ ನೀರಾವರಿ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್. ಭೋಸರಾಜು, ಹಿಂದುಳಿದ ವರ್ಗಗಳ ಕಲ್ಯಾಣ ಮತ್ತು ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ ತಂಗಡಗಿ, ಕರ್ನಾಟಕ ರಾಜ್ಯ ರೇಷ್ಮೆ ಉದ್ಯಮಗಳ ನಿಗಮದ ಅಧ್ಯಕ್ಷೆ ಖನೀಜ್ ಫಾತಿಮಾ, ಶಾಸಕ ಎಂ.ವೈ.ಪಾಟೀಲ, ವಿಧಾನ ಪರಿಷತ್ ಶಾಸಕ ಜಗದೇವ ಗುತ್ತೇದಾರ, ಕಲಬುರಗಿ ಮಹಾನಗರ ಪಾಲಿಕೆಯ ಮಹಾಪೌರರಾದ ವರ್ಷಾ ರಾಜೀವ ಜಾನೇ ಇದ್ದರು.

## ಸ್ಪರ್ಶ್ ಕುಷ್ಠರೋಗ ಜಾಗೃತಿ ಅಭಿಯಾನ

ಬಹುದಿನದ ಗಾಯ, ಕೈ ಅಥವಾ ಕಾಲುಗಳಲ್ಲಿ ಬೆರಳು ಮಡಿಚಿಕೊಂಡಿರುವುದು, ನಡೆಯುವಾಗ ಕಾಲು ಎಳೆಯುವುದು, ಕೈ ಅಥವಾ ಕಾಲುಗಳಲ್ಲಿ ಜುಮ್ಮೆನಿಸುವಿಕೆ ಅಥವಾ ಮರಗಟ್ಟುವಿಕೆ, ಅಂಗೈ ಅಥವಾ ಪಾದಗಳಲ್ಲಿ ಶೀತ, ಬಿಸಿ ಅಥವಾ ಸಂವೇದನೆ ನಷ್ಟವಾಗಿರುವುದು, ಕೈಗಳಲ್ಲಿ ವಸ್ತುಗಳನ್ನು ಹಿಡಿಯುವುದು ಹಾಗೂ ಪಾದರಕ್ಷೆಗಳನ್ನು ತೊಡುವಲ್ಲಿ ಬಲಹೀನತೆ ಕಂಡುಬರುವುದು. ಇಂತಹ ಲಕ್ಷಣಗಳು ಯಾರಿಗಾದರು ಕಂಡುಬಂದರೆ ತಕ್ಷಣ ತಮ್ಮ ಸಮೀಪದ ಸರ್ಕಾರಿ ಆಸ್ಪತ್ರೆ ಅಥವಾ ಆರೋಗ್ಯ ಸಿಬ್ಬಂದಿ, ಆಶಾ ಕಾರ್ಯಕರ್ತೆಯರನ್ನ ಸಂಪರ್ಕಿಸಬೇಕು. ರೋಗ ಕಚಿತಪಟ್ಟರೆ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತವಾಗಿ ಚಿಕಿತ್ಸೆ ನೀಡಲಾಗುತ್ತದೆ ಎಂದು ತಿಳಿಸಿದರು.

ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ ವ್ಹಿ.ಪಿ ಅವರು ಕುಷ್ಠರೋಗ ನಿರ್ಮೂಲನೆಯಲ್ಲಿ ಶಾಲಾ ವಿದ್ಯಾರ್ಥಿಗಳ ಪಾತ್ರ ಹಾಗೂ ವಹಿಸಬೇಕಾದ ಮುಂಜಾಗ್ರತ ಕ್ರಮಗಳ ಕುರಿತು ಮಾತನಾಡಿ, ಗ್ರಾಮೀಣ ಪ್ರದೇಶ ಮತ್ತು ನಗರ ಪ್ರದೇಶಗಳಲ್ಲಿ ಜಾಗೃತಿ ಮೂಡಿಸಬೇಕು. ಹದಿ-ಹರೆಯದವರ ಆರೋಗ್ಯ ರಕ್ಷಣೆ ಮತ್ತು ಇತರೆ ಸಾಂಕ್ರಾಮಿಕ, ಅಸಾಂಕ್ರಾಮಿಕ ರೋಗಗಳ ಬಗ್ಗೆ ವಿವರವಾದ ಮಾಹಿತಿ ನೀಡಿದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಗಂಗಮ್ಮ ಕೆ. ಅವರು ಮಾತನಾಡಿ, ಕುಷ್ಠರೋಗದ ಬಗ್ಗೆ ಪ್ರತಿಯೊಬ್ಬರು ತಿಳಿದುಕೊಳ್ಳಿ, ಜಾಗೃತಿ ಮೂಡಿಸೋಣ, ತಪ್ಪು ಕಲ್ಪನೆಗಳನ್ನು ಹೋಗಲಾಡಿಸೋಣ ಮತ್ತು ಕುಷ್ಠರೋಗದಿಂದ ಬಾಧಿತರಾದ ಎಲ್ಲರನ್ನೂ ಹಿಂದುಳಿಯದಂತೆ ನೋಡಿಕೊಳ್ಳೋಣ ಎಂದು ತಿಳಿಸಿದರು. ನಂತರ ಕುಷ್ಠರೋಗ ನಿರ್ಮೂಲನೆ ಕುರಿತು ಪ್ರತಿಜ್ಞಾವಿಧಿ ಬೋಧಿಸಿದರು.

ಶಾಲೆಯ ಮುಖ್ಯೋಪಾದ್ಯಾಯರಾದ ಅಂದಪ್ಪ ಅವರು ಮಾತನಾಡಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು "ಸ್ಪರ್ಶ್ ಕುಷ್ಠರೋಗ ಜಾಗೃತಿ ಅಭಿಯಾನ" ಹಮ್ಮಿಕೊಳ್ಳುವ ಮೂಲಕ ಜಾಗೃತಿ ಮೂಡಿಸುತ್ತಿದೆ. ಈ ಕಾರ್ಯಕ್ರಮ ವಿದ್ಯಾರ್ಥಿಗಳಿಗೆ ಬಹಳ ಉಪಯುಕ್ತವಾಗಿದೆ. ಜೊತೆಗೆ ವಿವಿದ ಸಾಂಕ್ರಾಮಿಕ, ಅಸಾಂಕ್ರಾಮಿಕ ರೋಗಗಳ ಬಗ್ಗೆ ಜಾಗೃತಿ ಮೂಡಿಸುತ್ತಿದ್ದು, ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಂಡು ತಮ್ಮ ತಮ್ಮ ಮನೆ, ಊರು, ವಾರ್ಡ್‌ಗಳಲ್ಲಿ ಹಾಗೂ ಸುತ್ತ ಮುತ್ತಲಿನ ಸಾರ್ವಜನಿಕರಿಗೆ ಅರಿವು ಮೂಡಿಸುವಂತೆ ಕರೆ ನೀಡಿದರು.

ಕಾರ್ಯಕ್ರಮದಲ್ಲಿ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ದಿನೇಶ್, ಹಿರಿಯ ಮೇಲ್ವಿಚಾರಕ ವೀರಭದ್ರಪ್ಪ, ಆರೋಗ್ಯ ನಿರೀಕ್ಷಣಾಧಿಕಾರಿ ಪರಶುರಾಮ, ಲಿಂಕ್‌ವರ್ಕರ್ ಉದಯ ಸೇರಿದಂತೆ ಸಹಶಿಕ್ಷಕರು, ಆಶಾ ಕಾರ್ಯಕರ್ತೆಯರು, ವಿದ್ಯಾರ್ಥಿಗಳು ಹಾಗೂ ಶಾಲಾ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಕಿಕ್ಕಿರಿದು ತುಂಬಿದ ಸ್ಟೇಡಿಯಂ, ಚಿಣ್ಣರ ಸಂಭ್ರಮ

ಫೋಟೊಗ್ರಫಿಯ ನಾನಾ ಹಕ್ಕಿಗಳ ಚಿತ್ರಗಳ ಮಳಿಗೆ, ವಿವಿಧ ಗಣ್ಯ ವ್ಯಕ್ತಿಗಳ ಕಾರ್ಟೂನ್ ಪ್ರದರ್ಶನ ಮಳಿಗೆ, ಮುಖವಾಡ ತಯಾರಿ ಮಳಿಗೆ, ಗೂಡುದೀಪ ತಯಾರಿ ಮಳಿಗೆ, ಗಾಳಿಪಟ ಮಳಿಗೆ, ಆರೋಗ್ಯಕರವಾಗಿ ತಿನ್ನಿರಿ, ಆರೋಗ್ಯವಾಗಿರಿ ಎಂಬ ಸಂದೇಶದ ನಾನಾ ಮಳಿಗಳಿಗೆ ಮತ್ತು ರೋಬ್ಯಾಟಿಕ್ ಚಿಟ್ಟೆಗಳ ಪ್ರದರ್ಶನದ ವೀಕ್ಷಣೆ ನಡೆಸಿ ಮಕ್ಕಳು ಖುಷಿ ವ್ಯಕ್ತಪಡಿಸಿದರು.

ವಿದ್ಯಾರ್ಥಿಗಳ ನೋಂದಣಿ: ಈ ಕಾರ್ಯಕ್ರಮದಲ್ಲಿ ರಾಯಚೂರು ಸಿಟಿ ಸೇರಿದಂತೆ ಬೇರೆ ಬೇರೆ ಕಡೆಯ ಸರ್ಕಾರಿ ಹಾಗೂ ಖಾಸಗಿ ಶಾಲೆಯ ಮಕ್ಕಳು ಭಾಗಿಯಾಗಿದ್ದರು. ಮೊದಲನೇ ದಿನ ಸುಮಾರು 3 ಸಾವಿರಕ್ಕೂ ಹೆಚ್ಚು ಮಕ್ಕಳನ್ನು ನೋಂದಣಿ ಮಾಡಿಕೊಳ್ಳಲಾಯಿತು.

ಬೆಳಿಗ್ಗೆ 9 ಗಂಟೆ ವೇಳೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಕಿಕ್ಕಿರಿದು ಸೇರಿದ್ದ ಜಿಲ್ಲೆಯ ವಿವಿಧ ಸರ್ಕಾರಿ ಹಾಗೂ ಖಾಸಗಿ ಶಾಲೆಗಳ ವಿದ್ಯಾರ್ಥಿಗಳು ಕ್ರೀಡಾಂಗಣದಲ್ಲಿ ವರದಿ ಮಾಡಿಕೊಂಡು ರೋಬೋಟಿಕ್ ಪ್ರಾಣಿಗಳು, ರೋಬೋಟ್ ಪ್ರದರ್ಶನ, ಗೊಂಬೆ ನೃತ್ಯ, ಗಾಳಿಪಟ, ಮುಖವಾಡ ತಯಾರಿಕೆ, ಜೇಡಿಮಣ್ಣು ಸೇರಿದಂತೆ ವಿವಿಧ ಮಳಿಗೆಗಳಿಗೆ ಭೇಟಿ ನೀಡಿ ಸಂಭ್ರಮಿಸಿದರು.

ಕುಮಾರಿ ತನ್ವಿ ನಾಯಕ ಅವರು ಮೊದಲಿಗೆ ಭರತನಾಟ್ಯ ನೃತ್ಯ ಗೈದಳು. ಕೋಳಿ ನೃತ್ಯ, ಜಾದೂ ಪ್ರದರ್ಶನ ನಂತರ ಮಾಣಿಕ ಪ್ರಭು ಅಕಾಡೆಮಿ ಫಾರ್ ದಿ ಬ್ಲೈಂಡ್ ರಾಯಚೂರು ವತಿಯಿಂದ ಸಮೂಹ ಗಾಯನ, ಕುಮಾರಿ ಭಕ್ತಿ ತಂದೆ ರಾಜಶೇಖರ ಅವರಿಂದ ವಚನ ಸಂಗೀತ, ಕುಮಾರ ವೆಂಕಟೇಶ ನಂಜಲದಿನ್ನಿ ಅವರಿಂದ ಹೆಜ್ಜೆಮೇಳ ಸಾಂಸ್ಕೃತಿಕ ಕಾರ್ಯಕ್ರಮ ನಡೆದವು.

ಮಧ್ಯಾಹ್ನ ವೇಳೆಯಲ್ಲಿ ರಾಘವ ನಾಟ್ಯಾಮೃತ ಶಾಲೆಯಿಂದ ಭರತನಾಟ್ಯ, ಸೇಂಟ್ ಮೇರಿ ಕಾನ್ವೆಂಟ್ ಶಾಲೆ ರಾಯಚೂರು ವತಿಯಿಂದ ಜಾನಪದ ನೃತ್ಯ, ಗಬ್ಬೂರಿನ ವಿದ್ಯಾಜ್ಯೋತಿ ಶಿಕ್ಷಣ ಸಂಸ್ಥೆಯಿಂದ ಜಂಪ್ ರೋಪ್ ಮತ್ತು ಮಲ್ಲಕಂಬ, ಮಲ್ಲಟ ಕೆ.ಜಿ.ಬಿ.ವಿ. ಶಾಲೆಯಿಂದ ಕರಾಟೆ ಪಿರಾಮಿಡ್, ರಾಯಚೂರಿನ ಜ್ಞಾನಗಂಗಾ ಶಾಲೆಯಿಂದ ಜಾನಪದ ನೃತ್ಯ, ರಾಯಚೂರಿನ ಮ್ಯಾಕ್ಸ್‌ವೆಲ್ ಶಾಲೆ ಇಂಟರ್ ನ್ಯಾಷನಲ್ ಸ್ಕೂಲ್‌ನಿಂದ ಭರತನಾಟ್ಯ, ರಾಯಚೂರಿನ ಸೇಂಟ್ ಜೇವಿಯರ್ ಶಾಲೆಯಿಂದ ಸಾಂಸ್ಕೃತಿಕ ಕಾರ್ಯಕ್ರಮ, ರಾಯಚೂರಿನ ಲಯನ್ಸ್ ಪ್ರೌಢಶಾಲೆಯಿಂದ ಸಾಮೂಹಿಕ ನೃತ್ಯ, ರಾಯಚೂರಿನ ಸೇಂಟ್ ಜೇವಿಯರ್ ಶಾಲೆಯಿಂದ ಸಿಂಧೂರ ಕಾರ್ಯಚರಣೆ ಕುರಿತು ಕಾರ್ಯಕ್ರಮಗಳು ನಡೆದವು.

ಶಿಕ್ಷಕರಲ್ಲಿ ಉತ್ಸಾಹ: ಮಕ್ಕಳ ಉತ್ಸವಕ್ಕೆ ತಮ್ಮ ತಮ್ಮ ಶಾಲಾ ಮಕ್ಕಳನ್ನು ಕರೆ ತಂದಿದ್ದ ಬೇರೆ ಬೇರೆ ಶಾಲೆಗಳ ಗುರುಗಳು ಮತ್ತು ಗುರುಮಾತೆಯರು ಸಹ ಮಕ್ಕಳ ಹಬ್ಬದ ಸವಿಯನ್ನು ಕಣ್ತುಂಬಿಕೊಂಡರು.

## ಸ್ಪರ್ಷ ಕುಷ್ಠರೋಗ ಜಾಗೃತಿ ಅಭಿಯಾನಕ್ಕೆ ಚಾಲನೆ

ಮೂಡಿಸುವುದು. ಕುಷ್ಠರೋಗ ಲಕ್ಷಣಗಳಾದ ಚರ್ಮದ ಮೇಲಿನ ಯಾವುದೇ ತಿಳಿ-ಬಿಳಿ ತಾಮ್ರ ಬಣ್ಣದ ಮಚ್ಚೆ, ದಪ್ಪವಾದ ಎಣ್ಣೆ ಪಸರಿಸಿದಂತಹ ಹೊಳೆಯುವ ಚರ್ಮ, ದೇಹದ ಮೇಲಿನ ಘಂಟುಗಳು, ಕಣ್ಣಿನ ರೆಪ್ಪೆಗಳನ್ನು ಮುಚ್ಚುವಲ್ಲಿ ತೊಂದರೆ, ಕೈ ಅಥವಾ ಕಾಲುಗಳಲ್ಲಿನ ಬಹುದಿನದ ಗಾಯ, ಕೈ ಅಥವಾ ಕಾಲುಗಳಲ್ಲಿ ಬೆರಳು ಮಡಿಚಿಕೊಂಡಿರುವುದು, ನಡೆಯುವಾಗ ಕಾಲು ಎಳೆಯುವುದು, ಕೈ ಅಥವಾ ಕಾಲುಗಳಲ್ಲಿ ಜುಮ್ಮೆನುಸುವಿಕೆ, ಮರುಗಟ್ಟುವಿಕೆ, ಅಂಗೈ ಅಥವಾ ಪಾದಗಳಲ್ಲಿ ಶೀತ, ಬಿಸಿ, ಸಂವೇದನೆ ನಷ್ಟವಾಗಿರುವುದು, ಕೈಗಳಲ್ಲಿ ವಸ್ತುಗಳನ್ನು ಹಿಡಿಯಲು ಹಾಗೂ ಪಾದರಕ್ಷೆ ತೊಡುವಲ್ಲಿ ಬಲಹೀನತೆ ಇವುಗಳೆಲ್ಲವೂ ಕುಷ್ಠರೋಗದ ಲಕ್ಷಣಗಳಾಗಿವೆ. ಇಂತಹ ಲಕ್ಷಣಗಳು ಕಂಡು ಬಂದರೆ ಸರ್ಕಾರಿ ಆಸ್ಪತ್ರೆಗೆ ತೆರಳಿ ವೈದ್ಯರಿಗೆ ತೋರಿಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಯಾದಗಿರಿ ಜಿಲ್ಲಾ ಕ್ಷಯರೋಗ ಮತ್ತು ಕುಷ್ಠರೋಗ ನಿರ್ಮೂಲನಾ ಅಧಿಕಾರಿ, ಮುಖ್ಯ ಅತಿಥಿಗಳಾದ ಡಾ. ಭಗವಂತ ಅನವಾರ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಮಹಿಪಾಲರಡ್ಡಿ, ಶ್ರೀ ಜಗನಾಥ ಆಜಊಇಔ, ಶ್ರೀ ಭಾಗಪ್ಪ ಕೋರೆ, ಶ್ರೀ ಬಸ್ಸಯ್ಯ ಗುತ್ತೇದಾರ, ಜಗದೀಶ ಕುರುಕುಂದಿ, ನಾಗರಾಜ, ,ಆರೋಗ್ಯ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ, ಆಶಾ ಕಾರ್ಯಕರ್ತೆಯರು ಹಾಗೂ ಇನ್ನಿತರರು ಉಪಸ್ಥಿತರಿದ್ದರು. ಜಿಲ್ಲಾ ಕಾರ್ಯಕ್ರಮ ಅನುಷ್ಠಾನ ಅಧಿಕಾರಿಗಳಾದ ಡಾ. ಜ್ಯೋತಿ ಕಟ್ಟಿಮನಿ, ತಾಲೂಕು ಆರೋಗ್ಯ ಅಧಿಕಾರಿಗಳಾದ ಡಾ. ಹಣಮಂತರಡ್ಡಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಲಕ್ಷ್ಮೀ ಮುಂಡಾಸ, ತುಳಿಸಿರಾಮ ನಿರೂಪಿಸಿದರು. ಶಿವಶರಣಯ್ಯ ಗದ್ದಿಗಿ ವಂದನಾರ್ಪಣೆ ನೆರವೇರಿಸಿದರು.

## ರೈತರ ಸಮಸ್ಯೆ ಸರಿಪಡಿಸಿ: ಶಾಸಕ ಪ್ರಭು ಚವ್ಹಾಣ ಸೂಚನೆ

ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯು ಮಂದಿರದ ಜಾಗದಲ್ಲಿ ನಿರ್ಮಿಸಲಾಗಿದೆ. ಹಾಗಾಗಿ ಶಾಲೆಗೆ ಹೊಸ ನಿವೇಶನ ಕಲ್ಪಿಸಿಕೊಟ್ಟು ಮಂದಿರ ನಿರ್ಮಿಸಿಕೊಡಬೇಕೆಂದು ಗ್ರಾಮಸ್ಥರು ಶಾಸಕರಿಗೆ ಮನವಿ ಸಲ್ಲಿಸಿದರು. ಗ್ರಾಮದ ಅಭಿವೃದ್ಧಿ ವಿಷಯದಲ್ಲಿ ನಾನು ಸದಾ ಸಿದ್ಧನಿದ್ದು ಅಗತ್ಯ ಕ್ರಮವಹಿಸುವುದಾಗಿ ಶಾಸಕರು ಭರವಸೆ ನೀಡಿದರು.

ಈ ವೇಳೆ ಗ್ರಾಮಗಳಲ್ಲಿನ ಮೂಲಸೌಕರ್ಯ, ಕುಡಿಯುವ ನೀರು, ರಸ್ತೆ, ವಿದ್ಯುತ್, ಕೃಷಿ ಸಮಸ್ಯೆಗಳು ಸೇರಿದಂತೆ ವಿವಿಧ ಬೇಡಿಕೆಗಳು ಹಾಗೂ ಅಭಿವೃದ್ಧಿ ಸಂಬಂಧಿತ ವಿಷಯಗಳ ಕುರಿತು ಗ್ರಾಮಸ್ಥರೊಂದಿಗೆ ಚರ್ಚಿಸಿ, ಹಂತ ಹಂತವಾಗಿ ಸಮಸ್ಯೆಗಳಿಗೆ ಪರಿಹಾರ ಒದಗಿಸುವ ಭರವಸೆ ನೀಡಿದರು. ಇದೇ ವೇಳೆ ವಿವಿಧೆಡೆ ರಸ್ತೆ, ಕುಡಿಯುವ ನೀರು, ಸಮುದಾಯ ಭವನ ಹಾಗೂ ಮತ್ತಿತರೆ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಿದರು.

ಈ ಸಂದರ್ಭದಲ್ಲಿ ತಹಸೀಲ್ದಾರರಾದ ಮಹೇಶ ಪಾಟೀಲ, ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಕಿರಣ ಪಾಟೀಲ, ಲೋಕೋಪಯೋಗಿ ಉಲಾಖೆ ಎಇಇ ಪ್ರೇಮಸಾಗರ, ಪಂಚಾಯತ ರಾಜ್ ಎಂಜಿನಿಯರಿಂಗ್ ಇಲಾಖೆ ಎಇಇ ಸುನೀಲ ಚಿಲ್ಲರ್ಗೆ, ಜೆಸ್ಕಾಂ ಎಇಇ ರವಿ ಕಾರಬಾರಿ, ಸಿಡಿಪಿಓ ಇಮಲಪ್ಪ, ಮುಖಂಡರಾದ ಶಿವಾಜಿರಾವ ಪಾಟೀಲ ಮುಂಗನಾಳ, ಶಿವರಾಜ ಅಲ್ಮಾಜೆ, ಸಚಿನ ರಾಠೋಡ, ಯೋಗೇಶ ಪಾಟೀಲ, ಸಚಿನ ಬಿರಾದಾರ, ಅನಿಲ ಬಿರಾದಾರ ಹಾಗೂ ಮತ್ತಿತರರು ಇದ್ದರು.

## ಸೋಮಶೇಖರ್ ಗೌಡಪ್ಪನೌರ್ ನೇಮಕ

ಸಂದರ್ಭದಲ್ಲಿ ಮಾತನಾಡಿದ ಶ್ರೀ ತ್ಯಾಗಿ ಅವರು, ಶ್ರೀ ಸೋಮಶೇಖರ್ ಅವರ ನಿರಂತರ ಪ್ರಯತ್ನಗಳು ಹಾಗೂ ಸಕ್ರಿಯ ಕೊಡುಗೆಗಳು ಸಂಸ್ಥೆಯ ಸಾಮಾಜಿಕ ಸೇವಾ ಕಾರ್ಯಗಳಿಗೆ ಬಲ ನೀಡಲಿದ್ದು, MN-REGA ಕಾರ್ಮಿಕರ ಹಕ್ಕುಗಳು ಮತ್ತು ಕಲ್ಯಾಣಕ್ಕಾಗಿ ಸಮರ್ಪಿತವಾಗಿ ಕಾರ್ಯನಿರ್ವಹಿಸುವ ವಿಶ್ವಾಸವಿದೆ ಎಂದು ತಿಳಿಸಿದರು.

ಅಖಿಲ ಭಾರತ ಕಾರ್ಮಿಕ MNREGA ಮಾನಿಟರಿಂಗ್ ಸಮಿತಿಯು ರಾಷ್ಟ್ರಮಟ್ಟ ಹಾಗೂ ರಾಜ್ಯಮಟ್ಟದಲ್ಲಿ MNREGA ಕಾರ್ಮಿಕರ ಹಿತಾಸಕ್ತಿಗಳು ಮತ್ತು ಕಲ್ಯಾಣಕ್ಕಾಗಿ ಕಾರ್ಯನಿರ್ವಹಿಸುತ್ತಿರುವ ಸಾಮಾಜಿಕ ಸಂಸ್ಥೆಯಾಗಿದೆ. ಕರ್ನಾಟಕ ರಾಜ್ಯಾಧ್ಯಕ್ಷರಾಗಿ ನೇಮಕವಾದ ಬಳಿಕ, ಶ್ರೀ ಸೋಮಶೇಖರ್ ಅವರು ಜಿಲ್ಲೆ ಮತ್ತು ತಾಲ್ಲೂಕು ಮಟ್ಟದಲ್ಲಿ ಸಮಿತಿಗಳನ್ನು ರಚಿಸಿ, ರಾಷ್ಟ್ರೀಯ ಸಮಿತಿಯ ಮಾರ್ಗದರ್ಶನದಲ್ಲಿ ದೃಢವಾದ ಸಂಘಟನಾ ರಚನೆಯನ್ನು ನಿರ್ಮಿಸುವರು ಎಂಬ ಆಶಾಭಾವನೆಯನ್ನು ಸಮಿತಿಯು ವ್ಯಕ್ತಪಡಿಸಿದೆ.

ತಮ್ಮ ಜವಾಬ್ದಾರಿಯನ್ನು ಸ್ವೀಕರಿಸಿದ ಸಂದರ್ಭದಲ್ಲಿ ಮಾತನಾಡಿದ ಶ್ರೀ ಸೋಮಶೇಖರ್ ಗೌಡಪ್ಪನೌರ್, ಸಂಸ್ಥೆಯ ಕಾರ್ಮಿಕರ ಹಿತಕ್ಕಾಗಿ ಸದಾ ಪ್ರಾಮಾಣಿಕವಾಗಿ ಮತ್ತು ನಿಷ್ಠೆಯಿಂದ ಕೆಲಸ ಮಾಡುವುದಾಗಿ ಭರವಸೆ ನೀಡಿದರು.

ಈ ಕಾರ್ಯಕ್ರಮದಲ್ಲಿ ಸೃಜನವಾಣಿ ಪತ್ರಿಕೆಯ ಮುಖ್ಯ ಸಂಪಾದಕರಾದ ಶ್ರೀ ಸುಧಾಕರ್ ಶರ್ಮಾ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾಣೆಯಾದ ಮಹಿಳೆಯ ಪತ್ತೆಗೆ ಮನವಿ



ಯಾದಗಿರಿ : ಫೆಬ್ರವರಿ 02, : ಯಾದಗಿರಿನಗರದ ಖಾಜಗಾರವಾಡಿ 24 ವರ್ಷದ ಕುಮಾರಿ ಸಂಜನಾ ಮಹಿಳೆ 2026ರ ಜನವರಿ 29 ರಂದು ಕಾಣೆಯಾದ ಹಿನ್ನೆಲೆ ಯಾದಗಿರಿ ನಗರ ಪೊಲೀಸ್ ಠಾಣೆಯಲ್ಲಿ ಮಹಿಳೆ ಕಾಣೆ ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರಿದಿದೆ ಎಂದು ಯಾದಗಿರಿ ನಗರ ಪೊಲೀಸ್ ಠಾಣೆ ಆರಕ್ಷಕ ಉಪ ನಿರೀಕ್ಷಕರು (ಕಾ.ಸು) ಮಂಜನಗೌಡ ಅವರು ತಿಳಿಸಿದ್ದಾರೆ.

ಯಾದಗಿರಿ ಜಿಲ್ಲೆಯ ಯಾದಗಿರಿ ನಗರದ ಖಾಜಗಾರವಾಡಿದಿಂದ ಈಕೆ ಕಳೆದ ಜ.29 ರಂದು ಮಧ್ಯಾಹ್ನ 2 ಗಂಟೆಗೆ ಸುಮಾರಿಗೆ ಹೊರಗಡೆ ಹೋದವಳು ರಾತ್ರಿಯಾದರೂ ಮರಳಿ ಮನೆಗೆ ಬರದೇ ಕಾಣೆಯಾಗಿದ್ದು, ಈ ರಾತ್ರಿಯಾದರೂ ಮನೆಗೆ ಬಾರದೆ ಇದ್ದ ಹಿನ್ನೆಲೆ ನಂಬರ್ ಕರೆ ಮಾಡಿ ಸಂಪರ್ಕಿಸಲು ಪ್ರಯತ್ನಿಸಿದ್ದು ಸಂಪರ್ಕಕ್ಕೆ ಬಂದಿರುವುದಿಲ್ಲ, ಗಾಬರಿಗೊಂಡು ನಾನು ಮತ್ತು ನನ್ನ ಮಡದಿ ಎಲ್ಲರೂ ಕೂಡಿ-ಕೊಂಡು ನಮ್ಮ ಸಂಬಂಧಿಕರ ಮನೆಗಳಿಗೆ ಕರೆ ಮಾಡಿ ಹೋಗಿ ಹುಡುಕಾಡಿದ್ದು, ಅವಳ ಇರುವಿಕೆ ಬಗ್ಗೆ ತಿಳಿದುಬಂದಿರುವುದಿಲ್ಲ.

ಕಾಣೆಯಾದ ಮಹಿಳೆಯ ಚಹರಾ ಪಟ್ಟಿ ವಿವರ : ಮಹಿಳೆಯ ಕೂದಲು ಕಪ್ಪು, ಮೈಬಣ್ಣ ಗೋಧಿ ಕೆಂಪುಬಣ್ಣ 5 ಫೀಟ್ 3 ಇಂಚು ಎತ್ತರ ಇದ್ದು, ದುಂಡನೆ ಮುಖ, ಸಾಧಾರಣ ಮೈಕಟ್ಟು, ಹಳದಿ ಬಣ್ಣದ ಚುಡಿದಾರ, ಬಿಳಿ ಬಣ್ಣದ ಲಗೀನ್ಸ್ ಪ್ಯಾಂಟ್ ಧರಿಸಿದ್ದಾಳೆ. ಕನ್ನಡ, ಮರಾಠಿ ಮಾತನಾಡುತ್ತಾಳೆ. ಮಹಿಳೆ ಪತ್ತೆಯಾದಲ್ಲಿ ಯಾದಗಿರಿ ನಗರ ಪೊಲೀಸ್ ಠಾಣೆ ಠಾಣಾಧಿಕಾರಿ ಮೊ.ನಂ.7411275228 ಅಥವಾ 9845728951ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಭಕ್ತಿ ಭಾವಕ್ಕೆ ಸಾಕ್ಷಿಯಾದ ಕಿನ್ನಾಳದ ಶ್ರೀ ಬನಶಂಕರಿ ದೇವಿ ರಥೋತ್ಸವ,,



ಕೊಪ್ಪಳ :ಫೆ. 02- ತಾಲೂಕಿನ ಕಿನ್ನಾಳ ಗ್ರಾಮದ ಆರಾಧ್ಯ ದೇವಿ ಶ್ರೀ ಬನಶಂಕರಿ ದೇವಿ ರಥೋತ್ಸವವು ಡೊಳ್ಳು, ಹಾಗೂ ವಿವಿದ ವಾದ್ಯಮೇಳದೊಂದಿಗೆ ಭಕ್ತರ ಜಯಘೋಷದ ಮಧ್ಯದಲ್ಲಿ ಸಂಭ್ರಮದಿಂದ ಭಾನುವಾರ ಸಂಜೆ ಅದ್ದೂರಿಯಿಂದ ನೆರವೇರಿತು.

ಜಾತ್ರಾಮಹೋತ್ಸವ ಅಂಗವಾಗಿ ಬೆಳಿಗ್ಗೆಯಿಂದಲೇ ಶ್ರೀ ದೇವಿಗೆ ವಿಶೇಷ ಪೂಜಾ ಕಾರ್ಯಕ್ರಮ ಜರುಗಿದವು.

ಕಿನ್ನಾಳ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಸಹಸ್ರಾರು ಸಂ-ಖ್ಯೆಯ ಭಕ್ತರು ರಥೋತ್ಸವದಲ್ಲಿ ಪಾಲ್ಗೊಂಡು ರಥಕ್ಕೆ ಉತ್ತತ್ತಿ, ಬಾಳೆಹಣ್ಣು ಎಸೆದು ತಮ್ಮ ಭಕ್ತಿ ಸಮರ್ಪಿಸಿದರು. ಶ್ರೀ ಬನಶಂಕರಿ ರಥೋತ್ಸವಕ್ಕೆ ಭಕ್ತರು ಆಗಮಿಸಿ ದೇವಿಯ ದರ್ಶನ ಪಡೆದು-ಕೊಂಡರು.

## ಆರ್ಥಿಕ ಸ್ಥಿರತೆ ಮತ್ತು ಸಮಗ್ರ ಅಭಿವೃದ್ಧಿಯ ಬಜೆಟ್: ಸಿವಿಸಿ



ಬೀದರ್:ಫೆ.02-ಕೇಂದ್ರಹಣಕಾಸು ಸಚಿವರಾದ ಶ್ರೀಮತಿ ನಿರ್ಮಲ ಸೀತಾರಾಮನ್ ಅವರು ಇಂದು ಮಂಡಿಸಿದ ಬಜೆಟ್ ದೇಶದ ಆರ್ಥಿಕ ಸ್ಥಿರತೆ ಹಾಗೂ ಸಮಗ್ರ ಅಭಿವೃದ್ಧಿಗೆ ದಿಕ್ಕು ನೀಡುತ್ತದೆ. ಸಾಮಾನ್ಯಜನ, ರೈತರು, ಯುವಕರು ಮತ್ತು ಮಹಿಳೆಯರ ಆಶಯಗಳನ್ನು ಈಡೇರಿಸುವ ಯೋಜನೆಗಳನ್ನು ಒಳಗೊಂಡ ಈ ಬಜೆಟ್ ಅಭಿವೃದ್ಧಿಪರ ಎಂದು ಜೆಡಿಎಸ್ ರಾಜ್ಯ ಕೋರ್ ಕಮಿಟಿ ಸದಸ್ಯ ಸಿವಿ ಚಂದ್ರಶೇಖರ್ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಬಜೆಟ್ ಆತ್ಮನಿರ್ಭರ ಭಾರತ ನಿರ್ಮಾಣಕ್ಕೆ ಬಲ ನೀಡಲಿದೆ. ಕೃಷಿ, ಮೂಲಸೌಕರ್ಯ, ಉದ್ಯೋಗ ಸೃಷ್ಟಿ ಹಾಗೂ ಸಾಮಾಜಿಕ ಕಲ್ಯಾಣಕ್ಕೆ ಒತ್ತು ನೀಡಿರುವುದು ಗಮನಾರ್ಹ.

ಮಧ್ಯಮ ವರ್ಗದ ಜನರಿಗೆ ತೆರಿಗೆ ಸಂಬಂಧಿತ ಸೌಲಭ್ಯಗಳು, ಯುವಕರಿಗೆ ಕೌಶಲ್ಯಾಭಿವೃದ್ಧಿ ಮತ್ತು ಉದ್ಯೋಗಾವಕಾಶಗಳು, ಮಹಿಳೆಯರ ಸಬಲೀಕರಣಕ್ಕೆ ವಿಶೇಷ ಯೋಜನೆಗಳು ಆರ್ಥಿಕ ಪ್ರಗತಿಯ ವೇಗವನ್ನು ಹೆಚ್ಚಿಸಲಿವೆ ಎಂದು ಅವರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ರಾಜ್ಯಗಳ ಅಭಿವೃದ್ಧಿಗೂ ಕೇಂದ್ರ ಸರ್ಕಾರ ಸಮರ್ಪಕ ಅನುದಾನ ನೀಡುವ ಮೂಲಕ ಬದ್ಧತೆಯನ್ನು ಪ್ರದರ್ಶಿಸಿದೆ. ಒಟ್ಟಾರೆ ದೇಶವನ್ನು ವಿಶ್ವದ ಆರ್ಥಿಕ ಶಕ್ತಿಯಾಗಿ ರೂಪಿಸಲು ಈ ಬಜೆಟ್ ಪೂರಕವಾಗಿದೆ ಎಂದು ಅವರು ಹೇಳಿದ್ದಾರೆ.

## ಕೇಂದ್ರ ಬಜೆಟ್‌ನಲ್ಲಿ ಕರ್ನಾಟಕ ಕಡೆಗಣನೆ



ಅಶೋಕಾ ಕೋಟೆ ವಾರ್ತೆ

ಬೀದರ್:ಫೆ. 02- ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರದ 2026-27ನೇ ಸಾಲಿನ ಬಜೆಟ್‌ನಲ್ಲಿ ಕರ್ನಾಟಕವನ್ನು ಸಂಪೂರ್ಣ ಕಡೆಗಣಿಸಲಾಗಿದೆ ಎಂದು ಕಾಂಗ್ರೆಸ್ ಜಿಲ್ಲಾ ಘಟಕದ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ರಾಜ್ಯ, ಕಲ್ಯಾಣ ಕರ್ನಾಟಕ ಹಾಗೂ ಜಿಲ್ಲೆಯ ಜನ ಬಜೆಟ್ ಬಗ್ಗೆ ಇಟ್ಟಿದ್ದ ನಿರೀಕ್ಷೆಗಳೆಲ್ಲ ಹುಸಿಯಾಗಿವೆ ಎಂದು ಹೇಳಿದ್ದಾರೆ. ಬಜೆಟ್‌ನಲ್ಲಿ ಮಹಿಳೆಯರು, ಕೂಲಿ ಕಾರ್ಮಿಕರು, ಜನಸಾಮಾನ್ಯರು, ರೈತರ ಜೀವನ ಮಟ್ಟ ಸುಧಾರಿಸುವ, ಯುವಕರ ಭವಿಷ್ಯ ಉಜ್ವಲಗೊಳಿಸುವ ಯೋಜನೆಗಳಿಲ್ಲ. ದೇಶದ ಆರ್ಥವ್ಯವಸ್ಥೆ ಸುಧಾರಿಸುವ ಕ್ರಮಗಳಿಲ್ಲ ಎಂದು ಟೀಕಿಸಿದ್ದಾರೆ.

## ರೈತರ ನೆರವಿಗೆ ಧಾವಿಸದ ಕೇಂದ್ರ



ಅಶೋಕಾ ಕೋಟೆ ವಾರ್ತೆ

ಬೀದರ್: ಫೆ. 02-ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರವು ಪ್ರಸಕ್ತ ಸಾಲಿನ ಬಜೆಟ್‌ನಲ್ಲಿ ರೈತರ ನೆರವಿಗೆ ಧಾವಿಸಿಲ್ಲ ಎಂದು ಕಾಂಗ್ರೆಸ್ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ಹಾಗೂ ವಕ್ತಾರ ಜಾರ್ಜ್ ಫರ್ನಾಂಡೀಸ್ ಆರೋಪಿಸಿದ್ದಾರೆ.

ಅತಿವೃಷ್ಟಿ ಹಾಗೂ ಇತರ ಕಾರಣಗಳಿಂದ ರೈತರು ತೀವ್ರ ಸಂಕಷ್ಟದಲ್ಲಿದ್ದಾರೆ. ಹೀಗಾಗಿ ಕೇಂದ್ರ ತಮ್ಮ ನೆರವಿಗೆ ಬರಬಹುದು ಎಂದು ನಿರೀಕ್ಷಿಸಿದ್ದರು. ಆದರೆ, ಈಗ ಅದು ಹುಸಿಯಾಗಿದೆ ಎಂದು ಹೇಳಿದ್ದಾರೆ.

ಜೀವನಾವಶ್ಯಕ ವಸ್ತುಗಳ ಬೆಲೆ ನಿಯಂತ್ರಣ, ನಿರುದ್ಯೋಗ ಸಮಸ್ಯೆ ನಿವಾರಣೆ ಮೊದಲಾದವುಗಳ ಬಗ್ಗೆ ಅಗತ್ಯ ಕ್ರಮ ಕೈಗೊಂಡಿಲ್ಲ ಎಂದು ಆಪಾದಿಸಿದ್ದಾರೆ.

AshokaKoteKannadaDailyNewsPaperprinted Published AshokKumarKaranji Gadgion his Own behalf and printed at Sharada Printers, KSSIDC Plot No P.46 Industrial Area, Bidar Humnabad Main Road, Kolar K, Bidar-585402 Published at the Ashoka Kote Kannada Daily H.No.19-6-333 Barid shahi Garden Near Ganesh Temple Shiva Nagar (North) BIDAR-585401 Editor: Ashok Kumar Karanji

## ಜಿಲ್ಲಾ ಮಟ್ಟದ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳಕ್ಕೆ ಜಿಪಂ ಸಿಇಒ ಮಹಮ್ಮದ್ ಹಾರೀಸ್ ಸುಮೇರ್ ಚಾಲನೆ



ಬಳ್ಳಾರಿ,ಫೆ.02: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಸಂಜೀವಿನಿ ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಅಭಿಯಾನ ಇವರ ಸಂಯುಕ್ತಾಶ್ರಯದಲ್ಲಿ ನಗರದ ಶ್ರೀ ಕೋಟೆ ಮಲ್ಲೇಶ್ವರ ದೇವಸ್ಥಾನದ ಜಾತ್ರಾ ಮಹೋತ್ಸವ ಅಂಗವಾಗಿ ದೇವಸ್ಥಾನ ಆವರಣದಲ್ಲಿ ಆಯೋಜಿಸಲಾಗಿದ್ದ ಮೂರು ದಿನಗಳ (ಫೆ.01 ರಿಂದ 03 ರವರೆಗೆ) ಜಿಲ್ಲಾ ಮಟ್ಟದ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳಕ್ಕೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಭಾನುವಾರ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಗ್ರಾಮೀಣ ಭಾಗದ ಮಹಿಳಾ ಸ್ವ ಸಹಾಯ ಸಂಘಗಳ ಸದಸ್ಯರು ತಯಾರಿಸಿದ ಉತ್ಪನ್ನಗಳನ್ನು ಮಾರಾಟ ಮಾಡಲು, ಅವರಿಗೆ ಬೆಂಬಲ ಮತ್ತು ಪ್ರೋತ್ಸಾಹ ನೀಡಲಾಗುತ್ತಿದೆ. ಸಾರ್ವಜನಿಕರು ಭೇಟಿ ನೀಡಿ ಇದರ ಸದುಪಯೋಗಪಡೆದುಕೊಳ್ಳಬೇಕು ಎಂದರು.

ಮೇಳದಲ್ಲಿ ಮಹಿಳಾ ಸ್ವ ಸಹಾಯ ಸಂಘಗಳ ಸದಸ್ಯರು ತಯಾರಿಸಿದ ವಿವಿಧ ಬಗೆಯ ಉತ್ಪನ್ನಗಳನ್ನು ಪ್ರದರ್ಶನಕ್ಕಿರಿಸಲಾಗಿತ್ತು.

ಈ ವೇಳೆ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕೆ.ಪಿ.ರವಿಕುಮಾರ್, ಜಿಲ್ಲಾ ಪಂಚಾಯತ್‌ನ ಉಪಕಾರ್ಯದರ್ಶಿ ಶಶಿಕಾಂತ್ ಶಿವಪುರೆ, ಜಿಪಂ ಮುಖ್ಯಯೋಜನಾಧಿಕಾರಿ ವಾಗೀಶ್ ಶಿವಾಚಾರ್ಯ, ಜಿಪಂ ಯೋಜನಾ ನಿರ್ದೇಶಕ ಬಸವರಾಜ ಹಿರೇಮಠ, ಜಿಪಂ ಮುಖ್ಯ ಲೆಕ್ಕಾಧಿಕಾರಿ ವಿನೋದ್ ಕುಮಾರ್ ಸೇರಿದಂತೆ ಎನ್‌ಆರ್‌ಎಲ್‌ಎಂ ಯೋಜನೆಯ ಸಿಬ್ಬಂದಿಗಳು, ಮಹಿಳಾ ಸ್ವ-ಸಹಾಯ ಸಂಘದ ಸದಸ್ಯರುಗಳು ಇದ್ದರು.

## ಬಸವಕಲ್ಯಾಣ ತಾಲೂಕಿನಲ್ಲಿರುವ ಜವಾಹರ್ ನವೋದಯ ವಿದ್ಯಾಲಯ: 9 ಮತ್ತು 11ನೇ ತರಗತಿ ಪ್ರವೇಶ ಪರೀಕ್ಷೆ ಫೆ.7ಕ್ಕೆ

ಬೀದರ, ಫೆಬ್ರವರಿ.02:– ಬಸವಕಲ್ಯಾಣ ತಾಲೂಕಿನಲ್ಲಿರುವ ಜವಾಹರ್ ನವೋದಯ ವಿದ್ಯಾಲಯದಲ್ಲಿ 9 ಮತ್ತು 11ನೇ ತರಗತಿಯ ಖಾಲಿ ಇರುವ ಸ್ಥಾನಗಳಿಗಾಗಿ (2026–27ಸಾಲಿನ) ಪ್ರವೇಶ ಪರೀಕ್ಷೆ ದಿನಾಂಕ 07–02–2026 ರಂದು ನಡೆಯಲಿದೆ.

ಈ ಪ್ರವೇಶ ಪರೀಕ್ಷೆಯು ನೂರು ಅಂಕದ 100 ಪ್ರಶ್ನೆಗಳನ್ನು ಹೊಂದಿರುತ್ತದೆ. ಅವೆಲ್ಲವೂ ವಸ್ತುನಿಷ್ಠ ಪ್ರಶ್ನೆಗಳಾಗಿಲಿವೆ. ಪರೀಕ್ಷೆಯ ಅವಧಿ 2.30 ಗಂಟೆಗಳು. ಹಿಂದಿ, ಆಂಗ್ಲ ಭಾಷೆಗಳ ಸಾಮಾನ್ಯ ಜ್ಞಾನ, ಗಣಿತ ಮತ್ತು ಸಾಮಾನ್ಯ ವಿಜ್ಞಾನದ ವಿಷಯವನ್ನಾಧರಿಸಿ ಪ್ರಶ್ನೆಗಳಿರುತ್ತವೆ. ಪರೀಕ್ಷೆಯು ಬೆಳಗ್ಗೆ 11:30 ಗಂಟೆಗೆ ಆರಂಭವಾಗಿ 1.30 ಗಂಟೆಗೆ ಮುಕ್ತಾಯಗೊಳ್ಳುತ್ತದೆ.

ಪರೀಕ್ಷೆಯು ಬಸವಕಲ್ಯಾಣ ತಾಲೂಕಿನ ಮೂರು ಕೇಂದ್ರಗಳಲ್ಲಿ ಮತ್ತು ಬಾಲ್ಕೀಯ ಒಂದು ಕೇಂದ್ರದಲ್ಲಿ ನಡೆಸಲಾಗುತ್ತಿದೆ. ಪರೀಕ್ಷಾರ್ಥಿಗಳು 10.30 ಗಂಟೆಗೆ ತಮಗೆ ನಿಗದಿಪಡಿಸಿದ ಪರೀಕ್ಷಾ ಕೇಂದ್ರದಲ್ಲಿ ಪ್ರವೇಶ ಪತ್ರದೊಂದಿಗೆ ಹಾಜರಿರಬೇಕು. ಪರೀಕ್ಷೆಗೆ ಬರುವಾಗ ಪ್ರವೇಶ ಪತ್ರ ಹಾಗೂ ಆಧಾರ್ ಕಾರ್ಡಿನ ಜೆರಾಕ್ಸ್ ಪ್ರತಿಯನ್ನು ತರಬೇಕು. ಅರ್ಜಿ ಸಲ್ಲಿಸಿದ ಎಲ್ಲ ವಿದ್ಯಾರ್ಥಿಗಳು ಈ ಪ್ರವೇಶ ಪರೀಕ್ಷೆಯಲ್ಲಿ ಹಾಜರಾಗಬೇಕೆಂದು ಜವಾಹರ್ ನವೋದಯ ವಿದ್ಯಾಲಯದ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶುಲ್ಕ ಮರುಪಾವತಿ ಸೌಲಭ್ಯ: ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

ಬೀದರ, ಫೆಬ್ರವರಿ.02 :– ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಆಗೂ ಪ್ರವರ್ಗ–1ರ ಅಲೆಮಾರಿ/ ಅರೆಅಲೆಮಾರಿ ವಿದ್ಯಾರ್ಥಿಗಳಿಂದ 2025–26ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ 'ಶುಲ್ಕ ಮರುಪಾವತಿ' ಕಾರ್ಯಕ್ರಮದಲ್ಲಿ ಸೌಲಭ್ಯಕ್ಕಾಗಿ ಅನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅಂತಿಮ ದಿನಾಂಕ:15–02–2026 ರವರೆಗೆ ವಿಸ್ತರಿಸಲಾಗಿದೆ ಎಂದು ಬೀದರ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅರ್ಹ ವಿದ್ಯಾರ್ಥಿಗಳು ಅನ್‌ಲೈನ್ https://ssp.postmatric.karnataka.gov.in/ ದಲ್ಲಿ ದಿನಾಂಕ: 15–02–2026 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ https://bcwd.karnataka.gov.in/ \ಅಥವಾ ಸಹಾಯವಾಣಿ ಸಂಖ್ಯೆ: 8050770005, ದೂರವಾಣಿ ಸಂಖ್ಯೆ: 1902 ಗೆ ಸಂಪರ್ಕಿಸಬಹುದಾಗಿದೆ ಅವರು ತಿಳಿಸಿದ್ದಾರೆ.

### ಮುನಿರಾಬಾದ್ ನೀರಾವರಿ ಕೇಂದ್ರ ವಲಯ ಪ್ರಭಾರದಲ್ಲಿ ಬದಲಾವಣೆ

## ಕೆಎನ್‌ಎನ್‌ಎಲ್ ಆಡಳಿತಾತ್ಮಕ ಕ್ರಮ; ಲಕ್ಷ್ಮಣ್ ಎಂ ನಾಯಕ್ ಅವರಿಗೆ ಹೆಚ್ಚುವರಿ ಜವಾಬ್ದಾರಿ

ಮುನಿರಾಬಾದ್:ಫೆ.02–ಕರ್ನಾಟಕ ನೀರಾವರಿ ನಿಗಮ ನಿಯಮಿತ (ಏಓಓಐ) ಕೇಂದ್ರ ವಲಯ ಮುನಿರಾಬಾದ್ ಡ್ಯಾಮ್‌ನ ಮುಖ್ಯ ಅಭಿಯಂತರರ ಪ್ರಭಾರ ಹುದ್ದೆಯಲ್ಲಿ ಆಡಳಿತಾತ್ಮಕ ಬದಲಾವಣೆ ನಡೆದಿದೆ.

ಮಲಪ್ರಭಾ ಯೋಜನಾ ವಲಯ ಧಾರವಾಡದಲ್ಲಿ ಕನೀನಿನಿ ಮುಖ್ಯ ಅಭಿಯಂತರರಾಗಿ ಸೇವೆ ಸಲ್ಲಿಸುತ್ತಿರುವ ಶ್ರೀ ಲಕ್ಷ್ಮಣ್ ಎಂ ನಾಯಕ್ ಅವರು ಈ ಹಿಂದೆ ಕೇಂದ್ರ ವಲಯ ಮುನಿರಾಬಾದ್ ಡ್ಯಾಮ್‌ನ ಮುಖ್ಯ ಅಭಿಯಂತರರ ಪ್ರಭಾರವನ್ನು ವಹಿಸಿಕೊಂಡು ಕಾರ್ಯನಿರ್ವಹಿಸುತ್ತಿದ್ದರು. ನಂತರ ಕೆಲವು ಕಾರಣಾಂತರಗಳಿಂದ, ಅಧೀಕ್ಷಕ ಅಭಿಯಂತರರಾದ ಶ್ರೀ ಶ್ರೀನಿವಾಸ್ ರೆಡ್ಡಿ ಬಿ. ಮಲ್ಲಿಗವಾಡ ಅವರಿಗೆ ಕೇಂದ್ರ ವಲಯ ಮುನಿರಾಬಾದ್‌ನ ಮುಖ್ಯ ಅಭಿಯಂತರರ ಪ್ರಭಾರ ಹುದ್ದೆಯನ್ನು ಹೆಚ್ಚುವರಿಯಾಗಿ ನಿರ್ವಹಿಸುವಂತೆ ಆದೇಶಿಸಲಾಗಿತ್ತು.

ಇತ್ತೀಚಿನ ದಿನಗಳಲ್ಲಿ ಶ್ರೀನಿವಾಸ್ ರೆಡ್ಡಿ ಬಿ. ಮಲ್ಲಿಗವಾಡ ಅವರ ಸಾರ್ವಜನಿಕ ವರ್ತನೆಗೆ ಸಂಬಂಧಿಸಿದಂತೆ ಕೆಲವು ಆರೋಪಗಳು ವ್ಯಕ್ತವಾಗಿದ್ದು, ಅವುಗಳ ಕುರಿತು ಕೆಲ ಕನ್ನಡ ಹಾಗೂ ತೆಲುಗು ದಿನಪತ್ರಿಕೆಗಳಲ್ಲಿ ಸುದ್ದಿಗಳು ಪ್ರಕಟವಾಗಿರುವುದು ಗಮನಾರ್ಹವಾಗಿದೆ. ಈ ಬೆಳವಣಿಗೆಗಳನ್ನು ಪರಿಗಣಿಸಿ, ಆಡಳಿತಾತ್ಮಕ ಮತ್ತು ಸಾರ್ವಜನಿಕ ಹಿತದೃಷ್ಟಿಯಿಂದ ಮುನ್ನೆಚ್ಚರಿಕಾ ಕ್ರಮವಾಗಿ, ಅವರಿಗೆ ನೀಡಲಾಗಿದ್ದ ಮುನಿರಾಬಾದ್ ಕೇಂದ್ರ ವಲಯದ ಮುಖ್ಯ ಅಭಿಯಂತರರ ಹೆಚ್ಚುವರಿ ಪ್ರಭಾರ ಹುದ್ದೆಯ ಆದೇಶವನ್ನು ತಾತ್ಕಾಲಿಕವಾಗಿ ರದ್ದುಪಡಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.

ಈ ಹಿನ್ನೆಲೆಯಲ್ಲಿ, ಶ್ರೀ ಲಕ್ಷ್ಮಣ್ ಎಂ ನಾಯಕ್, ಕನೀನಿನಿ ಮುಖ್ಯ ಅಭಿಯಂತರರು, ಮಲಪ್ರಭಾ ಯೋಜನಾ ವಲಯ ಧಾರವಾಡ ಇವರಿಗೆ ಮತ್ತೆ ಕರ್ನಾಟಕ ನೀರಾವರಿ ನಿಗಮ ನಿಯಮಿತ, ನೀರಾವರಿ ಕೇಂದ್ರ ವಲಯ ಮುನಿರಾಬಾದ್ ಡ್ಯಾಮ್ ಪ್ರಭಾರವನ್ನು ನಿರ್ವಹಿಸುವಂತೆ ಸೂಚಿಸಲಾಗಿದೆ.

ಸಂಸ್ಥೆಯ ಕಾರ್ಯಚಟುವಟಿಕೆಗಳು ಅಡಚಣೆ ಇಲ್ಲದೆ ಮುಂದುವರಿಯಲು ಹಾಗೂ ಸಾರ್ವಜನಿಕ ಹಿತಾಸಕ್ತಿಯನ್ನು ಕಾಪಾಡುವ ಉದ್ದೇಶದಿಂದ ಈ ಆಡಳಿತಾತ್ಮಕ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿದುಬಂದಿದೆ.

## ಶಾಲೆಗಳಲ್ಲಿ ಸರ್ಕಾರದ ಅನುದಾನ ದುರ್ಬಳಕೆ: ದೂರು

ಅಶೋಕಾ ಕೋಟೆ ವಾರ್ತೆ

ಬೀದರ್: ಫೆ. 02–ಜಿಲ್ಲೆಯ ಅನೇಕ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಸರ್ಕಾರದ ಅನುದಾನ ದುರುಪಯೋಗ ಪಡಿಸಿಕೊಳ್ಳಲಾಗಿದೆ ಎಂದು ಭ್ರಷ್ಟಾಚಾರ ನಿರ್ಮೂಲನ ಸಮಿತಿ ಆರೋಪಿಸಿದೆ.

ಸಮಿತಿಯ ಹೈದರಾಬಾದ್ ಕರ್ನಾಟಕ ಪ್ರಾದೇಶಿಕ ಅಧಿಕಾರಿ ಪ್ರಶಾಂತ ಗುತ್ತೆದಾರ್ ಈ ಕುರಿತು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ, ಶಾಲಾ ಶಿಕ್ಷಣ ಇಲಾಖೆಯ ಆಯುಕ್ತ, ಕಲಬುರಗಿ ಹೆಚ್ಚುವರಿ ಆಯುಕ್ತ, ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗೆ ಸೋಮವಾರ ಪ್ರತ್ಯೇಕ ದೂರು ಸಲ್ಲಿಸಿದ್ದಾರೆ.

ಶಾಲೆಗಳಲ್ಲಿನ ಹಣ ದುರ್ಬಳಕೆ ಕುರಿತ ಸಾರ್ವಜನಿಕರ ದೂರುಗಳ ಹಿನ್ನೆಲೆಯಲ್ಲಿ ಸಮಿತಿ ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕರ ಗಮನ ಸೆಳೆದಿದೆ. ಆದರೆ, ಅವರು ತನಿಖೆಗೆ ಆದೇಶಿಸಿಲ್ಲ. ಬದಲಾಗಿ, ಭ್ರಷ್ಟರ ರಕ್ಷಣೆಗೆ ನಿಂತಿದ್ದಾರೆ ಎಂದು ಆಪಾದಿಸಿದ್ದಾರೆ.

ಅಕ್ರಮದ ಕುರಿತು ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು. ಇಲ್ಲವಾದಲ್ಲಿ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದ್ದಾರೆ.

## ಔರಾದ್ ತಾಲ್ಲೂಕಿನಲ್ಲಿ ಆಹಾರ ಇಲಾಖೆ ಭ್ರಷ್ಟಾಚಾರ ಆರೋಪ -ದಲ್ಲಾಳಿಗಳು ಹಾಗೂ ಅಧಿಕಾರಿಗಳ ವಿರುದ್ಧ ದೂರು

ಅಶೋಕಾ ಕೋಟೆ ವಾರ್ತೆ

ಬೀದರ್:ಫೆ. 02– ಔರಾದ್ (ಬಾ) ತಾಲ್ಲೂಕಿನ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯಲ್ಲಿ ದಲ್ಲಾಳಿಗಳು ಹಾಗೂ ಸಂಬಂಧಪಟ್ಟ ಅಧಿಕಾರಿಗಳು ಸೇರಿಕೊಂಡು ಭಾರೀ ಪ್ರಮಾಣದ ಭ್ರಷ್ಟಾಚಾರ ನಡೆಸುತ್ತಿದ್ದಾರೆ ಎಂದು ಕಲ್ಯಾಣ ಕರ್ನಾಟಕ ನಿರ್ಮಾಣ ಸೇನೆಯ ವತಿಯಿಂದ ಉಪ ನಿರ್ದೇಶಕರಿಗೆ ದೂರು ಸಲ್ಲಿಸಲಾಗಿದೆ.

ಹೊಸ ಪಡಿತರ ಚೀಟಿ ನೀಡಲು ಅರ್ಜಿದಾರರಿಂದ ರೂ.3,000 ರಿಂದ ರೂ.5,000 ವರೆಗೆ ಹಣ ಪಡೆಯಲಾಗುತ್ತಿದೆ. ಹಣ ನೀಡುವವರಿಗೆ ಮಾತ್ರ ಪಡಿತರ ಚೀಟಿ ನೀಡಲಾಗುತ್ತಿದ್ದು, ಬಡವರು ಹಣ ನೀಡಲು ಅಸಮರ್ಥರಾದರೆ ಅವರ ಅರ್ಜಿಗಳನ್ನು ನೆಪ ಹೇಳಿ ತಿರಸ್ಕರಿಸಲಾಗುತ್ತಿದೆ ಎಂದು ಆರೋಪಿಸಲಾಗಿದೆ.



ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸದೇ ಪಡಿತರ ಚೀಟಿಗಳನ್ನು ಮಂಜೂರು ಮಾಡುತ್ತಿದ್ದು, ಕೆಲ ಆನ್‌ಲೈನ್ ಸೆಂಟರ್‌ಗಳ ಮಾಲೀಕರ ಸಹಾಯದಿಂದ ಲಂಚ ಸಂಗ್ರಹಿಸಲಾಗುತ್ತಿದೆ ಎಂಬ ಆರೋಪವೂ ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಇದಲ್ಲದೆ, ಕೆಲ ಅಧಿಕಾರಿಗಳು ತಮ್ಮ ಹಾಗೂ ತಮ್ಮ ಪತ್ನಿಯ ಹೆಸರಿನಲ್ಲಿ ಪಡಿತರ ಚೀಟಿಗಳನ್ನು ಹೊಂದಿದ್ದು, ಕುಟುಂಬ ಸದಸ್ಯರ ಹೆಸರಿನಲ್ಲಿ ನ್ಯಾಯಬೆಲೆ ಅಂಗಡಿಗಳನ್ನು ಹೊಂದಿದ್ದಾರೆ ಎಂದು ಆರೋಪಿಸಲಾಗಿದೆ. ನ್ಯಾಯಬೆಲೆ ಅಂಗಡಿಗಳನ್ನು ಮಂಜೂರು ಮಾಡುವ ಸಂದರ್ಭದಲ್ಲಿ ಯಾವುದೇ ನೋಟಿಸ್ ಪ್ರಕಟಿಸದೇ ಹಾಗೂ ಮಾಧ್ಯಮಗಳಲ್ಲಿ ಪ್ರಕಟಣೆ ನೀಡದೇ ಅಕ್ರಮವಾಗಿ ಅನುಮತಿ ನೀಡಲಾಗಿದೆ ಎಂದು ದೂರಿನಲ್ಲಿ ತಿಳಿಸಲಾಗಿದೆ.

ನ್ಯಾಯಬೆಲೆ ಅಂಗಡಿಗಳ ಮೂಲಕ ಪ್ರತಿ ತಿಂಗಳು ರೂ.3,000ರಷ್ಟು ಹಣವನ್ನು ತಾಲ್ಲೂಕು ಆಹಾರ ಇಲಾಖೆಗೆ ನೀಡಬೇಕೆಂದು ಫಲಾನುಭವಿಗಳಿಂದ ಹಣ ವಸೂಲಿಸಲಾಗುತ್ತಿದೆ ಎಂಬ ಗಂಭೀರ ಆರೋಪವೂ ಕೇಳಿಬಂದಿದೆ. ಈ ಮೂಲಕ ತಿಂಗಳಿಗೆ ಸುಮಾರು ರೂ.3 ಲಕ್ಷಕ್ಕೂ ಅಧಿಕ ಮತ್ತು ವರ್ಷಕ್ಕೆ ರೂ.36 ಲಕ್ಷಕ್ಕೂ ಅಧಿಕ ಹಣ ಅಕ್ರಮವಾಗಿ ಸಂಗ್ರಹವಾಗುತ್ತಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಈ ಕುರಿತು ಈಗಾಗಲೇ ಜನವರಿ 20, 23 ಮತ್ತು 28, 2026 ರಂದು ಮಾನ್ಯ ತಹಸೀಲ್ದಾರರಿಗೆ ದೂರು ನೀಡಲಾಗಿದ್ದರೂ ಯಾವುದೇ ಕಾನೂನು ಕ್ರಮ ಕೈಗೊಳ್ಳಲಾಗಿಲ್ಲ ಎಂದು ಸಂಘದ ಮುಖಂಡರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಆದ್ದರಿಂದ, ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಸಮಗ್ರ ತನಿಖೆ ನಡೆಸಿ, ಕಾನೂನು ಕ್ರಮ ಕೈಗೊಳ್ಳಬೇಕು ಹಾಗೂ ಸೇವೆಯಿಂದ ಅಮಾನತು ಮಾಡಬೇಕು ಎಂದು ಸಾರ್ವಜನಿಕರ ಹಿತದೃಷ್ಟಿಯಿಂದ ಆಗ್ರಹಿಸಲಾಗಿದೆ. ಒಂದು ವಾರದೊಳಗೆ ಕ್ರಮ ಕೈಗೊಳ್ಳದಿದ್ದಲ್ಲಿ, ಉಪ ನಿರ್ದೇಶಕರ ಕಚೇರಿ ಎದುರು ಸಾಂಕೇತಿಕ ಸತ್ಯಾಗ್ರಹ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಲಾಗಿದೆ.

ಈ ಸಂದರ್ಭದಲ್ಲಿ ಕಲ್ಯಾಣ ಕರ್ನಾಟಕ ನಿರ್ಮಾಣ ಸೇನೆಯ ಜಿಲಾಧ್ಯಕ್ಷರಾದ ಜೇಮ್ಸ್ ಇಸ್ಲಾಂಪೂರ, ಕಾರ್ಯಕಾರಣಿ ಸದಸ್ಯ ಕಮಲಹಾಸನ್, ತಾಲ್ಲೂಕು ಯುವ ಘಟಕದ ಅಧ್ಯಕ್ಷ ಸಿಧಾರ್ಥ ಯೋಗಿ, ರಾಜು ಶೆಂಬೇಳ್ಳಿ, ಕಾಶಿನಾಥ ಬೇಳಕೆ, ಸೀಮನ್ ಸೂರ್ಯವಂಶಿ ಸೇರಿದಂತೆ ಇದ್ದರು

## ಮಕ್ಕಳ ಹಬ್ಬದಲ್ಲಿ ಗಮನ ಸೆಳೆದ ಬಾಲ್ಯ ವಿವಾಹ ಮುಕ್ತಿ ರಥ ವಾಹನ



ರಾಯಚೂರು ಫೆಬ್ರವರಿ 02 : ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ–2026 ಹಿನ್ನೆಲೆಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಫೆ.2ರಂದು ಆಯೋಜಿಸಿದ್ದ ಮಕ್ಕಳ ಹಬ್ಬ ಕಾರ್ಯಕ್ರಮದಲ್ಲಿ ಬಾಲ್ಯ ವಿವಾಹ ಮುಕ್ತಿ ರಥ ವಾಹನ ಗಮನ ಸೆಳೆಯಿತು.

ನಾವೆಲ್ಲರೂ ಒಟ್ಟಾಗಿ ಬಾಲ್ಯ ವಿವಾಹ ಪದ್ಧತಿಯನ್ನು ನಿರ್ಮೂಲನೆ ಮಾಡೋಣ. ಎಲ್ಲಾ ಮಕ್ಕಳು ತಮ್ಮ ಹಕ್ಕುಗಳು ಪಡೆಯುವುದನ್ನು ಖಚಿತಪಡಿಸಿಕೊಳ್ಳಲು ಕೆಲಸ ಮಾಡೋಣ ಎನ್ನುವ ಸಂದೇಶ ಹೊತ್ತ ಜಾಗೃತಿ ವಾಹನವು ಜಿಲ್ಲಾ ಕ್ರೀಡಾಂಗಣದ ವಿವಿಧೆಡೆ ಸಂಚರಿಸಿತು.

ದೊಡ್ಡ ಸಂಖ್ಯೆಯಲ್ಲಿ ಮಕ್ಕಳು ಸೇರಿರುವ ಕಾರ್ಯಕ್ರಮದಲ್ಲಿ ಸಂಚಾರಿ ಜಾಗೃತಿ ರಥ ವಾಹನದ ಮೂಲಕ ಬಾಲ್ಯ ವಿವಾಹ ನಿಷೇಧ ಕಾಯ್ದೆ ಕುರಿತು ಮಕ್ಕಳಿಗೆ ಜಾಗೃತಿ



ಮೂಡಿಸಲಾಯಿತು. ಮಕ್ಕಳಿಗೆ ಸುರಕ್ಷಿತ ಸ್ಪರ್ಶ, ಅಸುರಕ್ಷಿತ ಸ್ಪರ್ಶ, ಮಕ್ಕಳ ಸಹಾಯವಾಣಿ ಸಂಖ್ಯೆ: 1098 ಹಾಗೂ ಪೋಕ್ಸೋ ಕಾಯ್ದೆ ಕುರಿತು ಕರಪತ್ರ ಹಂಚುವ ಮೂಲಕ ಹಾಗೂ ವೇದಿಕೆಯ ಮುಂಭಾಗದಲ್ಲಿ ಸೆಲ್ಫಿ ಸ್ಟ್ಯಾಂಡ್ ಇಟ್ಟು ಜಾಗೃತಿ ಮೂಡಿಸಲಾಯಿತು.

ಬಾಲ್ಯ ವಿವಾಹ ನಿಷೇಧ ಕುರಿತು ಆಡಿಯೋ ಜಿಂಗಲ್ಸ್ ಮೂಲಕವೂ ಜಾಗೃತಿ ಮೂಡಿಸಲಾಯಿತು.

ಈ ಜಾಗೃತಿ ವಾಹನಕ್ಕೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಚಾಲನೆ ನೀಡಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಈಶ್ವರ ಕುಮಾರ್ ಕಾಂದೂ, ಮಹಾನಗರ ಪಾಲಿಕೆಯ ಆಯುಕ್ತ ಜುಬಿನ್ ಮಹಾಪಾತ್ರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ, ರಾಯಚೂರು ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್, ಜಿಲ್ಲಾ ಮಕ್ಕಳ ರಕ್ಷಣಾ ಅಧಿಕಾರಿ ಅಮರೇಶ್ ಹಾವಿನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಶರಣಮ್ಮ, ಸ್ತ್ರೀ ಶಕ್ತಿ ಒಕ್ಕೂಟದ ಅಧ್ಯಕ್ಷ ಈರಮ್ಮ ಹಾಗೂ ವಿವಿಧ ಇಲಾಖೆಗಳ ಅಧಿಕಾರಿ ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

## ರಾಯಣ್ಣ ಮೂರ್ತಿ ಸ್ಥಾಪನೆಗೆ ಚಾಲನೆ



ಬೀದರ್: ಫೆ. 02–ತಾಲ್ಲೂಕಿನ ಸುಲ್ತಾನಪುರ(ಜೆ) ಗ್ರಾಮದಲ್ಲಿ ಸಂಗೊಳ್ಳಿ ರಾಯಣ್ಣ ಮೂರ್ತಿ ಸ್ಥಾಪನೆಗೆ ಭಾನುವಾರ ಚಾಲನೆ ನೀಡಲಾಯಿತು.

ಭೂಮಿ ಪೂಜೆ ನೆರವೇರಿಸಿದ ಕ್ರಾಂತಿ ವೀರ ಸಂಗೊಳ್ಳಿ ರಾಯಣ್ಣ ಯುವ ಘರ್ಜನೆ ಸಂಘಟನೆಯ ಜಿಲ್ಲಾ ಘಟಕದ ಅಧ್ಯಕ್ಷ ಲೋಕೇಶ್ ಮರ್ಜಾಪುರ ಮಾತನಾಡಿ, ಗ್ರಾಮದಲ್ಲಿ ಸಂಗೊಳ್ಳಿ ರಾಯಣ್ಣರ ಸುಂದರ ಮೂರ್ತಿ ನಿರ್ಮಿಸುತ್ತಿರುವುದು ಸಂತಸದ ಸಂಗತಿ ಎಂದರು.

ಸಂಘಟನೆಯ ಜಿಲ್ಲಾ ಘಟಕದ ಗೌರವಾಧ್ಯಕ್ಷ ಶಿವರಾಜ ಮಲ್ಕಾಪುರೆ, ಉಪಾಧ್ಯಕ್ಷ ಶಿವು ಚಿಮಕೋಡೆ, ಖಜಾಂಚಿ ರಾಜ ಟಗರು ಆಣದೂರು, ಪ್ರಮುಖರಾದ ಯಲ್ಲಾಲಿಂಗ ಮಲ್ಕಾಪುರ, ಕುಮಾರ ನಿಜಾಂಪುರ, ಶರಣು ಟೊಳ್ಳೆ, ಸಂಜು ನಿಜಾಂಪುರ, ಬಾಬು ಮಲ್ಕಾಪುರೆ, ಜಾರ್ಜ್ ಮೈಲೂರ, ಗ್ರಾಮದ ರವಿ, ನೆಹರೂ, ಶಿವರಾಮ, ಶ್ರೀಕಾಂತ, ಶಿವಕುಮಾರ, ಅಶೋಕ, ಸೋಮನಾಥ, ಸ್ಟೀವನ್, ಮುತ್ತಯ್ಯ, ಕುಪೇಂದ್ರ ಡಿ.ಎಸ್, ರಾಜು, ಸಚಿನ್, ಗೋಪಾಲ್, ಸುನೀಲ್, ಸುಭಾಷ್, ಸಿದ್ದು ಮತ್ತಿತರರು ಇದ್ದರು.

## ಪ್ರಬಂಧ ಚಿತ್ರಕಲೆ ಸ್ಪರ್ಧೆ ವಿಜೇತರಿಗೆ ಬಹುಮಾನ ವಿತರಣೆ

ಅಶೋಕಾ ಕೋಟೆ ವಾರ್ತೆ

ಕನಕಗಿರಿ :–ಫೆ. 02– ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಕೊಪ್ಪಳ, ಹಾಗೂ ಶಿಶು ಅಭಿವೃದ್ಧಿ ಯೋಜನಾಧಿಕರಿಗಳು ಕನಕಗಿರಿ ಮತ್ತು ಶ್ರೀ ಬೀರೇಂದ್ರಕೇಶವ ತಾರಕಾನಂದಪುರಿ ರೂರಲ್ ಎಜ್ಯುಕೇಷನ್ ಸೊಸೈಟಿ(ರಿ) ಕನಕಗಿರಿ.

ಮಹಿಳಾ ಸಾಂತ್ವನ ಸಹಾಯವಾಣಿ ಕೇಂದ್ರ,

ವತಿಯಿಂದ *ಹೆಣ್ಣು ಮಕ್ಕಳಿಗೆ ಶಿಕ್ಷಣದ ಮಹತ್ವ.*ಹೆಣ್ಣು ಶಕ್ತಿ – ನಾಳೆಯ ನಾಯಕತ್ವ.*ಬಾಲ್ಯ ವಿವಾಹ ಸಾಮಾಜಿಕ ಪಿಡುಗು.*ಲಿಂಗ ಸಮಾನತೆ? ಪ್ರಗತಿಶೀಲ ಸಮಾಜದ ಗುರುತು.*ಸ್ವಾಸ್ಥ್ಯ ನಾರಿ ಸಶಕ್ತ ಪರಿವಾರ. ಕುರಿತು ವಿದ್ಯಾರ್ಥಿಗಳಿಗೆ

ಪ್ರಬಂಧದ ಸ್ಪರ್ಧೆ ಹಾಗೂ *ಬಾಲ್ಯ ವಿವಾಹ ನಿಷೇಧ ಕುರಿತು ಜಾಗೃತಿ ಬಿತ್ತಿ ಪತ್ರದ ಚಿತ್ರ.*ಹೆಣ್ಣು ಮಕ್ಕಳ ಸಾಧನೆ ಕುರಿತು.*ಬಾಲ



ಕಾರ್ಮಿಕ ನಿಷೇಧ ಕುರಿತು ಚಿತ್ರಕಲೆ ಸ್ಪರ್ಧೆ ಸ್ಪರ್ಧೆಯನ್ನು ಕನಕಗಿರಿ ಬೆಸ್ಟ್ ಪಿಯು ಕಾಲೇಜ್ ಹಾಗೂ ಜೂನಿಯರ್ ಕಾಲೇಜ್ ನಲ್ಲಿ ಆಯೋಜಿಸಲಾಗಿತ್ತು.

ಸುಮಾರು ನೂರಕ್ಕೂ ಅಧಿಕ ವಿದ್ಯಾರ್ಥಿಗಳು ಸ್ಪರ್ಧೆಯಲ್ಲಿ ಭಾಗವಹಿಸಿದ್ದರು. ಸರ್ಕಾರಿ ಪದವಿಪೂರ್ವ ಕಾಲೇಜ್ ಪ್ರಬಂಧದ ಸ್ಪರ್ಧೆಯ ವಿಜೇತರಾದ ವಿದ್ಯಾರ್ಥಿಗಳು 1ನೇ ಸ್ಥಾನ ಕುಮಾರಿ.ಶಿಲ್ಪಾ ಒಖ0029, 2ನೇ ಸ್ಥಾನ ಕುಮಾರಿ. ಕಾವೇರಿ ಒಖ0011, 3ನೇ ಸ್ಥಾನ ಶ್ರೀ.ನವೀನ್ ಕುಮಾರ ಒಖ0015, ಚಿತ್ರಕಲೆಯ ವಿಜೇತರು 1ನೇ ಸ್ಥಾನ ಶ್ರೀ.ಅರುಣ ನಿರಂಜನ್ ಒಖ0036

2ನೇ ಸ್ಥಾನ ಕುಮಾರ.ವೀರೇಶ ಒಖ0033

3ನೇ ಸ್ಥಾನ ಕುಮಾರಿ.ಜ್ಯೋತಿ MS0037

ಬೆಸ್ಟ್ ಕಾಲೇಜ್ 1ನೇ ಸ್ಥಾನ ಕುಮಾರಿ.ವಿಜಯಲಕ್ಷ್ಮೀ ಎಸ್, 2ನೇ ಸ್ಥಾನ ಕುಮಾರಿ. ಅಂಕಿತ ಶರಣಪ್ಪ, 3ನೇ ಸ್ಥಾನ ಕುಮಾರ.ಪ್ರಭಾಂಜನೇಯ

ಚಿತ್ರಕಲಾ ಸ್ಪರ್ಧೆಯಲ್ಲಿ 1ನೇ ಸ್ಥಾನ ಕುಮಾರಿ.ವಿ.ಶೇಷವಲ್ಲಿ ವಿಜೇತರಾದ ವಿದ್ಯಾರ್ಥಿಗಳನ್ನು ತಹಶೀಲ್ದಾರ ವಿಶ್ವಾನಾಥ ಮುರುಡಿ, ಪ.ಪಂ.ಅಧ್ಯಕ್ಷೆ ತನುಶ್ರೀ ಹಾಗೂ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಕೆ.ರಾಜಶೇಖರ ಮತ್ತು ಸಿಡಿಪಿಓ, ವೀರುಪಾಕ್ಷಿ ಸ್ವಾಮಿ ಅಭಿನಂದಿಸಿ ಬಹುಮಾನ ವಿತರಿಸಿದರು.

ಪ.ಪಂ.ಮುಖ್ಯಾಧಿಕಾರಿ ಲಕ್ಷ್ಮಣ್ಣ ಕಟ್ಟಿಮನಿ. ಪೋಲೀಸ್ ಅಧಿಕಾರಿ ಎಂ.ಡಿ.ಫೈಜುಲ್ ಊರಿನ ಮುಖಂಡರು ಮಾನ್ಯ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ವಿರೂಪಾಕ್ಷ ಹಾಗೂ ಸಂಸ್ಥೆಯ ಕಾರ್ಯದರ್ಶಿಗಳಾದ ನವೀನ್ ಕುಮಾರ್, ಸಾಂತ್ವನ ಕೇಂದ್ರದ ಕೌಟುಂಬಿಕ ಸಲಹೆಗಾರರಾದ ಶ್ರೀಮತಿ ಜಯಶ್ರೀ ಬಿ ದೇವರಾಜ್, ಮತ್ತು ಸಮಾಜ ಕಾರ್ಯಕರ್ತರಾದ ಪಾರ್ವತಿ, ಹೊನ್ನೂರ್ ಬಿ ಹಾಗೂ ಐಶ್ವರ್ಯ ರವರು ಹಾಜರಿದ್ದರು.

## ಧ್ವನಿ ಮತ್ತು ಬೆಳಕು ಕಾರ್ಯಕ್ರಮಕ್ಕೆ ಫೆ.4 ರಂದು ಕಲಾವಿದರ ಆಯ್ಕೆ

ವಿಜಯನಗರ (ಹೊಸಪೇಟೆ) ಫೆ. 02–ಕೇಂದ್ರ ಸಂವಹನ ಇಲಾಖೆಯ ಸಂಗೀತ ಮತ್ತು ನಾಟಕ ವಿಭಾಗ, ಪ್ರವಾಸೋದ್ಯಮ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಭಾರತೀಯ ಪುರಾತತ್ವ ಸರ್ವೇಕ್ಷಣಾಲಯ, ಹಂಪಿ ಹಾಗೂ ಜಿಲ್ಲಾಡಳಿತದ ಸಹಯೋಗದಲ್ಲಿ ಹಂಪಿ ಉತ್ಸವ–2026 ರ ನಿಮಿತ್ತ "ವಿಜಯನಗರ ವೈಭವ" ಬೃಹತ್ ಧ್ವನಿ ಮತ್ತು ಬೆಳಕು. ಕಾರ್ಯಕ್ರಮವನ್ನು ಹಂಪಿಯ ಆನೆಲಾಯದ ಆವರಣದಲ್ಲಿ ಫೆ.13 ರಿಂದ 19 ರ ವರೆಗೆ ಆಯೋಜಿಸಲಾಗಿದೆ.

ಧ್ವನಿ ಮತ್ತು ಬೆಳಕು ಕಾರ್ಯಕ್ರಮ ಆಯೋಜಿಸುವ ನಿಟ್ಟಿನಲ್ಲಿ ಫೆ.04 ರಂದು ಬೆಳ್ಳಿಗೆ 10 ಗಂಟೆಗೆ ನಗರದ ಸಂಡೂರು ರಸ್ತೆಯಲ್ಲಿನ ನೌಕರರ ಭವನದಲ್ಲಿ ಕಲಾವಿದರ ಆಯ್ಕೆ ಪ್ರಕ್ರಿಯೆ ಹಮ್ಮಿಕೊಳ್ಳಲಾಗಿದೆ. ಆಸಕ್ತ ಕಲಾವಿದರು ಮತ್ತು ಭರತ ನಾಟ್ಯ ಪರಿಣಿತರು ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸಬಹುದಾಗಿದೆ. ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವವರು 2 ಸ್ಟ್ಯಾಂಪ್ ಸೈಜ್ ಭಾವಚಿತ್ರ, ಆಧಾರ ಕಾರ್ಡ ಅಥವಾ ಓಟರ್ ಐ.ಡಿ, ಗೆಜೆಟೆಡ್ ಅಧಿಕಾರಿಗಳಿಂದ ಪಡೆದ ನಡತೆ ಪ್ರಮಾಣ ಪತ್ರ, ಈ ಹಿಂದೆ ಇಂತಹ ಕಾರ್ಯಕ್ರಮದಲ್ಲಿ ಭಾಗವಹಿಸಿದ ಬಗ್ಗೆ ದಾಖಲಾತಿ, ಸರ್ಕಾರಿ ಮತ್ತು ಅನುದಾನಿತ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರು ತಮ್ಮ ನೇಮಕಾತಿ ಪ್ರಾಧಿಕಾರದಿಂದ ಕಾರ್ಯಕ್ರಮದಲ್ಲಿ ಭಾಗವಹಿಸುವ ಬಗ್ಗೆ ಸ್ಪಷ್ಟವಾದ ಅನುಮತಿ ಪತ್ರ ಹಾಗೂ ಜಿಲ್ಲಾಧಿಕಾರಿಗಳಿಂದ ಪತ್ರಕ್ಕೆ ಅನುಮೋದನೆ ಪಡೆದು ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸಬಹುದಾಗಿದೆ.

ಆಯ್ಕೆಯಾದ ಕಲಾವಿದರು 7 ದಿನಗಳ ಕಾಲ ಪೂರ್ವ ಸಿದ್ದತಾ ತರಬೇತಿಯಲ್ಲಿ ಗೈರು ಹಾಜರಾತಿ ಇಲ್ಲದೇ ಭಾಗವಹಿಸುವುದು ಕಡ್ಡಾಯವಾಗಿರುತ್ತದೆ ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ತಿಳಿಸಿದ್ದಾರೆ.

## ನಾಳೆ ಬೀದರ್‌ನಲ್ಲಿ ಆರೋಗ್ಯ ಹಕ್ಕಿನ ಕಾಯ್ದೆ ಜಾರಿಗಾಗಿ ಜಾಥಾ: ಭೀಮಾ



ಬೀದರ್: ಫೆ. 02–ನಾಳೆ ಬುಧವಾರ ನಗರದ ಅಂಬೇಡ್ಕರ್ ವೃತ್ತದಿಂದ ಜನವಾಡ ರಸ್ತೆಯಲ್ಲಿರುವ ಸಹಾಯಕ ಆಯುಕ್ತರ ಕಚೇರಿ ವರೆಗೆ ರಾಜ್ಯದಲ್ಲಿ ಆರೋಗ್ಯ ಹಕ್ಕಿನ ಕಾಯ್ದೆ ಜಾರಿಗೆ ಆಗ್ರಹಿಸಿ ಜಾಥಾ ಹಮ್ಮಿಕೊಳ್ಳಲಾಗಿದೆ ಎಂದು ಲಿಂಗತ್ವ ಮತ್ತು ಲೈಂಗಿಕ ಬಹುತ್ವಕ್ಕಾಗಿ ಚಳುವಳಿಯ ಮುಖ್ಯಸ್ಥ ಭೀಮಾ ತಿಳಿಸಿದರು.

ಸೋಮವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಫೆ.2ರಿಂದ ಈ ತಿಂಗಳ 17ರ ವರೆಗೆ ರಾಜ್ಯಾದ್ಯಂತ ಜಾಥಾ ಹಮ್ಮಿಕೊಳ್ಳಲಾಗಿದ್ದು, ಬೀದರ್‌ನಲ್ಲಿ ಫೆ.4ರಂದು ಹಮ್ಮಿಕೊಳ್ಳಲಾಗಿದೆ ಎಂದರು.

ಲಿಂಗತ್ವ ಬದಲಾವಣೆಗಾಗಿ ಸುಮಾರು 5ರಿಂದ 6 ಲಕ್ಷ ವರೆಗೆ ಖರ್ಚು ಬರಲಿದ್ದು, ಸರ್ಕಾರವೇ ಈ ವೆಚ್ಚ ಭರಿಸಿ ನಮಗೆ ನ್ಯಾಯ ಒದಗಿಸಬೇಕು. ನಮ್ಮ ಈ ಜಾಥಾಗೆ ಹಲವಾರು ಸಂಘಟನೆಗಳು ಕೈ ಜೋಡಿಸಿದ್ದಕ್ಕೆ ಅವರಿಗೆ ಕೃತಜ್ಞತೆ ಸಲ್ಲಿಸುವುದಾಗಿ ಭೀಮಾ ಹೇಳಿದರು.

ಪ್ರಗತಿಪರ ಚಿಂತಕ ಮಹೇಶ ಗೋರನಾಳಕರ್ ಮಾತನಾಡಿ, ವ್ಯಕ್ತಿಯ ಘನತೆ ಹಾಗೂ ಗೌರವ ಎತ್ತಿ ಹಿಡಿಯುವ ಕೆಲಸ ಸಂವಿಧಾನ ಮಾಡುತ್ತಿದೆ. ಅದರ ಆಶಯದಂತೆ ಲಿಂಗತ್ವ ಅಲ್ಪಸಂಖ್ಯಾತರಿಗಾಗಿ ಪ್ರತ್ಯೇಕ ನಿಗಮ ಸ್ಥಾಪಿಸಿ ಅವರ ಬೇಕು, ಬೇಡಿಕೆಗಳನ್ನು ಸರ್ಕಾರ ಪ್ರಾಮಾಣಿಕ ರೀತಿಯಲ್ಲಿ ಪುರೈಸಬೇಕೆಂದು ಕರೆ ನೀಡಿದರು.

ಓಂಪ್ರಕಾಶ ರೊಟ್ಟೆ ಈ ಸಂದರ್ಭದಲ್ಲಿ ಮಾತನಾಡಿ, ಎಲ್ಲ ಆಸ್ಪತ್ರೆಗಳಲ್ಲಿ ಬಡ ರೋಗಿಗಳಿಗೆ ಔಷಧ ಪುರೈಕೆಯಾಗಬೇಕು. ಹೊರಗಡೆ ಚೀಟಿ ಬರೆದು ಕೊಡದೇ ಸರ್ಕಾರವೇ ಅದನ್ನು ಪುರೈಕೆ ಮಾಡಬೇಕು. ಸಾರ್ವತ್ರಿಕವಾಗಿರುವ ಈ ಜಾಥಾವನ್ನು ಎಲ್ಲರು ಸೇರಿ ಯಶಸ್ವಿಗೊಳಿಸಬೇಕೆಂದು ಕರೆ ಕೊಟ್ಟರು.

ಜಗದೀಶ್ವರ ಬಿರಾದಾರ ಮಾತನಾಡಿ, ಪ್ರತಿ ಸಲವೂ ಚಿಕಿತ್ಸೆಯ ಖರ್ಚಿನಲ್ಲಿ 60% ರಿಂದ 70% ಖರ್ಚು ಔಷಧಗಳ ಮೇಲೆ ಇರುತ್ತದೆ. ಈ ಕಾರಣಕ್ಕಾಗಿ ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತ ಔಷಧ ಸಿಗಬೇಕು, ಎಲ್ಲಾ ಸರ್ಕಾರಿ ವ್ಯವಸ್ಥೆಗಳಲ್ಲಿ ಪ್ರತಿಯೊಬ್ಬರಿಗೂ ಔಷಧಗಳು ಉಚಿತವಾಗಿ ಲಭ್ಯವಾಗುತ್ತಿರಬೇಕು. ಸರಕಾರಿ ಆಸ್ಪತ್ರೆಗಳಲ್ಲಿ ಸಿಗುವ ಔಷಧಗಳ ಗುಣಮಟ್ಟ ಉತ್ತಮವಾಗಿ ಇರಬೇಕು ಎನ್ನುವ ಜವಾಬ್ದಾರಿಯನ್ನೂ ಸರ್ಕಾರ ವಹಿಸಬೇಕು. ತಮಿಳು–ನಾಡು", ಕೇರಳ, ಹಾಗು ರಾಜಸ್ಥಾನಗಳು ಈಗಾಗಲೇ ಜನರಿಗೆ ಉಚಿತ ಔಷಧಗಳು ಸಿಗುವಂತೆ ಮಾಡಿವೆ. ತಮಿಳುನಾಡು ಮಾದರಿಯಲ್ಲೇ ನಮ್ಮ ಕರ್ನಾಟಕದಲ್ಲೂ "ಕರ್ನಾಟಕ ರಾಜ್ಯ ವೈದ್ಯಕೀಯ ಸರಬರಾಜು ನಿಗಮ' ವನ್ನು 2013ರಲ್ಲಿಯೇ ಆರಂಭಿಸಲಾಗಿದೆ. ಆದರೆ ಇದು ಪರಿಣಾಮಕಾರಿಯಾಗಿ ಕೆಲಸ ಮಾಡುತ್ತಿಲ್ಲ ಎಂದು ಕಳವಳ ವ್ಯಕ್ತಿಪಡಿಸಿದರು.

## ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರ ಪ್ರವಾಸ

ಬೆಂಗಳೂರು, ಫೆಬ್ರವರಿ 02 :ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಹೆಚ್.ಎಂ.ರೇವಣ್ಣ ಅವರು ಫೆಬ್ರವರಿ 6 ರಂದು ರಾಯಚೂರು ಜಿಲ್ಲೆಯ ಪ್ರವಾಸ ಕೈಗೊಳ್ಳಲಿದ್ದಾರೆ. ಜನವರಿ 07ರಂದು ರಾಯಚೂರಿನ ಕೃಷಿವಿಶ್ವವಿದ್ಯಾಲಯದ ಆವರಣದಲ್ಲಿ ಆಯೋಜಿಸಿರುವ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಕಾರ್ಯಾಗಾರ ಮತ್ತು ಪ್ರಗತಿ ಪರಿಶೀಲನಾ ಸಭೆಯಲ್ಲಿ ಪಾಲ್ಗೊಂಡು ಅಂದೇ ಕೇಂದ್ರಸ್ಥಾನಕ್ಕೆ ಹಿಂದಿರುಗಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

# ಬೆಂಬಲ ಬೆಲೆಯಲ್ಲಿ ಕಡಲೇಕಾಳು ಖರೀದಿ ನೋಂದಣಿ ಕೇಂದ್ರಗಳ ಪ್ರಾರಂಭ

ಕೊಪ್ಪಳ ಫೆ.02: 2025-26ನೇ ಸಾಲಿನ ಹಿಂಗಾರು ಹಂಗಾಮಿನಲ್ಲಿ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಕಡಲೇಕಾಳು ಖರೀದಿ ನೋಂದಣಿ ಕೇಂದ್ರಗಳನ್ನು ಪ್ರಾರಂಭಿಸಲು ತೀರ್ಮಾನಿಸಲಾಗಿರುತ್ತದೆ.

ಸರ್ಕಾರದ ಆದೇಶ ಸಂಖ್ಯೆ: ಸಿಒ 336 ಎಂಆರ್‌ಇ 2025 ಬೆಂಗಳೂರು, ದಿನಾಂಕ:29/01/2026 ಸನ್ 2025-26ನೇ ಸಾಲಿನ ಹಿಂಗಾರು ಹಂಗಾಮಿನಲ್ಲಿ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಕೇಂದ್ರ ಸರ್ಕಾರವು ನಿಗದಿಪಡಿಸಿರುವ ಬೆಂಬಲ ಬೆಲೆ ದರ ಪ್ರತಿ ಕ್ವಿಂಟಾಲ್‌ಗೆ ರೂ.5,875 ರಂತೆ ಎಫ್..ಎ.ಕ್ಯೂ. ಗುಣಮಟ್ಟದ ಕಡಲೇಕಾಳನ್ನು ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಕೊಪ್ಪಳ ಜಿಲ್ಲೆಯ ರೈತರಿಂದ ಖರೀದಿಸುವ ಕುರಿತು ಶುಕ್ರವಾರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿಯ ಸಭೆಯನ್ನು ಜರುಗಿಸಿ, ಸಭೆಯಲ್ಲಿ ತೀರ್ಮಾನಿಸಿದಂತೆ ಎಕರೆಗೆ 4 ಕ್ವಿಂಟಾಲ್‌ನಂತೆ ಒಬ್ಬ ರೈತರಿಂದ ಗರಿಷ್ಟ 40 ಕ್ವಿಂಟಲ್‌ರಂತೆ ಜಿಲ್ಲೆಯ ವಿವಿಧ ಸ್ಥಳಗಳಲ್ಲಿ ಕಡಲೇಕಾಳು ಖರೀದಿ ನೋಂದಣಿ ಕೇಂದ್ರಗಳನ್ನು ಪ್ರಾರಂಭಿಸಲು ತೀರ್ಮಾನಿಸಲಾಗಿರುತ್ತದೆ.

ಕಡಲೇಕಾಳು ಖರೀದಿ ನೋಂದಣಿ ಕೇಂದ್ರಗಳ ವಿವರ: ಕೊಪ್ಪಳ ತಾಲ್ಲೂಕಿನ ಮುದ್ದಾಬಳ್ಳಿ, ಹಿರೇಸಿಂಧೋಗಿ, ಕವಲೂರು, ಅಳವಂಡಿ, ಘಟ್ಟರೆಡ್ಡಿಹಾಳ ಹಾಗೂ ಬೆಟಗೇರಿ ಸೇರಿ 6 ಖರೀದಿ ಕೇಂದ್ರಗಳನ್ನು ಪ್ರಾರಂಭಿಸಲಾಗಿದೆ. ಕನಕಗಿರಿ ತಾಲ್ಲೂಕಿನ ನವಲಿ ಮತ್ತು ಕನಕಗಿರಿ, ಕುಕನೂರು ತಾಲ್ಲೂಕಿನ ಕುಕನೂರು, ಚಿಕ್ಕೆನಕೊಪ್ಪ, ಬನ್ನಿಕೊಪ್ಪ, ಮಂಗಳೂರು, ತಳಕಲ್ ಮತ್ತು ಮಂಡಲಗೇರಿ, ಯಲಬುರ್ಗಾ ತಾಲ್ಲೂಕಿನ ಯಲಬುರ್ಗಾ, ಮುಧೋಳ, ಗೆದಗೇರಿ ಮತ್ತು ತೊಂಡಿಹಾಳ ಹಾಗೂ ಕುಷ್ಟಗಿ ತಾಲ್ಲೂಕಿನ ಮೆಣೇದಾಳ (ತಾವರಗೇರೆ), ಹನುಮಸಾಗರ ಮತ್ತು ಕುಷ್ಟಗಿ, ಈ ಎಲ್ಲಾ ಕೇಂದ್ರಗಳ 'ಪಿಎಸಿಎಸ್' ಖರೀದಿ ನೋಂದಣಿ, ಖರೀದಿ ಕೇಂದ್ರ ಏಜನ್ಸಿಗಳಾಗಿರುತ್ತದೆ.

ನೋಡಲ್ ಅಧಿಕಾರಿಗಳ ವಿವರ: ಖರೀದ ಕೇಂದ್ರಗಳ ನೋಡಲ್ ಅಧಿಕಾರಿಗಳ ವಿವರ ಇಂತಿದೆ. ಕೊಪ್ಪಳ ತಾಲ್ಲೂಕಿನ ಎಲ್ಲಾ ಖರೀದಿ ಕೇಂದ್ರಗಳಿಗೆ ಕೊಪ್ಪಳ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಕಾರ್ಯದರ್ಶಿ ಸಿದ್ದಯ್ಯಸ್ವಾಮಿ ಮೊ.ಸಂ: 9902224089, ಇವರು ನೋಡಲ್ ಅಧಿಕಾರಿಯಾಗಿದ್ದಾರೆ. ಕನಕಗಿರಿ ತಾಲ್ಲೂಕಿನ ಖರೀದಿ ಕೇಂದ್ರಗಳಿಗೆ ಕನಕಗಿರಿಯ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಕಾರ್ಯದರ್ಶಿ ಸಾವಿತ್ರಿ ಪಾಟೀಲ ಮೊ.ಸಂ: 9341978290, ಕುಕನೂರು ಮತ್ತು ಯಲಬುರ್ಗಾ ತಾಲ್ಲೂಕುಗಳ ಖರೀದಿ ಕೇಂದ್ರಗಳಿಗೆ ಯಲಬುರ್ಗಾ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಕೇಂದ್ರ ಕಛೇರಿ ಕುಕನೂರಿನ ಕಾರ್ಯದರ್ಶಿ ಗುರುಸ್ವಾಮಿ ಗುಡಿ ಮೊ.ಸಂ: 9972054874 ಹಾಗೂ ಕುಷ್ಟಗಿ ತಾಲ್ಲೂಕಿನ ಖರೀದಿ ಕೇಂದ್ರಗಳಿಗೆ ಕುಷ್ಟಗಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಕಾರ್ಯದರ್ಶಿ ಸುರೇಶ ಬಿ. ತಂಗನೂರು ಮೊ.ಸಂ: 9880886909, ಇವರು ನೋಡಲ್ ಅಧಿಕಾರಿಯಾಗಿದ್ದಾರೆ.

ಪ್ರತಿ ಎಕರೆಗೆ ಗರಿಷ್ಠ 4 ಕ್ವಿಂಟಾಲ್‌ರಂತೆ ಪ್ರತಿ ರೈತ-ರಿಂದ ಗರಿಷ್ಠ 40 ಕ್ವಿಂಟಾಲ್ ಕಡಲೇಕಾಳು ಉತ್ಪನ್ನವನ್ನು ಖರೀದಸಲಾಗುತ್ತದೆ. ಎಫ್.ಎ.ಕ್ಯೂ. ಗುಣಮಟ್ಟದ ಕಡಲೇಕಾಳನ್ನು ಮಾತ್ರ ಖರೀದಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳ, ಕೊಪ್ಪಳದ ಶಾಖಾ ವ್ಯವಸ್ಥಾಪಕರ ಮೊ.ಸಂ: 8105690611 ಇವರನ್ನು ಸಂಪರ್ಕಿಸಬಹುದು ಎಂದು ಕೊಪ್ಪಳ ಕೃಷಿ ಮಾರಾಟ ಇಲಾಖೆ ಸಹಾಯಕ ನಿರ್ದೇಶಕರು ಹಾಗೂ ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿಯ ಸದಸ್ಯ ಕಾರ್ಯದರ್ಶಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಂವಿಧಾನಕ್ಕೆ ವಿರುದ್ಧವಾದ ನಡೆಗಳು ದೇಶಕ್ಕೆ ಅಶಾಂತಿ ಉಂಟು ಮಾಡುತ್ತವೆ: ಜಿಲ್ಲಾ ಕಾರ್ಮಿಕ ಅಧಿಕಾರಿ ಮಹೇಶ



ಬೀದರ: ಫೆ. 02 - ನಗರ ಅಂಬೇಡ್ಕರ ಕಾಲೋನಿ ಹತ್ತಿರ ಇವರು ಕರುನಾಡು ಕಟ್ಟಡ ಇತರೆ ನಿರ್ಮಾಣ ಕಾರ್ಮಿಕ ಹಾಗೂ ಗೀಲಾವ ಕಾರ್ಮಿಕರ ಸಂಘ ಜಿಲ್ಲಾ ಘಟಕ ಆಯೋಜನೆ ಮಾಡಿರುವ 77ನೇ ಗಣರಾಜ್ಯೋತ್ಸವ ಧ್ವಜಾರೋಹಣ ಮಾಡಿ ದೇಶದ ಎಲ್ಲಾ ಜನರಿಗೆ ಪ್ರಜಾಪ್ರಭುತ್ವದ ದೀಕ್ಷೆ ನೀಡಿ ಸರ್ವರು ಸಮಾನರು, ಸರ್ವರಿಗೂ ಸಮಾನ ಪ್ರಗತಿ ಸರ್ವರಿಗೂ ಸಮಾನ ರಕ್ಷಣೆ ಕೊಟ್ಟಿರುವ ವಿಶ್ವದ ಏಕೈಕ ಸಂವಿಧಾನ ನಮ್ಮ ಭಾರತ ಸಂವಿಧಾನವಾಗಿದೆ. ತಮ್ಮ ತಮ್ಮ ಜಾತಿ ಧರ್ಮಕ್ಕಿಂತ ದೇಶದ ರಾಜ್ಯಾಂಗ ಧರ್ಮಕ್ಕೆ ಗೌರವ ನೀಡಬೇಕು ಸರ್ಕಾರಿ ಕೆಲಸ ಕಾರ್ಯಗಳಲ್ಲಿ ಸಂಪೂರ್ಣವಾಗಿ ಸಂವಿಧಾನಬದ್ದವಾಗಿ ಸಂವಿಧಾನದ ಮೂಲಕವಾಗಿ ಜಾರಿಯಲ್ಲಿ ಕಾಯ್ದೆ ಕಾನೂನುಗಳು ಗೌರವಿಸಬೇಕು. ಕಾರ್ಮಿಕ ಪ್ರಗತಿಗಾಗಿ ಏಂಟು ಗಂಟೆ ದುಡಿಮೆ ದುಡಿಮೆಗೆ ತಕ್ಕ ವೇತನ ಕಾರ್ಮಿಕ ಇಲಾಖೆಯ ಸೇವಾ ಸೌಲಭ್ಯಗಳು ಬಾಬಾಸಾಹೇಬರು ಸಂವಿಧಾನದ ಮೂಲಕ ಹಾಕಿಕೊಟ್ಟಿರುವ ಯೋಜನೆಗಳಾಗಿವೆ, ಅವರ ಪುಣ್ಯದ ಫಲವಾಗಿ ಕಾರ್ಮಿಕರ ಮಕ್ಕಳು ವೈದ್ಯರು ಇಂಜಿನಿಯರ ಲಾಯರ್ ಐಎಎಸ್. ಕೆ ಎ ಎಸ್ ಅಧಿಕಾರಿಗಳಾಗಿ ಸೇವೆಯನ್ನು ಮಾಡುತ್ತಿದ್ದಾರೆ. ಕಾರ್ಮಿಕರಿಗೆ ಅನ್ಯಾಯವಾದಾಗ, ಸಂವಿಧನಾದ ಮೂಲಕ ಹೋರಾಟ ಮಾಡಿ ನ್ಯಾಯವನ್ನು ಪಡೆಯುವ ಹಕ್ಕು ಬಾಬಾಸಾಹೇಬರು ಕೊಟ್ಟಿದ್ದಾರೆ. ಸಂವಿಧಾನದ ವಿರುದ್ದ ದೇಶದ ವಿರುದ್ದ ಮಾತನಾಡಿ ಅಶಾಂತಿ ಉಂಟು ಮಾಡುವವರ ಮೇಲೆ ನಿರ್ಧಾಕ್ಷಣ ಕ್ರಮ ಜರುಗಿಸಿಬೇಕು. ವೀರ ಕನ್ನಡಿಗರ ಸೇನೆ ರಾಜ್ಯ ಸಂಚಾಲಕ ಡಾ. ಸುಬ್ಬಣ್ಣ ಕರಕನಳ್ಳಿ ಮಾತನಾಡಿ ಯಾವುದೇ ಜಾತಿ ಧರ್ಮ ಪ್ರದೇಶ ವ್ಯಕ್ತಿಗಿಂತ ದೇಶ ದೊಡ್ಡದು, ನಮ್ಮ ಕಟ್ಟಕಡೆ-ಯ ಹನಿ ರಕ್ತವಾದರು ಹರಿಸಿ ದೇಶದ ಸಂವಿಧಾನ ಹಾಗೂ ಸ್ವಾತಂತ್ರ್ಯವನ್ನು ರಕ್ಷಣೆ ಮಾಡಬೇಕು ಎನ್ನುವ ಅಂಬೇಡ್ಕರ ಸಾಹೇಬರ ಮಾತು ಉಲ್ಲೇಖಿಸಿದರು. ಅಧ್ಯಕ್ಷತೆ ಕರುನಾಡು ಕಟ್ಟಡ ಇತರೆ ನಿರ್ಮಾಣ ಕಾರ್ಮಿಕರ ಹಾಗೂ ಗೀಲಾವಾ ಕಾರ್ಮಿರ ಸಂಘ ಜಿಲ್ಲಾಧ್ಯಕ್ಷ ಸಂಜುಕುಮಾರ ವಹಿಸಿದರು ಕನ್ನಡಿಗರ ರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷರಾದ ಶ್ರೀಕಾಂತ ಭವಾನಿ, ಕಾರ್ಮಿಕ ಗುತ್ತೇದಾರರಾದಿ ಇಂಬ್ರಾಹಿಂ ಯದಲಾಪೂರ ರವಿ ನರಸಿಂಗ ಅಮಲಾಪೂರ ಬಾಬುಮಿಯ್ಯಾ ಐಸಪೂರ ಅನಿಲಕುಮಾರ ನರಸಿಂಗ ಚಿದ್ರಿ ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ಶಿವಕುಮಾರ ನೀಲಿಕಟ್ಟಿ ಮುಂತಾದವರು ಇದ್ದರು.

# ಯಂತ್ರಚಾಲಿತ ದ್ವಿಚಕ್ರ ವಾಹನಕ್ಕೆ ಅರ್ಜಿ

ಬಾಗಲಕೋಟೆ : ಫೆ. 02: ಪ್ರಸಕ್ತ ಸಾಲಿನ ಅನಿರ್ಭಂದಿತ ಅನುದಾನದಲ್ಲಿ ಶೇ.5 ರಷ್ಟು ಮೀಸಲಿಟ್ಟ ವಿಕಲಚೇತನರ ಅನುದಾನದಲ್ಲಿ ಯಂತ್ರಚಾಲಿತ ದ್ವಿಚಕ್ರವಾಹನವನ್ನು ನೀಡಲಾಗುತ್ತಿದೆ. ಅರ್ಜಿ ಸಲ್ಲಿಸುವ ವಿಕಲಚೇತನರು ವಾರ್ಷಿಕ ವರಮಾನ 2 ಲಕ್ಷ ರೂ.ಗಿಂತ ಕಡಿಮೆ ಇರುವ 20 ರಿಂದ 60 ವರ್ಷದೊಳಗಿನ ಶೇ.75 ರಷ್ಟು ದೈಹಿಕ ವಿಕಲಚೇತನರು ಅರ್ಜಿ ಸಲ್ಲಿಸಬಹುದಾಗಿದೆ. ಅರ್ಹ ಗ್ರಾಮೀಣ ಮಟ್ಟದ ಅಭ್ಯರ್ಥಿಗಳು ಮಾತ್ರ ಅರ್ಜಿಯನ್ನು ಫೆಬ್ರವರಿ 2 ರಿಂದ 10 ವರೆಗೆ ತಾಲೂಕಾ ಪಂಚಾಯತ, ಬಾಗಲಕೋಟೆ ಕಚೇರಿಗೆ ಸಲ್ಲಿಸುವಂತೆ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಎಂ.ಆರ್.ಡಬ್ಲೂ ಪಾಂಡು ಲಮಾಣಿ (9538714441) ಇವರನ್ನು ಸಂಪರ್ಕಿಸಬಹುದಾಗಿದೆ.

# ಅತಿಥಿ ಉಪನ್ಯಾಸಕರ ನೇಮಕಾತಿಗೆ ನೇರ ಸಂದರ್ಶನ ಫೆ.11ಕ್ಕೆ

ಬೀದರ, ಫೆ.02- ಬೀದರ ವಿಶ್ವವಿದ್ಯಾಲಯದ ಮುಖ್ಯ ಆವರಣದಲ್ಲಿರುವ ಸ್ನಾತಕೋತ್ತರ ವಿಭಾಗ ಗಣಿತ ವಿಷಯದ ಹೆಚ್ಚುವರಿ ಬೋಧನಾ ಕಾರ್ಯದ ನಿರ್ವಹಣೆಗಾಗಿ ಯುಜಿಸಿ ನಿಯಮಾವಳಿ ಅನ್ವಯ ಪಿ.ಎಚ.ಡಿ/ನೆಟ್/ಸೆಟ್ ವಿದ್ಯಾರ್ಹತೆ ಹೊಂದಿರುವ ಅರ್ಹ ಅಭ್ಯರ್ಥಿಗಳಿಂದ ಮಾತ್ರ ಪೂರ್ಣಕಾಲಿಕ/ಅರೆಕಾಲಿಕ ಅತಿಥಿ ಉಪನ್ಯಾಸಕರ ಸೇವೆಯನ್ನು 2025-26ನೇ ಶೈಕ್ಷಣಿಕ ಸಾಲಿಗೆ ಪಡೆಯಲು ನೇರ ಸಂದರ್ಶನಕ್ಕೆ (ವಾಕ್-ಇನ್-ಇಂಟವ್ಯೂವ್) ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ದಿನಾಂಕ : 11-02-2026 ರಂದು ಬೆಳಿಗ್ಗೆ 10 ಗಂಟೆಗೆ ಬೀದರ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ನೇರ ಸಂದರ್ಶನ (ವಾಕ್-ಇನ್-ಇಂಟರವ್ಯೂವ್) ಏರ್ಪಡಿಸಲಾಗಿದ್ದು, ಆಸಕ್ತ ಅಭ್ಯರ್ಥಿಗಳು ಮೂಲ ಹಾಗೂ ತಮ್ಮ ಅಗತ್ಯ ಶೈಕ್ಷಣಿಕ ದಾಖಲಾತಿಗಳು ಮತ್ತು ಸೇವಾ ದಾಖಲಾತಿಗಳೊಂದಿಗೆ ಒಂದು ದೃಢೀಕೃತ ಪ್ರತಿಯೊಂದಿಗೆ ಹಾಜರಾಗಬೇಕೆಂದು ಬೀದರ ವಿಶ್ವವಿದ್ಯಾಲಯದ ಕುಲಸಚಿವರು (ಆಡಳಿತ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಒಂದು ಕಡೇ ವ್ಯೆಸನ ಮುಕ್ತ ದಿನಾಚರಣೆ ಮಗದೊಂದೆಡೆ ಸರಕಾರಿ ಸಾರಿಗೆ ವಾಹನದಲ್ಲಿ ತಂಬಾಕು ಉತ್ಪನ್ನ ಉತ್ತೇಜನಕಾರಿ ಜಾಹೀರಾತು: ರಾಘವೇಂದ್ರ ಪಾಲನಕರ ವಿಷಾದ








ಗದಗ ಫೆ.02:- ಜಾಗತಿಕವಾಗಿ ಯುವ ಜನಸಮುದಾಯದ ಆರೋಗ್ಯದ ಹಿತಾದೃಷ್ಟಿಯಿಂದ ಮಾರಕವಾದ ತಂಬಾಕು ಉತ್ಪನ್ನಗಳಾದ ಗುಟಖಾ ಮಾರಾಟವನ್ನು ಸಮಸ್ತ ರಾಜ್ಯವ್ಯಾಪಿ ಘನ್ ರಾಜ್ಯ ಸರಕಾರದಿಂದ ಸಂಪೂರ್ಣ ನಿಷೇಧಿಸಲಾಗಿರುತ್ತದೆ. ಕಾರಣ ಪ್ರಪಂಚದಾದ್ಯಂತ ಪ್ರತಿ ವರ್ಷ ತಂಬಾಕು ಸೇವನೆಯಿಂದ 80 ಲಕ್ಷಕ್ಕೂ ಹೆಚ್ಚು ಜನರು ಸಾವಿಗೀಡಾಗುತ್ತಿದ್ದಾರೆ. ಈ ತಂಬಾಕು ಸೇವನೆಯು ಸಾರ್ವಜನಿಕರ ಜೇಬಿಗೆ ಕತ್ತರಿ ಹಾಕುವುದರ ಜೊತೆಗೆ ತಂಬಾಕುಯುಕ್ತ ವಸ್ತುಗಳು ಪರಿಸರವನ್ನೂ ಕೆಡಿಸುತ್ತದೆ.

ಘನ್ ರಾಜ್ಯ ಹಾಗೂ ಕೇಂದ್ರ ಸರಕಾರವು ತಂಬಾಕು ತೆರಿಗೆಯನ್ನು ಪ್ರತಿವರ್ಷ ದ್ವಿಗುಣ ಹೆಚ್ಚಿಸುತ್ತಾ ಬಂದಿರುತ್ತದೆ. 2030ರ ಹೊತ್ತಿಗೆ ತಂಬಾಕು ಸಂಬಂಧಿತ ರೋಗಗಳಿಂದ ಸಾವನ್ನಪ್ಪುವವರ ಸಂಖ್ಯೆಯನ್ನು ಮೂರನೇ ಒಂದು ಭಾಗದಷ್ಟು ಕಡಿಮೆ ಮಾಡುವ ಗುರಿಯನ್ನು ಹೊಂದಲಾಗಿದೆ. ಎಂದು ನುಡಿಯುವ ಸರಕಾರ. ಇಂದಿಗೂ ತಂಬಾಕು ನಿಷೇಧ ಎಂಬುದು ದೂರದ ಮಾತಾಗಿಯೇ ಉಳಿದಿದೆ. ತಂಬಾಕು ಉತ್ಪನ್ನಗಳ ಮೇಲಿನ ತೆರಿಗೆ ಹೆಚ್ಚಿಸುವಂತೆ ತಂಬಾಕು ನಿಯಂತ್ರಣ ಸಂಸ್ಥೆಗಳು ಕೇಂದ್ರ ಸರ್ಕಾರಕ್ಕೆ ಒತ್ತಾಯ ಹೇರಿವೆ. ತಂಬಾಕು ಮುಕ್ತ ಕರ್ನಾಟಕ ವೇದಿಕೆ ಮತ್ತು ಕರ್ನಾಟಕ ನೋ ಫಾರ್ ಟೊಬ್ಯಾಕೊ ಈ ಮನವಿ ಮಾಡಿವೆ.

ಆದ-ರೆ ಘನ್ ರಾಜ್ಯ ಸರಕಾರವು ಇತ್ತೀಚಿಗಷ್ಟೇ ಹಲವು ವರ್ಷಗಳ ಹಿಂದೆ ತಂಬಾಕುಯುಕ್ತ ಗುಟಖಾವನ್ನು ರಾಜ್ಯದಲ್ಲಿ ಸಂಪೂರ್ಣವಾಗಿ ನಿಷೇಧಿಸಲಾಗಿತ್ತು. ಆದರೆ ಸರಕಾರವು *ಚಾಪೇ ಕೆಳಗೆ ತೂರಿದರೆ, ದುರುಳರು ರಂಗೋಲಿ ಕೆಳಗೆ ತೋರಿದಂತೆ* ಗುಟಖಾವನ್ನು ಪಾನ್ ಮಸಾಲಾ ಒಂದು ಶಾಷೆ (ಪ್ಯಾಕೆಟ್), ಮಗದೊಂದು ಶಾಷೆ (ಪ್ಯಾಕೆಟ್ )ಯಲ್ಲಿ ಮಾರಾಟ ಮಾಡುವ ದಂಧೆಯನ್ನು ಕಂಡುಕೊಂಡಿರುವುದರಿಂದ ವ್ಯಸನಿಗಳಿಗೆ ಸುರಳಿತವಾಗಿ ಕಾನೂನಿನ ಚೌಕಟ್ಟಿನಲ್ಲಿಯೇ ಗುಟಖಾ ಸ್ವಾದವನ್ನು ಸವಿಯುತ್ತ ತಮ್ಮ ಆರೋಗ್ಯದ ವಾತಾವರಣವನ್ನು ಕೆಡಿಸಿಕೊಂಡು ಮಾರಕ ಕ್ಯಾನ್ಸರ್‌ಗೆ ಬಲಿಯಾಗುತ್ತಿರುವರು ಅದರೊಂದಿಗೆ ಹಣವನ್ನು ವ್ಯಯ ಮಾಡಿಕೊಳ್ಳುತ್ತಿರುವರು.

*ಜಾಹೀರಾತಿನ ಲಾಭದ ನಿರೀಕ್ಷೆಯಲ್ಲಿ ಜನಾರೋಗ್ಯ ಮರೆತ ಸಾರಿಗೆ ಇಲಾಖೆ:-*

ಆದರೆ ಆಶ್ಚರ್ಯಕರವೆಂಬಂತೆ ಸರಕಾರದಿಂದ ಸಾರ್ವಜನಿಕ ಸ್ಥಳಗಳಲ್ಲಿ ತಂಬಾಕು ಸೇವನೆ ಮಾರಾಟ ಉತ್ಪಾದನೆ ನಿಷೇಧಿಸಲಾಗಿದೆ. ಆದರೆ, ಸಾರ್ವಜನಿಕ ಸಾರಿಗೆ ಸಂಚಾರಿ ವಾಹನಗಳ ಮೇಲೆ ಇಂದಿಗೂ ತಂಬಾಕು ಸಂಬಂಧಿಸಿದ ಜಾಹೀರಾತುಗಳನ್ನು ಕಾಣಬಹುದು. ಇದಕ್ಕೆ ಉತ್ತಮ ನಿರ್ದೇಶನವಾಗಿ ವಾಯುವ್ಯ ಕರ್ನಾಟಕ ಸಾರಿಗೆಯ ವಾಹನಗಳಲ್ಲಿ ವರ್ಣ ರಂಜಿತ ಚೈನಿ ಚೈನಿ ಮೌಥ ಫ್ರೆಶನರ್ ಚೈನನಿಂದ ಮಜಾ ಪಡೆಯಿರಿ ಎಂಬ ಜಾಹೀರಾತು ಆದರೆ ನೈಜ್ಯತೆಯಲ್ಲಿ ಇದು ಚೈನಿ ಖೈನಿ ಎಂಬ ತಂಬಾಕು ಮಿಶ್ರಿತ ಮಾದಕ ಉತ್ಪನ್ನವಾಗಿದೆ. ಅದರಂತೆ ವಿಮಲ್ ಪಾನ್ ಮಸಾಲಾ ಬಾಯಲ್ಲಿ ಹೇಳಿ ಕೇಸರಿ ಎಂಬ ಜಾಹೀರಾತು ಇದು ಕೂಡಾ ವಿಮಲ್ ಪಾನ್ ಮಸಾಲಾದೊಂದಿಗೆ ತಂಬಾಕು ಶಾಷೆ (ಪ್ಯಾಕೆಟ್) ಹೊಂದಿರುವ ತಂಬಾಕು ಮಿಶ್ರಿತ ಮಾದಕ ಉತ್ಪನ್ನವಾಗಿದೆ.

ಸದ್ಯ ಆರೋಗ್ಯ ಇಲಾಖೆಯು ಬಸ್ ಮೇಲಿನ ತಂಬಾಕು ಜಾಹೀರಾತು ನಿಷೇಧಿಸಲು ಕ್ರಮಕೈಗೊಂಡಿದೆ. ಬಸ್‌ಗಳ ಮೇಲೆ ತಂಬಾಕು ಜಾಹೀರಾತು ಪ್ರಕಟಿಸಿದರೆ ಕೇಸ್ ದಾಖಲಿಸುವ ಎಚ್ಚರಿಕೆಯನ್ನು ಆರೋಗ್ಯ ಇಲಾಖೆ ನೀಡಿದೆ. ಬಸ್‌ಗಳ ಮೇಲಿನ ಇನ್ನು ಮುಂದೆ ತಂಬಾಕು ಸಂಬಂಧಿಸಿದ ಜಾಹೀರಾತು ಹಾಕುವಂತಿಲ್ಲ ಎಂದು ಆರೋಗ್ಯ ಇಲಾಖೆ ಸಾರಿಗೆ ಸಂಸ್ಥೆಗಳಿಗೆ ಸೂಚನೆ ನೀಡಿದೆ.

ತಂಬಾಕು ಜಾಹೀರಾತು ಪ್ರಕಟವು ಶಿಕ್ಷಾರ್ಹ ಅಪರಾಧವಾಗಿದ್ದು, ಪ್ರಕರಣ ದಾಖಲಿಸುವ ಎಚ್ಚರಿಕೆಯನ್ನು ನೀಡಲಾಗಿದೆ. ಪ್ರತಿವರ್ಷ ಮೇ 31 ರಂದು ವಿಶ್ವ ತಂಬಾಕು ನಿಷೇಧ ದಿನ. ಫೆಬ್ರವರಿ 4 ರಂದು ಮಾರಕ ಕ್ಯಾನ್ಸರ್ ದಿನಾಚರಣೆ ಸರಕಾರದಿಂದಲೇ ಆಚರಿಸಲಾಗುತ್ತಿದೆ. ಇಂದಿಗೂ ಸಾರ್ವಜನಿಕ ಸ್ಥಳಗಳಲ್ಲಿ ತಂಬಾಕು ನಿಷೇಧ ಸಂಪೂರ್ಣ ಸಾಧ್ಯವಾಗಿಲ್ಲ.

ಬಿಎಂಟಿಸಿ ವಾ ಕ ರ ಸಾ, ಕಲ್ಯಾಣ ಕರ್ನಾಟಕ ಸಾರಿಗೆ ಬಸ್ ಮೇಲಿನ ಜಾಹೀರಾತುಗಳು ಸಾರ್ವಜನಿಕ ಬಸ್‌ಗಳ ಮೇಲೆ ತಂಬಾಕು ಜಾಹೀರಾತುಗಳನ್ನು ಹಾಕಿಯುವ ಜನಸಾಮಾನ್ಯರನ್ನು ಉತ್ತೇಜನ ಮಾಡುತ್ತಿರುವ ಸರಕಾರ. ತಂಬಾಕು ಉತ್ಪನ್ನಗಳ ನೇರ ಮತ್ತು ಪರೋಕ್ಷ ಜಾಹೀರಾತು ಕೋಟ್ಪಾ (ಸಿಒಟಿಪಿಎ) ಸೆಕ್ಷನ್ 5 ಮತ್ತು ವಿಶ್ವ ಆರೋಗ್ಯ ಸಂಸ್ಥೆಯ ಎಫ್‌ಸಿಟಿಸಿ ಕಾಯ್ದೆ 5.3ರ ಉಲ್ಲಂಘನೆಯಾಗಿದೆ" ಯುವಕರು ಮಕ್ಕಳು ಹಾದಿ ತಪ್ಪುತ್ತಿರುವರು

ತಂಬಾಕು ಸೇವನೆ ಆರೋಗ್ಯಕ್ಕೆ ಹಾನಿಕಾರಕವಾಗಿದ್ದು, ಇಂತಹ ಜಾಹೀರಾತುಗಳು ಯುವಕರು ಹಾಗೂ ಮಕ್ಕಳನ್ನು ಹಾದಿ ತಪ್ಪಿಸುತ್ತಿವೆ. ಹೀಗಾಗಿ ಇಂತಹ ಜಾಹೀರಾತುಗಳನ್ನು ಪ್ರಕಟಿಸದಂತೆ ಪತ್ರದಲ್ಲಿ ಸೂಚನೆ ನೀಡಿದ್ದಾರೆ.

ಸರಕಾರದಿಂದ ಮೇ 31 ತಂಬಾಕು ನಿಷೇಧ ದಿನ, ವಿಶ್ವ ತಂಬಾಕು ನಿಷೇಧ ದಿನವನ್ನಾಗಿ ಆಚರಿಸಲಾಗುತ್ತದೆ. ಜಾಗತಿಕ ಮಟ್ಟದಲ್ಲಿ ತಂಬಾಕು ಸೇವನೆಯಿಂದ ಉಂಟಾಗುವ ಹಾನಿಯ ಬಗ್ಗೆ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಈ ದಿನವನ್ನು ಆಚರಿಸಲಾಗುತ್ತದೆ. 1987 ರಲ್ಲಿ ವಿಶ್ವ ಆರೋಗ್ಯ ಸಂಸ್ಥೆ ಏಪ್ರಿಲ್ 7, 1988 ರಂದು ವಿಶ್ವ ಧೂಮಪಾನ ರಹಿತ ದಿನ ಎಂದು ಘೋಷಿಸುವ ನಿರ್ಣಯವನ್ನು ಅಂಗೀಕರಿಸಿತು. ಕನಿಷ್ಠ 24 ಗಂಟೆಗಳ ಕಾಲ ತಂಬಾಕು ಸೇವನೆಯನ್ನು ತಡೆಯಲು ಜನರನ್ನು ಪ್ರೇರೇಪಿಸಲು ಈ ಕಾಯ್ದೆಯನ್ನು ಅಂಗೀಕರಿಸಲಾಗಿದೆ.

ಆದರೂ ಘನ್ ಕೇಂದ್ರ ಹಾಗೂ ರಾಜ್ಯ ಸರಕಾರಗಳು ಒಮ್ಮತಾಭಿಪ್ರಾಯದೊಂದಿಗೆ ಬಹಿರಂಗವಾಗಿ ನಿಷೇಧ ವಿಧಿಸಿ, ಮಗದೊಂದೇಡೆ ಪರೋಕ್ಷವಾಗಿ ಆರೋಗ್ಯ ಮಾರಕವಾದ ಗುಟಖಾ ಹಾಗೂ ತಂಬಾಕು ಉತ್ಪನ್ನಗಳಾದ ಚೈನಿ ಖೈನಿ ವಿಮಲ್ ಪಾನ್ ಮಸಾಲಾದಂತಹ ಮಾದಕ ದ್ರವ್ಯಗಳ ಜಾಹೀರಾತುಗಳನ್ನು ಸಾರ್ವಜನಿಕ ಸಾರಿಗೆ ವಾಹನಗಳ ಮೂಲಕ ಪ್ರಚುರ ಪಡಿಸುತ್ತಿರುವದು ವಿಷಾದನೀಯ ಎಂದು ನ್ಯಾಯವಾದಿ ಹಾಗೂ ಸಾಮಾಜಿಕ ಕಾರ್ಯಕರ್ತರಾದ ರಾಘವೇಂದ್ರ ಪಾಲನಕರ ಕಳವಳವನ್ನು ವ್ಯಕ್ತಪಡಿಸಿರುತ್ತಾರೆ.

# ಜಿಲ್ಲೆಯಲ್ಲಿ ಮಾನಸಿಕ ಆರೋಗ್ಯ ಶಿಬಿರ

ಕಲಬುರಗಿ, ಫೆ.02.- ಮನೋಚೈತನ್ಯ ಕಾರ್ಯಕ್ರಮದಡಿ ಕಲಬುರಗಿ ಜಿಲ್ಲೆಯ ವಿವಿಧ ತಾಲೂಕಾ ಸಾರ್ವಜನಿಕ ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಕೆಳಕಂಡ ದಿನಾಂಕಗಳಂದು ಮಾನಸಿಕ ಆರೋಗ್ಯ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅಧಿಕಾರಿಗಳು ತಿಳಿಸಿದ್ದಾರೆ.

ತಪಾಸಣಾ ಶಿಬಿರದ ವಿವರ ಇಂತಿದೆ. ಫೆಬ್ರವರಿ 3 ರಂದು ಆಳಂದ ತಾಲೂಕು ಸಾರ್ವಜನಿಕ ಆಸ್ಪತ್ರೆ, ಫೆಬ್ರವರಿ 6 ರಂದು ಕಮಲಾಪುರ ಪ್ರಾಥಮಿಕ ಆರೋಗ್ಯ ಕೇಂದ್ರ, ಫೆಬ್ರವರಿ 7 ರಂದು ಕಲಬುರಗಿ ಕೇಂದ್ರ ಕಾರಾಗೃಹ, ಫೆಬ್ರವರಿ 10 ರಂದು ಚಿಂಚೋಳಿ ತಾಲೂಕು ಸಾರ್ವಜನಿಕ ಆಸ್ಪತ್ರೆ, ಫೆಬ್ರವರಿ 13 ರಂದು ಅಫಜಲಪುರ ತಾಲೂಕು ಸಾರ್ವಜನಿಕ ಆಸ್ಪತ್ರೆ, ಫೆಬ್ರವರಿ 17 ರಂದು ಚಿತ್ತಾಪುರ ತಾಲೂಕು ಸಾರ್ವಜನಿಕ ಆಸ್ಪತ್ರೆ, ಫೆಬ್ರವರಿ 18 ರಂದು ದೇವಲ ಗಾಣಗಾಪುರ ಸಂಗಮ, ಫೆಬ್ರವರಿ 20 ರಂದು ಜೇವರ್ಗಿ ತಾಲೂಕು ಸಾರ್ವಜನಿಕ ಆಸ್ಪತ್ರೆ, ಫೆಬ್ರವರಿ 21 ರಂದು ಕಲಬುರಗಿ ಕೇಂದ್ರ ಕಾರಾಗೃಹ, ಫೆಬ್ರವರಿ 24 ರಂದು ಸೇಡಂ ತಾಲೂಕು ಸಾರ್ವಜನಿಕ ಆಸ್ಪತ್ರೆ, ಫೆಬ್ರವರಿ 25 ರಂದು ಶಹಾಬಾದ ಸಮುದಾಯ ಆರೋಗ್ಯ ಕೇಂದ್ರ ಹಾಗೂ ಫೆಬ್ರವರಿ 27 ರಂದು ಕಾಳಗಿ ಸಮುದಾಯ ಆರೋಗ್ಯ ಕೇಂದ್ರ.

ಮಾನಸಿಕ ಕಾಯಿಲೆಗಳ ಲಕ್ಷಣಗಳನ್ನು ಹೊಂದಿರುವ ವ್ಯಕ್ತಿಗಳನ್ನು ಸಮುದಾಯದಲ್ಲಿ ಗುರುತಿಸಿ ಅವರನ್ನು ಈ ಶಿಬಿರ ನಡೆಯುವ ದಿನಾಂಕದಂದು ಕರೆತಂದು ತಜ್ಞರಿಗೆ ತೋರಿಸಿ ಚಿಕಿತ್ಸೆ ಕೊಡಿಸಬೇಕು ಅವರು ತಿಳಿಸಿದ್ದಾರೆ.

# ಆದರ್ಶ ವಿದ್ಯಾಲಯ: 6ನೇ ತರಗತಿಯ ಪ್ರವೇಶ ಪರೀಕ್ಷೆಗೆ ಅರ್ಜಿ ಆಹ್ವಾನ

ಕಲಬುರಗಿ, ಫೆ. 02.-2026-27ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಆದರ್ಶ ವಿದ್ಯಾಲಯಗಳಲ್ಲಿ ಪ್ರವೇಶ ಪರೀಕ್ಷೆ ಮೂಲಕ 6ನೇ ತರಗತಿಗೆ ಪ್ರವೇಶ ಪಡೆಯಲು ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಲಾಗಿದೆ ಎಂದು ಕಲಬುರಗಿ ಡಯಟ್ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಪ್ರಾಂಶುಪಾಲರು ಹಾಗೂ ಉಪನಿರ್ದೇಶಕರು (ಆ) ತಿಳಿಸಿದ್ದಾರೆ.

ಆಸಕ್ತಿಯುಳ್ಳ ಅಭ್ಯರ್ಥಿಗಳು www.schooleducationkarnataka.gov.in ಹಾಗೂ www.vidyavahinikarnataka.gov.in ವೆಬ್‌ಸೈಟ್‌ದಲ್ಲಿ ಆನ್‌ಲೈನ್ ಮೂಲಕ 2026ರ ಫೆಬ್ರವರಿ 25 ರೊಳಗಾಗಿ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಡಯಟ್ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ನೋಡಲ್ ಅಧಿಕಾರಿಗಳು ಹಾಗೂ ಹಿರಿಯ ಉಪನ್ಯಾಸಕರಾದ ಅಮರೇಶ ಕಾಂಬಳೆ-9845831953 ಹಾಗೂ ಡಯಟ್ ಉಪನ್ಯಾಸಕ ನಜೀರ ಅಹ್ಮದ-9448586514 ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

# ಕಾನೂನು ಅರಿವು ಕಾರ್ಯಕ್ರಮ

ಕಲಬುರಗಿ: ಫೆ.02.- ಕಲಬುರಗಿ ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ ಹಾಗೂ ಶ್ರೀಮತಿ ವೀರಮ್ಮಾ ಗಂಗಶ್ರೀ ಮಹಿಳಾ ಕಾಲೇಜು ಕಲಬುರಗಿ ಇವುಗಳ ಸಂಯುಕ್ತಾಶ್ರಯದಲ್ಲಿ ಫೆಬ್ರುವರಿ 2 ರಂದು ಮಂಗಳವಾರ ಬೆಳಿಗ್ಗೆ 11 ಗಂಟೆಗೆ ಶ್ರೀಮತಿ ವೀರಮ್ಮಾ ಗಂಗಶ್ರೀ ಮಹಿಳಾ ಕಾಲೇಜು ಆವರಣದಲ್ಲಿ "PAN-INDIA Rescue and Rehabilitation campaign" ಅಂಗವಾಗಿ ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆಯ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986 ತಿದ್ದುಪಡಿ 2016 ರ ಕುರಿತು ಕಾನೂನು ಅರಿವು ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಕಲಬುರಗಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಶ್ರೀನಿವಾಸ ನವಲೆ ಆವರು ಕಾರ್ಯಕ್ರಮವನ್ನು ಉದ್ಘಾಟಿಸುವರು. ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭಂವರ ಸಿಂಗ ಮೀನಾ, ನಗರ ಪೋಲೀಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸುಲು, ಮಾಹಾನಗರ ಪಾಲಿಕೆ ಆಯುಕ್ತ ಅವಿನಾಶ ಸಿಂಧೆ, ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ವಿಶ್ವರಾಧ್ಯ ಇಜೇರಿ, ಕಲಬುರಗಿ ಪ್ರಾದೇಶಿಕ ಉಪ ಕಾರ್ಮಿಕ ಆಯುಕ್ತ ಡಾ.ವೆಂಕಟೇಶ ಎ. ಶಿಂಧಿಹಟ್ಟಿ, ಸಹಾಯಕ ಕಾರ್ಮಿಕ ಆಯುಕ್ತ ಮೊಹಮ್ಮದ್ ಬಷೀರ್ ಅನ್ಸಾರಿ, ಕಲಬುರಗಿ ಉಪವಿಭಾಗ ಜಿಲ್ಲಾ ಕಾರ್ಮಿಕ ಅಧಿಕಾರಿ ಶರಣಪ್ಪಾ ಆರ್. ಹಳಿಮನಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ರಾಜಕುಮಾರ ರಾಠೋಡ ಹಾಗೂ ಶ್ರೀಮತಿ ವೀರಮ್ಮಾ ಗಂಗಶ್ರೀ ಮಹಿಳಾ ಕಾಲೇಜು ಪ್ರಾಂಶುಪಾಲರು ಪ್ರಾಂಶುಪಾಲ ಡಾ. ಆರ್.ಬಿ. ಕೊಂಡಾ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು.


# ಗೃಹಲಕ್ಷ್ಮೀ ಡಿಜಿಟಲ್ ಮಾರ್ಕೆಟಿಂಗ್ ಆ್ಯಪ್‌ನಲ್ಲಿ ಮಹಿಳಾ ಉದ್ಯಮಿಗಳನ್ನು ನೊಂದಾಯಿಸಲು ಆಹ್ವಾನ

ಯಾದಗಿರಿ : ಫೆ. 02, : ಗೃಹಲಕ್ಷ್ಮೀ ಡಿಜಿಟಲ್ ಮಾರ್ಕೆಟಿಂಗ್ ಆ್ಯಪ್‌ನಲ್ಲಿ ಮಹಿಳಾ ಉದ್ಯಮಿಗಳನ್ನು ನೊಂದಾಯಿಸಲು ಆಹ್ವಾನಿಸಲಾಗಿದೆ ಎಂದು ಯಾದಗಿರಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರು ತಿಪ್ಪಣ್ಣ ಸಿರಸಗಿ ಅವರು ತಿಳಿಸಿದ್ದಾರೆ.

ಗೃಹಲಕ್ಷ್ಮೀ ಡಿಜಿಟಲ್ ಮಾರ್ಕೆಟಿಂಗ್ ಆ್ಯಪ್‌ನಲ್ಲಿ ಮಹಿಳಾ ಉದ್ಯಮಿಗಳನ್ನು ನೋಂದಾಯಿಸಲು 2026ರ ಜನವರಿ 9 ರಂದು ಗೃಹಲಕ್ಷ್ಮೀ ಡಿಜಿಟಲ್ ಮಾರ್ಕೆಟಿಂಗ್ ಆ್ಯಪ್‌ನ್ನು ಲಾಂಚ್ ಮಾಡಲಾಗಿದೆ. ಮಹಿಳಾ ಉದ್ಯಮಿಗಳ ನೊಂದಣಿ ಕಾರ್ಯಕೈಗೊಳ್ಳಲು ಈ ಕೆಳಕಂಡ ಮಹಿಳಾ ಉದ್ಯಮಿಗಳು ಮಾಹಿತಿ ನೀಡಬೇಕಾಗಿದೆ.

ಸ್ತ್ರೀ ಶಕ್ತಿ ಸ್ವಸಹಾಯ ಗುಂಪಿನ ಸದಸ್ಯರು, ಓಖಐಒ ಫಲಾನುಭವಿಗಳು/ಓಖಐಒ ಉದ್ಯಮಿಗಳು, ಅಕ್ಕಕೆಫೆ ಘಟಕಗಳನ್ನು ನಿರ್ವಹಿಸುತ್ತಿರುವ ಮಹಿಳೆಯರು, ಕರ್ನಾಟಕ ಸಣ್ಣ ಪ್ರಮಾಣದ ಇಂಡಸ್ಟ್ರೀಸ್ ಅಸೋಸಿಯೇಷನ್ (KASSIA) ಘಟಕಗಳ ಮಹಿಳಾ ಉದ್ಯಮಿಗಳು. ಖಗಅಖಇಖಿಖ/ಖಖಇಖಿಖ (ಧರ್ಮಸ್ಥಳ) ಮೂಲಕ ತರಭೇತಿ ಪಡೆದು ಸ್ವ ಉದ್ಯೋಗ ನಡೆಸುತ್ತಿರುವ ಮಹಿಳೆಯರು. ನಿಗಮದಿಂದ ವಿವಿಧ ಯೋಜನೆಗಳ ಅಡಿಯಲ್ಲಿ ಸೌಲಭ್ಯ ಪಡೆದ ಮಹಿಳಾ ಫಲಾನುಭವಿಗಳು, ಜಿಲ್ಲಾ, ತಾಲ್ಲೂಕು ಮತ್ತು ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಇತರೆ ಯಶಸ್ವಿ ಮಹಿಳಾ ಉದ್ಯಮಿಗಳು, ಆಸಕ್ತ ಮಹಿಳೆಯರು ತಾವು ತಯಾರಿಸುವ ಉತ್ಪನ್ನಗಳ ಮಾಹಿತಿಯನ್ನು ಜಿಲ್ಲೆಯ ಉಪನಿರ್ದೇಶಕರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಸಿ.17 ಒಂದನೇ ಮಹಡಿ, ಜಿಲ್ಲಾಡಳಿತ ಭವನ ಯಾದಗಿರಿ ಇಲ್ಲಿಗೆ ಮಹಿಳಾ ಅಭಿವೃದ್ಧಿ ನಿರೀಕ್ಷಕರನ್ನು ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಡ, ಮಧ್ಯಮ ವರ್ಗದ ಹಿತ ರಕ್ಷಿಸದ ಬಜೆಟ್



ಅಶೋಕಾ ಕೋಟೆ ವಾರ್ತೆ

ಬೀದರ್: ಫೆ.02- ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ಮಂಡಿಸಿದ ಪ್ರಸಕ್ತ ಸಾಲಿನ ಬಜೆಟ್ ಬಡ ಹಾಗೂ ಮಧ್ಯಮ ವರ್ಗದ ಹಿತ ರಕ್ಷಿಸಿಲ್ಲ ಎಂದು ಕಾಂಗ್ರೆಸ್ ಪರಿಶಿಷ್ಟ ಜಾತಿ ವಿಭಾಗದ ಜಿಲ್ಲಾ ಘಟಕದ ವಕ್ತಾರ ಶಂಕರ ಜ್ಯಾಂತಿಕರ್ ಬೇಸರ ಹೊರ ಹಾಕಿದ್ದಾರೆ.

ರೈತರ ಬೆಳೆ ಸಾಲ ಮನ್ನಾ ಮಾಡಿಲ್ಲ. ಬ್ಯಾಂಕ್ ಸಾಲ ಪ್ರಕ್ರಿಯೆ ಸರಳೀಕರಿಸಿಲ್ಲ. ಗೃಹ ನಿರ್ಮಾಣ ಸಾಮಗ್ರಿಗಳ ಬೆಲೆ ಕಡಿತಗೊಳಿಸಿಲ್ಲ. ಪರಿಶಿಷ್ಟ ಜಾತಿ ಹಾಗೂ ಪಂಗಡದವರ ಅಭಿವೃದ್ಧಿಗೆ ಹೇಳಿಕೊಳ್ಳುವ ಯೋಜನೆ ಘೋಷಿಸಿಲ್ಲ ಎಂದು ಹೇಳಿದ್ದಾರೆ.

ಮೇಕ್ ಇನ್ ಇಂಡಿಂ-ಯಾ ಘೋಷಣೆಯಾಗಿಯೇ ಉಳಿಯುತ್ತಿದೆ. ಚೀನಾ, ಜಪಾನ್ ವಸ್ತುಗಳ ಆಮದು ಹೆಚ್ಚಾಗಿದೆ. ಇದರಿಂದ ಸ್ವಾವಲಂಬಿ ಭಾರತ ನಿರ್ಮಾಣಕ್ಕೆ ಪೆಟ್ಟು ಬಿದ್ದಿದೆ. ಮುಂಬರುವ ಕೆಲ ರಾಜ್ಯಗಳ ವಿಧಾನಸಭೆ ಚುನಾವಣೆ ದೃಷ್ಟಿಕೋನದಲ್ಲಿ ಇಟ್ಟುಕೊಂಡು ಬಜೆಟ್ ಮಂಡಿಸಿದ್ದು, ದೇಶವನ್ನು ಸರ್ವ ರೀತಿಯಿಂದಲೂ ಅಭಿವೃದ್ಧಿ ಪಥದತ್ತ ಕೊಂಡೊಯ್ಯುವ ದೂರದೃಷ್ಟಿಯ ಯೋಜನೆಗಳಿಲ್ಲ ಎಂದು ತಿಳಿಸಿದ್ದಾರೆ.

# ಫೆ.5 ರಿಂದ 7 ರವರೆಗೆ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮೀ ಚೌಧರಿ ಅವರಿಂದ ಕೊಪ್ಪಳ ಜಿಲ್ಲಾ ಪ್ರವಾಸ



ಕೊಪ್ಪಳ ಜನವರಿ 31,: ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ.ನಾಗಲಕ್ಷ್ಮೀ ಚೌಧರಿ ಅವರು ಫೆಬ್ರವರಿ 5 ರಿಂದ 7 ರವರೆಗೆ ಕೊಪ್ಪಳ ಜಿಲ್ಲೆಯಲ್ಲಿ ಪ್ರವಾಸ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದಾರೆ.

ಅಧ್ಯಕ್ಷರು ಫೆ.5 ರಂದು ಬೆಳಿಗ್ಗೆ 6.30 ಗಂಟೆಗೆ ಕೊಪ್ಪಳಕ್ಕೆ ಆಗಮಿಸುವರು. ಬೆಳಿಗ್ಗೆ 10 ಗಂ-ಟೆಗೆ ಜಿಲ್ಲಾಡಳಿತ ಭವನದಲ್ಲಿ ಪಿಯು ಹಾಗೂ ಪದವಿ ಕಾಲೇಜು ವಿದ್ಯಾರ್ಥಿನಿಯರ ಜೊತೆ ಸಂವಾದ ನಡೆಸುವರು. ಮಧ್ಯಾಹ್ನ 2 ಗಂಟೆಗೆ ಕೊಪ್ಪಳದ ವಾರ್ಡ್ ನಂ.28, ಸಿದ್ದೇಶ್ವರ ನಗರದ ಅಲೆಮಾರಿ ಕಾಲೋನಿಗೆ ಭೇಟಿ ನೀಡಿ, ಅಲೆಮಾರಿ ಸಮುದಾಯದ ಮಹಿಳೆಯರ ಸಮಸ್ಯೆಗಳನ್ನು ಆಲಿಸುವರು. ಮಧ್ಯಾಹ್ನ 3 ಗಂಟೆಗೆ ಕೊಪ್ಪಳ ತಾಲ್ಲೂಕು ಪಂಚಾಯತ್ ಸಭಾಂಗಣದಲ್ಲಿ ದೇವದಾಸಿ ಮಹಿಳೆಯರೊಂದಿಗೆ ಸಂವಾದ ನಡೆಸುವರು. ಸಂಜೆ 6 ಗಂಟೆಗೆ ಕೊಪ್ಪಳದ ಅಲ್ಪಸಂಖ್ಯಾತ ಇಲಾಖೆಯ ಪೋಸ್ಟ್ ಮೆಟ್ರಿಕ್ ಬಾಲಕಿಯರ ವಸತಿನಿಲಯಕ್ಕೆ ಭೇಟಿ ನೀಡುವರು. ಅಂದು ರಾತ್ರಿ ಕೊಪ್ಪಳದಲ್ಲಿಯೇ ವಾಸ್ತವ್ಯ ಮಾಡುವರು.

ಫೆ.6 ರಂದು ಬೆಳಿಗ್ಗೆ 10 ಗಂಟೆಗೆ ಅಧ್ಯಕ್ಷರು ಕೊಪ್ಪಳ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಆಸ್ಪತ್ರೆ ಹಾಗೂ ಕೊಪ್ಪಳ ಜಿಲ್ಲಾಸ್ಪತ್ರೆಗೆ ಭೇಟಿ ನೀಡುವರು. ಬೆಳಿಗ್ಗೆ 11 ಗಂಟೆಗೆ ಜಿಲ್ಲಾಡಳಿತ ಭವನದಲ್ಲಿ ಕರ್ನಾಟಕ ರಾಜ್ಯ ಮಹಿಳಾ ಆಯೋಗ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಹಯೋಗದೊಂದಿಗೆ ಆಯೋಜಿಸಿರುವ ಕಔಖಊ ಅಧಿನಿಯಮ 2013ರ ತರಬೇತಿ ಹಾಗೂ ಅರಿವು ಕಾರ್ಯಕ್ರಮವನ್ನು ಉದ್ಘಾಟಿಸುವರು. ಮಧ್ಯಾಹ್ನ 12 ಗಂಟೆಗೆ ಕೊಪ್ಪಳದಿಂದ ನಿರ್ಗಮಿಸಿ 1.15 ಗಂಟೆಗೆ ಕುಷ್ಟಗಿಗೆ ತೆರಳಿ, ಕುಷ್ಟಗಿ ತಾಲ್ಲೂಕು ಆಸ್ಪತ್ರೆಗೆ ಭೇಟಿ ನೀಡುವರು. ಮಧ್ಯಾಹ್ನ 3 ಗಂಟೆಗೆ ಕುಷ್ಟಗಿ ಪೊಲೀಸ್ ಠಾಣೆಗೆ ಭೇಟಿ ನೀಡುವರು. ಸಂಜೆ 5 ಗಂಟೆಗೆ ಕುಷ್ಟಗಿಯ ಸಮಾಜ ಕಲ್ಯಾಣ ಇಲಾಖೆಯ ಪೋಸ್ಟ್ ಮೆಟ್ರಿಕ್ ಬಾಲಕಿಯರ ವಸತಿ ನಿಲಯಕ್ಕೆ ಭೇಟಿ ನೀಡುವರು. ಸಂಜೆ 6 ಗಂಟೆಗೆ ಕುಷ್ಟಗಿಯಿಂದ ನಿರ್ಗಮಿಸಿ ರಾತ್ರಿ 7.15 ಗಂಟೆಗೆ ಕೊಪ್ಪಳಕ್ಕೆ ಆಗಮಿಸಿ, ವಾಸ್ತವ್ಯ ಮಾಡುವರು.

ಫೆ.7 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಡಳಿತ ಭವನದಲ್ಲಿ ಮಹಿಳಾ ಸ್ಪಂದನಾ ಕಾರ್ಯಕ್ರಮ ಹಾಗೂ ಮಹಿಳಾ ಪ್ರಗತಿ ಪರಿಶೀಲನಾ ಸಭೆ ನಡೆಸುವರು. ಮಧ್ಯಾಹ್ನ 3 ಗಂಟೆಗೆ ವಿವಿಧ ಮಾಧ್ಯಮದವರೊಂದಿಗೆ ಪತ್ರಿಕಾಗೋಷ್ಠಿ ನಡೆಸುವರು. ಸಂಜೆ 6.30 ಗಂಟೆಗೆ ಕೊಪ್ಪಳದಿಂದ ರೈಲಿನ ಮೂಲಕ ನಿರ್ಗಮಿಸಿ ಬೆಂಗಳೂರಿನ ಕಡೆ ಪ್ರಯಾಣ ಬೆಳೆಸುವರು ಎಂದು ಅಧ್ಯಕ್ಷರ ಆಪ್ತ ಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಿವಿಧ ಇಲಾಖೆಯ ಅಧಿಕಾರಿಗಳೊಂದಿಗೆ ಸಭೆ

# ಪೋಕ್ಸೋ ಪ್ರಕರಣ ದಾಖಲು ಕಡ್ಡಾಯ: ಶಶಿಧರ್ ಕೋಸಂಬೆ

ಬಳ್ಳಾರಿ,ಫೆ. 02: ಪೋಕ್ಸೋ ಘಟನೆ ನಡೆದ ಸಂದರ್ಭದಲ್ಲಿ ಪ್ರಕರಣ ದಾಖಲಿಸುವುದು ಕಡ್ಡಾಯವಾಗಿದ್ದು, ವಿಳಂಬ ತೋರಿದಲ್ಲಿ ಸಂಬಂಧಿಸಿದವರ ಮೇಲೆ ಕ್ರಮ ಜರುಗಿಸಲು ಕಾನೂನಿನಡಿ ಅವಕಾಶವಿದೆ ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಶಶಿಧರ್ ಕೊಸಂಬೆ ಅವರು ತಿಳಿಸಿದರು.

ನಗರದ ಜಿಲ್ಲಾ ಪಂಚಾಯತ್ ನ ಹಳೆಯ ನಜೀರ್ ಸಾಬ್ ಸಭಾಂಗಣದಲ್ಲಿ ವಿವಿಧ ಇಲಾಖೆಯ ಅಧಿಕಾರಿಗಳೊಂದಿಗೆ ಶನಿವಾರ ಏರ್ಪಡಿಸಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯದ ಬಗ್ಗೆ ಮಾಹಿತಿ ತಿಳಿದಿರುವ ಯಾರೇ ವ್ಯಕ್ತಿ, ಪೋಷಕರು ಅಥವಾ ಶಾಲಾ ಸಿಬ್ಬಂದಿ ಕೂಡಲೇ ಪೊಲೀಸ್ ಠಾಣೆ ಅಥವಾ ಮಕ್ಕಳ ರಕ್ಷಣಾ ಘಟಕಕ್ಕೆ ವರದಿ ಮಾಡುವುದು ಕಡ್ಡಾಯವಾಗಿದೆ ಎಂದರು.

*ಮಕ್ಕಳ ರಕ್ಷಣಾ ನೀತಿ 2016 ಕಾಯ್ದೆ ಅನುಷ್ಠಾನಗೊಳಿಸಿ:*

ಜಿಲ್ಲೆಯ ಎಲ್ಲಾ ಶಾಲೆಗಳು, ವಸತಿ ನಿಲಯಗಳ ಮಕ್ಕಳಿಗೆ ಯಾವುದೇ ರೀತಿಯ ಹಿಂಸೆ, ದೌರ್ಜನ್ಯ, ಶೋಷಣೆಯಿಂದ ರಕ್ಷಣೆ ಒದಗಿಸುವ ಮೂಲಕ ಸುರಕ್ಷಿತ ವಾತಾವರಣ ಕಲ್ಪಿಸಬೇಕು. ಪ್ರತಿಯೊಂದು ಶಾಲೆ ಮತ್ತು ವಸತಿ ನಿಲಯಗಳಲ್ಲಿ ಮಕ್ಕಳ ಹಕ್ಕುಗಳ ಸುರಕ್ಷಾ ಸಮಿತಿ ರಚಿಸಬೇಕು. ದೂರು ಪೆಟ್ಟಿಗೆಗಳನ್ನು ಅಳವಡಿಸಬೇಕು. ಅವುಗಳನ್ನು ನಿಯಮಿತವಾಗಿ ಪರಿಶೀಲಿಸಿ ಕ್ರಮ ಕೈಗೊಳ್ಳಬೇಕು. ದೌರ್ಜನ್ಯಕ್ಕೊಳಗಾದ ಮಕ್ಕಳ ವೈಯಕ್ತಿಕ ಮಾಹಿತಿ ಮತ್ತು ಅವರ ಕುರಿತಾದ ದೂರುಗಳನ್ನು ಗೌಪ್ಯವಾಗಿ ಇಡಬೇಕು. ಮಕ್ಕಳ ಕಳ್ಳಸಾಗಣೆ, ಬಾಲಕಾರ್ಮಿಕ ಪದ್ಧತಿ, ಬಾಲ ವಿವಾಹದ ವಿರುದ್ಧ ಜಾಗೃತಿ ಮೂಡಿಸುವುದು. ಲೈಂಗಿಕ ದೌರ್ಜನ್ಯದಿಂದ ಮಕ್ಕಳ ರಕ್ಷಣೆ ಕಾಯ್ದೆ 2012 ರಡಿ ಕ್ರಮ ಅನುಷ್ಠಾನಗೊಳಿಸುವುದು ಒಳಗೊಂಡ ಮಕ್ಕಳ ರಕ್ಷಣಾ ನೀತಿ 2016 ಕಾಯ್ದೆಯನ್ನು ತಪ್ಪದೇ ಅನುಷ್ಠಾನಗೊಳಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯಲ್ಲಿ ಹಲವೆಡೆ ಮಕ್ಕಳು ಕಾಣೆಯಾದ ಪ್ರಕರಣಗಳು ದಾಖಲಾಗಿದ್ದು, ಹಲವು ಪ್ರಕರಣಗಳಲ್ಲಿ ಪತ್ತೆ ಮಾಡಲು ಸಾಧ್ಯವಾಗಿಲ್ಲ. ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸುವ ಮೂಲಕ ಇತ್ಯರ್ಥಪಡಿಸಲು ಕ್ರಮವಹಿಸಬೇಕು. ಕಾಣೆಯಾದ, ಪತ್ತೆಯಾಗದ ಮಕ್ಕಳ ಪಟ್ಟಿ ಸಿದ್ಧಪಡಿಸಿಕೊಂಡು ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕು. ವರದಿ ನೀಡಬೇಕು ಎಂದರು.

*ಪ್ರಸವಪೂರ್ವ ಭ್ರೂಣ ಲಿಂಗ ಪತ್ತೆ ನಿಷೇಧ ಕಾನೂನು ಪರಿಣಾಮಕಾರಿ ಅನುಷ್ಠಾನಗೊಳಿಸಿ:*

ಪ್ರಸವಪೂರ್ವ ಭ್ರೂಣಲಿಂಗ ಪತ್ತೆ ಎಂಬ ಸಾಮಾಜಿಕ ಪಿಡುಗನ್ನು ನಿರ್ಮೂಲನೆ ಮಾಡಲು ಕಾನೂನಿನ ಮಾದರಿ ಹಾಗೂ ಶಾಸನಬದ್ಧ ಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವುದು ಅತ್ಯಂತ ಅಗತ್ಯವಾಗಿದೆ ಎಂದು ಹೇಳಿದರು.

ಸಮಾಜದಲ್ಲಿ ಲಿಂಗಾನುಪಾತದ ಅಸಮತೋಲನವು ಗಂಭೀರ ಸಾಮಾಜಿಕ ಸಮಸ್ಯೆಯಾಗಿದ್ದು, ಇದರ ಮೂಲ ಕಾರಣಗಳಲ್ಲಿ ಪ್ರಮುಖವಾದದ್ದು ಭ್ರೂಣ ಲಿಂಗ ಪತ್ತೆ ಹಾಗೂ ಹೆಣ್ಣು ಭ್ರೂಣ ಹತ್ಯೆಆಗಿದೆ. ಈ ಸಾಮಾಜಿಕ ಪಿಡುಗನ್ನು ತಡೆಯುವ ಉದ್ದೇಶದಿಂದ ಗರ್ಭಪೂರ್ವ ಮತ್ತು ಪ್ರಸವಪೂರ್ವ ಭ್ರೂಣ ಲಿಂಗ ಪತ್ತೆ, ತಂತ್ರ ವಿಧಾನಗಳ ನಿಷೇದ ಕಾಯ್ದೆ ಜಾರಿಗೆ ತಂದಿದ್ದು, 2003ರಲ್ಲಿ ಕಾಯ್ದೆಯನ್ನು ಇನ್ನಷ್ಟು ಬಲಪಡಿಸಲಾಗಿದೆ. ಹಾಗೂ ಭ್ರೂಣಲಿಂಗ ಪತ್ತೆಯನ್ನು ಸಂಪೂರ್ಣವಾಗಿ ನಿಷೇಧಿಸುವುದರ ಜೊತೆಗೆ ಹೆಣ್ಣು ಮಕ್ಕಳ ಜನನವನ್ನು ಉತ್ತೇಜಿಸುವುದು, ಲಿಂಗಾನುಪಾತವನ್ನು ಸಮತೋಲನದಲ್ಲಿರಿಸುವುದು ಹಾಗೂ ಮಹಿಳೆಯರ ಗೌರವ ಮತ್ತು ಹಕ್ಕುಗಳನ್ನು ರಕ್ಷಿಸುವುದೇ ಈ ಕಾಯ್ದೆಯ ಉದ್ದೇಶವಾಗಿದೆ ಎಂದರು.

ಜಿಲ್ಲೆಯಲ್ಲಿ ಬಾಲ್ಯವಿವಾಹ ಪದ್ಧತಿಯನ್ನು ಬೇರು ಸಮೇತ ಕಿತ್ತು ಹಾಕಲು ವಿವಿಧ ಇಲಾಖೆಗಳ ಸಹಕಾರ ಅಗತ್ಯವಾಗಿದ್ದು, ಎಲ್ಲರೂ ಕೈಜೋಡಿಸಬೇಕು ಎಂದು ತಿಳಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್.ಬಸರೆಡ್ಡಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

### ಬಳ್ಳಾರಿ: 37ನೇ ರಾಷ್ಟ್ರೀಯ ರಸ್ತೆ ಸುರಕ್ಷತಾ ಮಾಸಾಚರಣೆಯ ಸಮರೋಪ

# ರಸ್ತೆ ಸಂಚಾರಿ ನಿಯಮಗಳನ್ನು ಪಾಲಿಸುವವರೇ ನಿಜವಾದ ಹೀರೋ: ನ್ಯಾಯಾಧೀಶೆ ಕೆ.ಜಿ ಶಾಂತಿ



ಬಳ್ಳಾರಿ,ಫೆ. 02 ರ' ಸ್' ತ್ ಸಂಚಾರಿ ನಿಯಮಗಳನ್ನು ಪಾಲನೆ ಮಾಡುವ ಮೂಲಕ ವಾಹನ ಚಾಲನೆ ಮಾಡುವವರೇ ನಿಜವಾದ ಹೀರೋಗಳಾಗುತ್ತಾರೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಕೆ.ಜಿ ಶಾಂತಿ ಅವರು ಹೇಳಿದರು.

ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪೊಲೀಸ್ ಇಲಾಖೆ ಮತ್ತು ಸಾರಿಗೆ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಜಿಲ್ಲಾ ಪಂಚಾಯತ್ ನ ಹೊಸ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಶನಿವಾರ ಹಮ್ಮಿಕೊಂಡಿದ್ದ 37 ನೇ ರಸ್ತೆ ಸುರಕ್ಷತಾ ಮಾಸಾಚರಣೆಯ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ದಿನನಿತ್ಯ ಬಳಸುವ ರಸ್ತೆಯಲ್ಲಿ ಪ್ರತಿಯೊಬ್ಬರ ಜೀವನ ಅಡಗಿದ್ದು, ಜಾಗರೂಕರಾಗಿ ವಾಹನ ಚಲಾಯಿಸಬೇಕು. ರಸ್ತೆ ನಿಯಮ ಉಲ್ಲಂಘಿಸಿ, ಸಿಗ್ನಲ್ ಜಂಪ್ ಮಾಡಿ ಪೊಲೀಸರ ಕಣ್ಣು ತಪ್ಪಿಸಿ ಚಲಾಯಿಸುವುದು ಸಾಹಸವಲ್ಲ; ಬದಲಾಗಿ ನಿಯಮ ಪಾಲಿಸಿ ವಾಹನ ಚಲಾಯಿಸಿದರೆ ಮಾತ್ರ ಸುರಕ್ಷಿತರಾಗಿ ಮನೆಗೆ ಸೇರಬಹುದು ಎಂದರು.

18 ವರ್ಷದೊಳಗಿನ ಮಕ್ಕಳಿಗೆ ವಾಹನ ಚಲಾಯಿಸಲು ನೀಡಿದಲ್ಲಿ ಮಕ್ಕಳ ಪೋಷಕರ ವಿರುದ್ಧ ಪ್ರಕರಣ ಮತ್ತು 25,000 ಸಾವಿರ ದಂಡವಿದೆ. ಚಾಲನಾ ಪರವಾನಿಗೆ ಇಲ್ಲದೇ ವಾಹನ ಚಲಾಯಿಸುವಂತಿಲ್ಲ. ಈ ಕುರಿತು ಪ್ರತಿಯೊಬ್ಬರೂ ಎಚ್ಚರವಹಿಸಬೇಕು. 5 ಬಾರಿಗಿಂತ ಪ್ರಕರಣ ದಾಖಲಾದಲ್ಲಿ ಅಂತಹವರ ಚಾಲನಾ ಪರವಾನಿಗೆ ಶ್ವಾಶತವಾಗಿ ರದ್ದುಪಡಿಸುವ ಕಾನೂನಿದೆ ಎಂದು ತಿಳಿಸಿದರು.

ರಸ್ತೆ ಅಪಘಾತಗಳು ಅಪಾಯಕಾರಿಯಾಗಿದ್ದು, ಸಾರ್ವಜನಿಕ ರಸ್ತೆಗಳಲ್ಲಿ ಸಂಚರಿಸುವ ಪ್ರತಿಯೊಬ್ಬರೂ ರಸ್ತೆ ನಿಯಮಗಳನ್ನು ಪಾಲಿಸಬೇಕು. ಸಾರ್ವಜನಿಕರಲ್ಲಿ ರಸ್ತೆ ಸುರಕ್ಷತಾ ನಿಯಮಗಳ ಕುರಿತು ಅರಿವು ಮೂಡಿಸಲು ಜನವರಿ ಮಾಸಾದ್ಯಂತ ಜಿಲ್ಲೆಯಲ್ಲಿ ವಿವಿಧ ರೀತಿಯ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಮುಂದೆಯೂ ನಿರಂತರವಾಗಿ ಪಾಲಿಸಿದಲ್ಲಿ ಮಾತ್ರ ಈ ಮಾಸಾಚರಣೆಯು ಅರ್ಥಪೂರ್ಣವಾಗಲಿದೆ ಎಂದು ಹೇಳಿದರು.

ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಮಾತನಾಡಿ, ಸುರಕ್ಷತೆಯು ಮೊದಲ ಆದ್ಯತೆಯಾಗಬೇಕು. ಅದು ರಸ್ತೆ ಸುರಕ್ಷತೆಯಾಗಿರಬೇಕು. ಬದಲಾವಣೆ ನಮ್ಮಿಂದ ಮಾತ್ರ ಸಾಧ್ಯವಾಗಿದ್ದು, ಪ್ರತಿಯೊಬ್ಬರೂ ರಸ್ತೆ ನಿಯಮಗಳನ್ನು ಪಾಲಿಸಬೇಕು ಎಂದರು.

ಆಡುಭಾಷೆಯಂತೆ 'ಅತಿ ವೇಗ-ತಿಥಿ ಬೇಗ' ಎನ್ನುವ ಹಾಗೆ ಅತಿವೇಗದ ಚಾಲನೆ ನಮ್ಮ ಪ್ರಾಣಕ್ಕೆ ಕುತ್ತು ತರಲಿದ್ದು, ಇದನ್ನು ಮನದಲ್ಲಿಟ್ಟುಕೊಂಡು ಪ್ರತಿಯೊಬ್ಬರೂ ನಿಧಾನವಾಗಿ ಚಾಲನೆ ಮಾಡಬೇಕು. ಜೀವ ಮತ್ತು ಜೀವನ ಅಮೂಲ್ಯವಾಗಿದ್ದು, ಸಾರ್ವಜನಿಕ ರಸ್ತೆಗಳಲ್ಲಿ ಶಿಸ್ತು ಅಳವಡಿಸಿಕೊಂಡು ವಾಹನ ಚಲಾಯಿಸೋಣ ಎಂದು ತಿಳಿಸಿದರು.

ರಸ್ತೆ ಅಪಘಾತ ಸಂದರ್ಭದಲ್ಲಿ ತಪ್ಪದೇ ಸಹಾಯ ಹಸ್ತ ನೀಡಬೇಕು. ಅಂತಹವರನ್ನು ಪ್ರಥಮವಾಗಿ ಆಸ್ಪತ್ರೆಗೆ ಸೇರಿಸಬೇಕು. ಆ ಸಂದರ್ಭದಲ್ಲಿ ಯಾವುದೇ ತಮ್ಮ ಮಾಹಿತಿಯನ್ನು ನೀಡುವುದು ಅಗತ್ಯವಿಲ್ಲ. ಆಸ್ಪತ್ರೆ ಮತ್ತು ಪೊಲೀಸ್ ಸಿಬ್ಬಂದಿ ಮಾಹಿತಿ ಪಡೆಯುವಂತಿಲ್ಲ. ದೇಶದಲ್ಲಿಯೇ ಕರ್ನಾಟಕ ರಾಜ್ಯದಲ್ಲಿ ಈ ಕಾನೂನುನನ್ನು ಜಾರಿಗೊಳಿಸಲಾಗಿದೆ ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಸಜ್ಮಾ. ಡಿ.ಪೆನ್ನೇಕರ್ ಅವರು ಮಾತನಾಡಿ, ರಸ್ತೆ ಪಾದಾಚಾರಿಗಳು ಸಹ ಜಾಗ್ರತೆಯಿಂದ ರಸ್ತೆ ಸಂಚಾರ ನಿಮಯಗಳನ್ನು ಪಾಲಿಸಬೇಕಿದೆ. ಅವಘಡ ಯಾವ ರೀತಿಯಲ್ಲಾದರೂ ಸಂಭವಿಸಬಹುದಾಗಿದೆ. ರಸ್ತೆ ನಿಮಯ, ಸಂಚಾರಿ ಚಿಹ್ನೆಗಳನ್ನು ಅರಿತುಕೊಳ್ಳುವುದು ಅತ್ಯಗತ್ಯವಾಗಿದೆ. ವಾಹನ ಚಾಲನೆ ವೇಳೆ ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು. ಬೆಲ್ಟ್ ಕಟ್ಟಿಕೊಳ್ಳಬೇಕು. ಚಾಲನೆ ವೇಳೆ ಮೊಬೈಲ್ ಫೋನ್ ಬಳಸಬಾರದು. ಮದ್ಯಪಾನ ಮಾಡಿ ವಾಹನ ಚಲಾಯಿಸಬಾರದು. ಮುಖ್ಯ ರಸ್ತೆ ಸಂಚಾರ ನಿಯಮಗಳನ್ನು ಕೈಸನ್ನೆಯ ಮೂಲಕ ಸಾರ್ವಜನಿಕರಿಗೆ ತಿಳಿಸಿದರು.

ಕಾರ್ಯಕ್ರಮದಲ್ಲಿ ರಸ್ತೆ ಸುರಕ್ಷತೆ ಕುರಿತಾದ ಭಿತ್ತಿಪತ್ರ ಅನಾವರಣಗೊಳಿಸಿದರು. ರಸ್ತೆ ಸುರಕ್ಷತೆ ಜಾಗೃತಿಯ ವಿಡಿಯೋ ತುಣುಕುಗಳನ್ನು ಪ್ರದರ್ಶಿಸಲಾಯಿತು.

ಈ ವೇಳೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಪಿ.ರಾಮಬ್ರಹ್ಮಂ, ಪ್ರಭಾರಿ ಪ್ರಾದೇಶಿಕ ಸಾರಿಗೆ ಅಧಿಕಾರಿ ನಿಜಾಮುದ್ದೀನ್ ಶರೀಫ್, ಬಳ್ಳಾರಿ ತಾಲ್ಲೂಕು ತಹಶೀಲ್ದಾರರಾದ ಟಿ.ರೇಖಾ ಸೇರಿದಂತೆ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿಯ ಅಧಿಕಾರಿಗಳು, ಸಂಚಾರಿ ಪೊಲೀಸ್ ಅಧಿಕಾರಿಗಳು ಹಾಗೂ ಆಟೋ, ಲಾರಿ ಸಂಘದ ಪದಾಧಿಕಾರಿಗಳು, ಚಾಲಕರು, ಸಾರ್ವಜನಿಕರು ಉಪಸ್ಥಿತರಿದ್ದರು.

# ವಯೋವೃದ್ಧರ ಹಿತದೃಷ್ಟಿಯಿಂದ ನಗರಸಭೆಯಿಂದ ಪೂರೈಸಿದ ಟ್ಯಾಂಕರ್ ನೀರನ್ನು ತಿರಸ್ಕರಿಸಿದ ಪ್ರಜ್ಞಾವಂತ ನಾಗರಿಕರು



ಗದಗ 02:- ಅವಳಿ ನಗರವಾದ ಗದಗ ಬೆಟಗೇರಿ ನಗರಸಭೆಯ ವಿವಿಧ ವಾರ್ಡಗಳಲ್ಲಿ ನಿಗದಿತ ಸಮಯದಲ್ಲಿ ಕುಡಿಯುವ ನೀರಿನ ಸರಬರಾಜು ಮಾಡುವಲ್ಲಿ ವೈತೆಯ ಉಂಟಾದಾಗ ಕೂಡಲೇ ಗೌರವಾನ್ವಿತ ನಗರಸಭೆಯಿಂದ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡುವ ವಾಡಿಕೆಯು ಕಳೆದ ಮೂರು ದಶಗಳಿಂದಲೂ ನಾವು ಕಾಣುತ್ತಿದ್ದೇವೆ. ನಗರಸಭೆಯ ಈ ಒಂದು ಸಾರ್ವಜನಿಕ ಹಿತಾದೃಷ್ಟಿಯಿಂದ ತುರ್ತಾಗಿ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡುತ್ತಿರುವದು ಸಂತಸವೇ.

ಆದರೆ ಗದಗ ಬೆಟಗೇರಿ ನಗರಸಭೆಯಿಂದ ಪೂರೈಸಲಾಗುವ ಟ್ಯಾಂಕರ್ ನೀರನ್ನು ಬಡಾವಣೆಯ ವಯಸ್ಸಾದ ಹಿರಿಯ ನಾಗರಿಕರು ವಯೋವೃದ್ಧರು, ಮಹಿಳೆಯರು ಹಾಗೂ ಅಶಕ್ತರಿಗೆ ಮಾತ್ರ ಸದರ ನೀರಿನ ಟ್ಯಾಂಕರ್ ಮೂಲಕ ತಮ್ಮ ಮನೆ ಮನೆಗೆ ನೀರಿನ ಸಂಗ್ರಹ ಮಾಡಿಕೊಳ್ಳುವದು. ಅಸಾಧ್ಯವಾದುದಾಗಿದೆ.

ಇದರಿಂದಾಗಿ ಹಲವು ಬಡಾವಣೆಯ ನಾಗರಿಕರಿಗೆ ಗೌರವಾನ್ವಿತ ನಗರಸಭೆವತಿಯಿಂದ ಪೂರೈಸಲಾದ ಟ್ಯಾಂಕರ್ ನೀರಿನ ಸದುಪಯೋಗ ಪಡೆಯುವುದರಲ್ಲಿ ತುಂಬಾ ತೊಂದರೆಯನ್ನು ಎದುರಿಸಿ, ನಗರಸಭೆಯಿಂದ ಪೂರೈಸಿದ ನೀರು ಪಡೆಯಲು ಸಾಧ್ಯವಾಗದಾಗಿರುತ್ತದೆ. ಇದ-ರಿಂದ ಅವರಿಗೆ ನೀರಿನ ಅಭಾವ ಉಂಟಾಗುತ್ತದೆ. ಇದನ್ನು ಅರಿತ ಗದಗ ಬೆಟಗೇರಿ ನಗರಸಭೆಯ 23 ನೇ ವಾರ್ಡಿನ ಹನಮನ ಗರಡಿ, ಹಾಗೂ ಮುಲ್ಲಾ ಓಣಿಯ ಬಡಾವಣೆಯ ಪ್ರಜ್ಞಾವಂತ ನಾಗರಿಕರು ಇಂದು ಬೆಳಿಗ್ಗೆ 9 ಘಂಟೆಗೆ ಪೂರೈಸಲಾದ ಟ್ಯಾಂಕರ್ ನೀರನ್ನು ತಮ್ಮ ಮನೆ ಮನೆಗೆ ಸಂಗ್ರಹಿಸಿಕೊಳ್ಳದೇ ಟ್ಯಾಂಕರ್ ನೀರನ್ನು ತಿರಸ್ಕಾರ ಮಾಡಿ ತಮಗೆ ಸಕಾಲಕ್ಕೆ ನಿಗದಿತ ಸಮಯದಲ್ಲಿಯೇ ತುಂಗಭದ್ರಾ ಕುಡಿಯುವ ನೀರನ್ನೇ ಪೂರೈಸಲು ಆಗ್ರಹಿಸಿ ಬಡಾವಣೆಯ ಪ್ರಮುಖ ರಸ್ತೆಯಲ್ಲಿ ಖಾಲಿ ಕೊಡಗಳನ್ನು ಇಟ್ಟು ಸುಮಾರು 3 ಘಂ-ಟೆಗೂ ಹೆಚ್ಚಿನ ಕಾಲ ರಸ್ತೆ ತಡೆ ನಡೆಸಿದರೂ ಕೂಡಾ ನಗರಸಭೆಯ ಸಂಬಂಧಪಟ್ಟ ಅಧಿಕಾರಿಗಳಾಗಲಿ, ವಾರ್ಡಿನ ನಗರಸಭಾ ಸದಸ್ಯರಾಗಲಿ ಘಟನಾ ಸ್ಥಳಕ್ಕೆ ಬಾರದಿರುವದನ್ನು ಕಂಡು ನಗರಸಭೆಯ ಸಿಬ್ಬಂದಿಗಳಿಗೆ ಹಾಗೂ ನಗರಸಭಾ ಸದಸ್ಯರಿಗೆ ದಿಕ್ಕಾರವನ್ನು ಕೂಗಿದರು. ನಿರಂತರ ಮೂರು ಘಂಟೆಯ ನಂತರದಲ್ಲಿ ತಡವಾಗಿ ಆಗಮಿಸಿದ ನಗರಸಭೆಯ ಹಿರಿಯ ಕಾರ್ಯನಿರ್ವಾಹಕ ಅಭಿಯಂತರರಾದ ಲಕ್ಷ್ಮಣ ಮಾರುತಿ ಜೋಗದಂಡಕರ ರವರನ್ನು ಬಡಾವಣೆಯ ನಾಗರಿಕರು ಮುತ್ತಿಗೆ ಹಾಕಿ 23 ನೇ ವಾರ್ಡಿನ ನಗರಸಭಾ ಸದಸ್ಯರ ವಿರುದ್ಧ ತಮ್ಮ ಆಕ್ರೋಶವನ್ನು ಹೊರಹಾಕಿದ ಪ್ರಸಂಗ ಜರುಗಿತು.

ಈ ಸಂಧರ್ಭದಲ್ಲಿ ಬಡಾವಣೆಯ ಪ್ರಮುಖರಾದ ರಮಾಕಾಂತ ಸಾವಕಾರ, ಬಿಬಿಜಾನ ಶೇಖ್, ಶ್ರೀಮತಿ ಸಹನಾ ರಾಘವೇಂದ್ರ ಪಾಲನಕರ, ರೇಣವ್ವ ಬೋವಿ, ಸೀತಾಲಕ್ಷ್ಮಿ ಅಷ್ಟಪುತ್ರೆ, ಹಣಮವ್ವ ಮೆಣಸಗಿ, ಕಟ್ಟಿಮನಿ, ರಾಯ್ಕರ, ನ್ಯಾಯವಾದಿ ಹಾಗೂ ಸಾಮಾಜಿಕ ಕಾರ್ಯಕರ್ತರಾದ ರಾಘವೇಂದ್ರ ಪಾಲನಕರ, ಹಾಗೂ ಸಮಸ್ತ ಬಡಾವಣೆಯ ನಾಗರಿಕರು ಉಪಸ್ಥಿತರಿದ್ದರು.

### ಟ್ಯಾಂಕರ್ ನೀರು ಬೇಡಾ ತುಂಗಭದ್ರಾ ಮನೆ ನಳದ ನೀರು ಪೂರೈಸಿ : ಶ್ರೀಮತಿ ಸಹನಾ ಪಾಲನಕರ

ವಯೋವೃದ್ಧರಿಗಾಗಿ ನೀರಿನ ಸೌಲಭ್ಯ ಸುರಳಿತವಾಗಿ ದೊರಕುವಂತಾಗಲು ತಿಂಗಳಿಗೆ ಎರಡು ಬಾರಿ ಪೂರೈಕೆಯಾಗುವ ತುಂಗಭದ್ರಾ ನೀರು ಅದನ್ನಾದರೂ ಸರಿಯಾದ ಸಮಯದಲ್ಲಿ ಪೂರೈಸಲು ಮತ್ತು ಬಡಾವಣೆಯಲ್ಲಿ ದೈನಂದಿನ ಬಳಕೆ ನೀರಿನ ವ್ಯವಸ್ಥೆಗಾಗಿ ಸಬ್ ಪಾಯಿಂಟ್ ಅಳವಡಿಸಲು ಆಗ್ರಹಿಸಿ ನಗರಸಭೆಯಿಂದ ಪೂರೈಸಲಾದ ಟ್ಯಾಂಕರ್ ನೀರನ್ನು ಬಡಾವಣೆಯ ಪ್ರಜ್ಞಾವಂತ ನಾಗರಿಕರು ಸಾಮೂಹಿಕವಾಗಿ ತಿರಸ್ಕರಿಸಿ ವಯೋವೃದ್ಧರಿಗಾಗಿ ಟ್ಯಾಂಕರ್ ನೀರು ಬೇಡಾ ಮನೆ ನಳದ ನೀರು ಪೂರೈಸಿ ಎಂಬ ವಿನೂತನ ಅಭಿಯಾನಕ್ಕೆ ಸಹಕಾರ ನೀಡಿದ ನಗರದ ಸಮಸ್ತ 23 ನೇ ವಾರ್ಡಿನ ಹನಮನ ಗರಡಿ, ಮುಲ್ಲಾ ಓಣಿಯ ಪ್ರಜ್ಞಾವಂತ ನಾಗರಿಕರಿಗೆ ಅಭಿನಂದನಾರ್ಹರು.

**ಶ್ರೀಮತಿ ರಾಘವೇಂದ್ರ ಪಾಲನಕರ**
**ಹನಮನ ಗರಡಿ ಬಡಾವಣೆಯ ನಿವಾಸಿಗಳು ಗದಗ.**

# ಚಿತ್ತವಾಡಗಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕುಷ್ಠರೋಗ ಜಾಗೃತಿ ಕಾರ್ಯಗಾರ, ಆರಂಭಿಕ ಹಂತದಲ್ಲೇ ಚಿಕಿತ್ಸೆ ಪಡೆದು ಅಂಗವೈಕಲ್ಯತೆ ತಪ್ಪಿಸಬಹುದು



ವಿಜಯನಗರ(ಹೊಸಪೇಟೆ)ಫೆ. 02: ಚಿತ್ತವಾಡಗಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ಡಿ.ಭಾಸ್ಕರ್. ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ಜಿಲ್ಲೆಯಾದ್ಯಂತ ಜನವರಿ 30 ರಿಂದ ಫೆಬ್ರವರಿ 13ರವರೆಗೆ ಹದಿನೈದು ದಿನಗಳ ಕಾಲ ಆಶಾ ಕಾರ್ಯಕರ್ತೆ-ರ್ಯರು, ಆರೋಗ್ಯ ಸಿಬ್ಬಂದಿ ಸೇರಿ ಹಾಗೂ ಸ್ತ್ರೀ ಶಕ್ತಿ ಮತ್ತು ಮಹಿಳಾ ಸ್ವಸಹಾಯ ಸಂಘಗಳೊಂದಿಗೆ ವಿವಿಧ ಶಾಲಾ, ಕಾಲೇಜುಗಳಲ್ಲಿ ವಿಶೇಷವಾಗಿ ಗ್ರಾಮೀಣ ಮಟ್ಟದಲ್ಲಿ ಕುಷ್ಠರೋಗ ಕುರಿತು ಜಾಗೃತಿ ಮೂಡಿಸಲಾಗುವುದು. ರೋಗದ ಗುಣಲಕ್ಷಣಗಳನ್ನು ಗಮನಿಸಿ ಆರಂಭಿಕ ಹಂತದಲ್ಲೇ ಪತ್ತೆ ಹಚ್ಚಿ ಚಿಕಿತ್ಸೆ ಪಡೆಯುವುದರಿಂದ ಉಂಟಾಗುವ ಅಂಗವೈಕಲ್ಯತೆ ತಡೆಗಟ್ಟಬಹುದಾಗಿದೆ ಎಂದು ತಿಳಿಸಿದರು.

ಪ್ರಸಕ್ತ ಸಾಲಿನಲ್ಲಿ ಜಿಲ್ಲೆಯಲ್ಲಿ ಒಟ್ಟು 91 ಹೊಸ ಪ್ರಕರಣಗಳು ಕಂಡು ಬಂದಿದ್ದು ಈ ಪೈಕಿ 82 ಪ್ರಕರಣಗಳಲ್ಲಿ ಚಿಕಿತ್ಸೆ ಪಡೆದು ಗುಣಮುಖರಾಗಿದ್ದಾರೆ. ಪ್ರಸ್ತುತ ಜಿಲ್ಲೆಯಲ್ಲಿ 99 ಕುಷ್ಠರೋಗ ಪ್ರಕರಣಗಳಿಗೆ ಚಿಕಿತ್ಸೆ ನೀಡಲಾಗುತ್ತಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ತಾಲ್ಲೂಕು ವೈದ್ಯಾಧಿಕಾರಿ ಡಾ.ವಿನೋದ್, ಚಿತ್ತವಾಡಗಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ.ಬಸವರಾಜ್, ಡಾ.ಯಶವಂತ್ ಹಾಜರಿದ್ದರು ಜಿಲ್ಲಾ ಕುಷ್ಠರೋಗ ಸಲಹೆಗಾರ ಡಾ.ಕೊಟ್ರೇಶ್, ಆಶಾಕಾರ್ಯಕರ್ತೆಯರು ಮತ್ತು ಪ್ಯಾರಾಮೆಡಿಕಲ್ ವಿದ್ಯಾರ್ಥಿಗಳು ಇದ್ದರು.

# ಹಾವಗಿಲಿಂಗೇಶ್ವರ ಶ್ರೀಗೆ ಗೌರವ ಡಾಕ್ಟರೇಟ್



ಬೀದರ್:ಫೆ. 02: ಭಾಲ್ಕಿ ತಾಲ್ಲೂಕಿನ ಹಲಬರ್ಗಾದ ರಾಚೋಟೇಶ್ವರ ಸಂಸ್ಥಾನ ಮಠದ ಪೀಠಾಧಿಪತಿ ಹಾವಗಿಲಿಂಗೇಶ್ವರ ಶಿವಾಚಾರ್ಯರಿಗೆ ಯು.ಎಸ್.ಎ.ದ ಏಷ್ಯಾ ಇಂಟರ್‌ನ್ಯಾಷನಲ್ ಕಲ್ಚರಲ್ ರಿಸರ್ಚ್ ವಿಶ್ವವಿದ್ಯಾಲಯವು ಗೌರವ ಡಾಕ್ಟರೇಟ್ ನೀಡಿದೆ.

ಬೆಂಗಳೂರಿನಲ್ಲಿ ಶನಿವಾರ ನಡೆದ ಸಮಾರಂಭದಲ್ಲಿ ಶ್ರೀಗಳಿಗೆ ಗೌರವ ಡಾಕ್ಟರೇಟ್ ಪ್ರದಾನ ಮಾಡಲಾಯಿತು.

ಆಧ್ಯಾತ್ಮಿಕ ಹಾಗೂ ಸಾಮಾಜಿಕ ಸೇವೆಗಾಗಿ ಅವರಿಗೆ ಡಾಕ್ಟರೇಟ್ ದೊರಕಿದೆ.

ಹಾವಗಿಲಿಂಗೇಶ್ವರ ಶಿವಾಚಾರ್ಯರು ಎರಡು ದಶಕದಿಂದ ಸಮಾಜೋ ಧಾರ್ಮಿಕ ಕಾರ್ಯಗಳಲ್ಲಿ ನಿರತರಾಗಿದ್ದಾರೆ. ಭಕ್ತರಿಗೆ ಸನ್ಮಾರ್ಗ ತೋರುತ್ತಿದ್ದಾರೆ.

ಹಲಬರ್ಗಾ ಮಠದ ಜತೆಗೆ ಹೈದರಾಬಾದ್‌ನ ನಾಗಲಿಂಗೇಶ್ವರ ಮಠ, ಶಿವಣಿಯ ಹಾವಗಿ ಸ್ವಾಮಿ ಮಠ, ನಿಜಾಂಪುರದ ಕುಮಾರ ಆಶ್ರಮ ಮಠ, ಔರಾದ್ ತಾಲ್ಲೂಕಿನ ಬೋರಾಳ ಮಠದ ಪೀಠಾಧಿಪತಿಯಾಗಿದ್ದಾರೆ. ಅಲಿಯಂಬರ್‌ನ ಗಂಗಾಧರ ಮಠದ ಉತ್ತರಾಧಿಕಾರಿ ಸಹ ಆಗಿದ್ದಾರೆ.

ಶ್ರೀಗಳಿಗೆ ಗೌರವ ಡಾಕ್ಟರೇಟ್ ಲಭಿಸಿದ್ದಕ್ಕೆ ಅನೇಕ ಭಕ್ತರು ಸಂತಸ ವ್ಯಕ್ತಪಡಿಸಿ ಅಭಿನಂದನೆ ತಿಳಿಸಿದ್ದಾರೆ.

# ಅಖಿಲ ಕರ್ನಾಟಕ ಇಪ್ಪತ್ತೆರಡನೆಯ ಹಸ್ತಪ್ರತಿ ಸಮ್ಮೆಳನದ ಸಮಾರೋಪ

## ದೇಶದ ಎಲ್ಲ ಶಾಸ್ತ್ರಗಳ ಮೂಲವೇ ಹಸ್ತಪ್ರತಿ : ಸಮ್ಮೇಳನಾಧ್ಯಕ್ಷರಾದ ಪ್ರೊ. ಮಲ್ಲೆಪುರಂ

ಬಾಗಲಕೋಟೆ: ಫೆ. 02: ಹಳೆಗನ್ನಡವಾಗಲಿ, ಶಾಸನಗಳಾಗಲಿ, ಹಸ್ತಪ್ರತಿಯಾಗಲಿ ನಮ್ಮ ಜ್ಞಾನದ ಅಧ್ಯಯನ ಮೂಲಬೇರುಗಳಾಗಿವೆ, ಆ ಮೂಲ ಬೇರುಗಳ ಕುರಿತು ಪ್ರಸ್ತುತ ಕಾಲಘಟ್ಟದಲ್ಲಿ ಅಧ್ಯಯನದ ಅವಶ್ಯಕತೆ ಇದೆ, ಇವುಗಳು ದೇಶದ ಆಸ್ತಿಯಾಗಿದ್ದು ರಕ್ಷಣೆ ಮಾಡುವ ಕರ್ತವ್ಯವಾಗಬೇಕು ಎಂದು ಅಖಿಲ ಕರ್ನಾಟಕ ಇಪ್ಪತ್ತೆರಡನೆಯ ಸಮ್ಮೇಳನಾಧ್ಯಕ್ಷರಾದ ಪ್ರೊ. ಮಲ್ಲೇಪುರಂ ಜಿ.ವೆಂಕಟೇಶ ಹೇಳಿದರು.

ಹಂಪಿ ಕನ್ನಡ ವಿಶ್ವವಿದ್ಯಾಲಯ ಹಸ್ತಪ್ರತಿ ವಿಭಾಗ ಹಾಗೂ ಸರಕಾರಿ ಪ್ರಥಮ ದರ್ಜೆ ಕಾಲೇಜು ನವನಗರ ಇವರ ಸಂಯುಕ್ತ ಆಶ್ರಯದಲ್ಲಿ ಕಾಲೇಜಿ ವಿಶ್ವಮಾನವ ಸಭಾ ಭವನದಲ್ಲಿ ಎರಡು ದಿನಗಳ ಕಾಲ ನಡೆದ ಅಖಿಲ ಕರ್ನಾಟಕ ಇಪ್ಪತ್ತೆರಡನೆಯ ಹಸ್ತಪ್ರತಿ ಸಮ್ಮೆಳನದ ಸಮಾರೋಪ ಸಮಾರಂಭದಲ್ಲಿ ಸಮ್ಮೇಳನಾಧ್ಯಕ್ಷತೆ ಮಾತುಗಳನ್ನಾಡಿದ ಅವರು ನಮ್ಮ ನಾಡಿನ ಹಾಗೂ ನಮ್ಮ ವಿಶ್ವದ ಪ್ರಾಚೀನ ಸಂಸ್ಕೃತಿಯನ್ನು ತಿಳಿಯಬೇಕಾದರೆ ನಮಗೆ ಹಸ್ತಪ್ರತಿಗಳ ಅಧ್ಯಯನದ ಅವಶ್ಯಕತೆ ಇದೆ, ಕಾವ್ಯ, ಶಾಸ್ತ್ರ, ನಾಟಕ ಸಾಹಿತ್ಯ,, ಊರಿನ ಸಾಮಾಜಿಕ-ಸಾಂಸ್ಕೃತಿಕ ವಿವರಗಳನ್ನು ಒಳಗೊಂಡ ಬರಹ, ಶಾಸನಗಳು ಇವುಗಳನ್ನೆಲ್ಲಾ ನಾವೂ ಸ್ಥೂಲವಾಗಿ ಹಸ್ತಪ್ರತಿ ಎನ್ನುತ್ತೇವೆ. ವಿಶ್ವದ ಸಾಂಸ್ಕೃತಿಕ ಚರಿತ್ರೆಯನ್ನು ತಿಳಿಯಲು ಈ ಹಸ್ತಪ್ರತಿಗಳ ಅವಶ್ಯವಾಗಿದ್ದು ಅವುಗಳ ರಕ್ಷಣೆ ಅಗತ್ಯವಾಗಿವೆ ಎಂದರು,




ಸಮಾರೋಪ ನುಡಿಗಳನ್ನಾಡಿದ ಬೆಂಗಳೂರಿನ ಹಿರಿಯ ವಿದ್ವಾಂಸರಾದ ಡಾ. ನಾ ಗೀತಾಚಾರ್ಯ ದೇಶದಲ್ಲಿಯೇ ಹಸ್ತಪ್ರತಿಗಳ ಸಂಗ್ರಹ ಅವುಗಳ ಅಧ್ಯಯನ ಮಾಡುತ್ತಾ ಸಮ್ಮೇಳನ ಮೂಲಕ ಜನರಲ್ಲಿ ಜಾಗೃತಿ ಮೂಡಿಸುತ್ತಿರುವ ಹಂಪಿ ಕನ್ನಡ ವಿಶ್ವವಿದ್ಯಾಲಯ ಹಾಗೂ ಹಸ್ತಪ್ರತಿ ವಿಭಾಗದ ಕಾರ್ಯ ಶ್ಲಾಘನೀಯವಾಗಿದೆ, ಇದು ದೇಶದಲ್ಲಿ ಏಕೈಕ ವಿಶ್ವವಿದ್ಯಾಲಯವಾಗಿದೆ ಎಂದರು.

ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದ ಹಂಪಿ ಕನ್ನಡ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ.ಡಿ.ವಿ.ಪರಮಶಿವಮೂರ್ತಿ ಅವರು ಮಾತನಾಡಿ ಕನ್ನಡ ವಿಶ್ವವಿದ್ಯಾಲಯ ಹಸ್ತಪ್ರತಿ ವಿಭಾಗದವು ಹಸ್ತಪ್ರತಿ ಸಂಗ್ರಹ ಮಾಡುವಾಗ ಬಾಗಲಕೋಟೆ ಮುಳಗಡೆ ಪ್ರದೇಶದಲ್ಲಿ ಅಲೆದಾಡಿದ ಅನುಭವ ಹಂಚಿಕೊಂಡರು. ಹಸ್ತಪ್ರತಿಗಳ ಸಾಂಸ್ಕೃತಿಕವಾಗಿ ಮಾನಸಿಕವಾಗಿ ನಮ್ಮಲ್ಲಿ ಜ್ಞಾನವನ್ನು ಜಾಗೃತಿಗೊಳಿಸುತ್ತಾ ಬಂದಿವೆ. ಹಸ್ತಪ್ರತಿ ಅಧ್ಯಯನದಲ್ಲಿ ಇಂದಿನ ಯುವಸಮೂಹ ಹೆಚ್ಚಿನ ಸಂಖ್ಯೆಯಲ್ಲಿ ತೊಡಗಬೇಕು. ಹಸ್ತಪ್ರತಿ ವಿಭಾಗವು ಸತತವಾಗಿ 34 ವರ್ಷಗಳಿಂದ ಹಸ್ತಪ್ರತಿ ಕ್ಷೇತ್ರವನ್ನು ಪುನರುಜ್ಜೀವನಗೊಳಿಸುವ ಪ್ರಯತ್ನ ಮಾಡುತ್ತಿದೆ. ಆ ನಿಟ್ಟಿನಲ್ಲಿ ಹಸ್ತಪ್ರತಿ ಸಮ್ಮೇಳನವನ್ನು ಮಾಡುವ ಏಕೈಕ ವಿಶ್ವವಿದ್ಯಾಲಯ ಕನ್ನಡ ವಿಶ್ವವಿದ್ಯಾಲಯವಾಗಿದೆ ಎಂದರು.

ಅತಿಥಿಗಳಾಗಿ ಹಡಲಗೇರಿ ಸ.ಪ್ರ.ದ.ವಸತಿಯುಕ್ತ ಕಾಲೇಜಿನ ಪ್ರಾಂಶುಪಾಲರಾದ ಡಾ.ಶರಣಗೌಡ ಪಾಟೀಲ ಅವರು ಮಾತನಾಡಿ ಹಂಪಿ ಕನ್ನಡ ವಿಶ್ವವಿದ್ಯಾಲದ ಹಸ್ತಪ್ರತಿ ವಿಭಾಗ ನಿರಂತರವಾಗಿ ಮಾಡುತ್ತಿರುವ ಕನ್ನಡ ಕಾರ್ಯ ಮೆಚ್ಚಿಗೆ ಪಡೆದುಕೊಂಡಿದೆ ಎಂದರು.

ಹಸ್ತಪ್ರತಿಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ.ವೀರೇಶ ಬಡಿಗೇರ ಹಾಗೂ ನವನಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಡಾ.ಅರುಣಕುಮಾರ ಗಾಳಿ ಅವರು ಸಮ್ಮೇಳನದ ಯಶಸ್ವಿಗೆ ಶ್ರಮಿಸಿದ ಎಲ್ಲರಿಗೂ ಕೃತಜ್ಞತೆ ಸಲ್ಲಿಸಿ ಮಾತನಾಡಿದರು.

ಪ್ರಮಾಣ ಪತ್ರ ವಿತರಣೆ: ಎರಡು ದಿನಗಳ ಕಾಲ ನಡೆದ ಅಖಿಲ ಕರ್ನಾಟಕ ಇಪ್ಪತ್ತೆರಡನೆಯ ಸಮ್ಮೇಳನದಲ್ಲಿ ಭಾಗವಹಿಸಿ ವಿವಿಧ ಕಾಲೇಜುಗಳ ಉಪನ್ಯಾಸಕರಿಗೆ, ಪ್ರಾಧ್ಯಾಪಕರಿಗೆ, ಸಂಶೋಧನಾರ್ಥಿಗಳಿಗೆ ಪ್ರಮಾಣ ಪತ್ರ ವಿತರಿಸಿದರು.

ಗಮನ ಸೆಳದ ಹಸ್ತಪ್ರತಿಗಳ ಪ್ರದರ್ಶನ : ಮೆಚ್ಚಿಗೆ ವ್ಯಕ್ತಪಡಿಸಿದ ವಿದ್ಯಾರ್ಥಿಗಳ್ಲು ಎರಡು ದಿನಗಳ ಕಾಲ ನಡೆದ ಅಖಿಲ ಕರ್ನಾಟಕ ಇಪ್ಪತ್ತೆರಡನೆಯ ಹಸ್ತಪ್ರತಿ ಸಮ್ಮೆಳನದಲ್ಲಿ ಹಸ್ತಪ್ರತಿ ಪ್ರದರ್ಶನವು ಸಂಶೋಧಕರು, ಸಾಹಿತ್ಯಾಸಕ್ತರಿಗೆ ಮತ್ತು ವಿದ್ಯಾರ್ಥಿಗಳಿಗೆ ಗಮನ ಸೆಳೆಯಿತು. ಎಲ್ಲಾ ಬಗೆ ಬಗೆಯ ಹಸ್ತಪ್ರತಿಗಳಿಂದ ಪಾರಂಪರಿಕ ಜ್ಞಾನ ಮತ್ತು ಸಂಪ್ರದಾಯಗಳು, ಸಾಂಸ್ಕೃತಿಕ ಮತ್ತು ವಿವಿಧ ಶಾಸ್ತ್ರಗಳ ಬಗ್ಗೆ ವಿದ್ಯಾರ್ಥಿಗಳು ಮಾಹಿತಿ ಪಡೆದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ


# ಕರುನಾಡಿನಲ್ಲಿ ನೆಮ್ಮದಿಯ ಗ್ಯಾರಂಟಿ

## ಅಲ್ಪಸಂಖ್ಯಾತರ ಕಲ್ಯಾಣಕ್ಕೆ ಬದ್ಧ





- ಮಂಗಳೂರಿನಲ್ಲಿ ಹಜ್ ಭವನ ನಿರ್ಮಾಣ
- 2024-25 ನೇ ಸಾಲಿನಲ್ಲಿ ಜೈನರ ಪ್ರಮುಖ ಧಾರ್ಮಿಕ ಸ್ಥಳಗಳ ಅಭಿವೃದ್ಧಿಗಾಗಿ ₹. 50 ಕೋಟಿ ಅನುದಾನ
- ಅಲ್ಪಸಂಖ್ಯಾತರ 169 ವಸತಿ ಶಾಲೆ / ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ 25,000 ವಿದ್ಯಾರ್ಥಿನಿಯರಿಗೆ ಸ್ವಯಂ ರಕ್ಷಣಾ ಕೌಶಲ್ಯ ತರಬೇತಿ
- ಉಳ್ಳಾಲದಲ್ಲಿ ಅಲ್ಪಸಂಖ್ಯಾತರ ವಿದ್ಯಾರ್ಥಿನಿಯರಿಗಾಗಿ ವಸತಿ ಸಹಿತ ಪಿಯು ಕಾಲೇಜುಗಳ ಸ್ಥಾಪನೆ
- 50 ಹೊಸ ಮೌಲಾನಾ ಆಜಾದ್ ಶಾಲೆಗಳು ಆರಂಭ
- ಕೆಪಿಎಸ್ ಮಾದರಿಯಲ್ಲಿ ಉರ್ದು ಶಾಲೆಗಳ ಅಭಿವೃದ್ಧಿ
- ಬೆಂಗಳೂರಿನಲ್ಲಿ ಹಜ್ ಭವನಕ್ಕೆ ಬರುವ ಪ್ರವಾಸಿಗರಿಗೆ ಉಳಿದುಕೊಳ್ಳಲು ವ್ಯವಸ್ಥೆ ಕಲ್ಪಿಸಲು ಈ ಬಾರಿ ₹. 10 ಕೋಟಿ ಅನುದಾನ



## ಕರ್ನಾಟಕ ನವ ನಿರ್ಮಾಣಕ್ಕೆ ಗ್ಯಾರಂಟಿ ಸರ್ಕಾರ...

ಗ್ಯಾರಂಟಿ ಯೋಜನೆಗಳ ಜೊತೆಗೆ ಅಭಿವೃದ್ಧಿ ಕಾರ್ಯಕ್ರಮಗಳನ್ನು ಜಾರಿ ಮಾಡುತ್ತಾ ನುಡಿದಂತೆ ನಡೆದು ಜನರ ವಿಶ್ವಾಸ ಗಳಿಸಿದ್ದೇವೆ.

ವೈಜ್ಞಾನಿಕ ಮನೋಧರ್ಮ ಬೆಳೆಸಿಕೊಳ್ಳುವುದು; ಪ್ರಶ್ನೆ ಮಾಡುವ ಮತ್ತು ಬದಲಾವಣೆಗೆ ಒಡ್ಡಿಕೊಳ್ಳುವ ಮನಃಸ್ಥಿತಿ ಬೆಳೆಸಿಕೊಳ್ಳುವುದು.- ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ

CMofKarnataka https://dipr.karnataka.gov.in/

ಕರ್ನಾಟಕ ವಾರ್ತೆ

ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ಮಾಲೀಕತ್ವ ಮತ್ತು ಸಂಪಾದಕತ್ವದ ಪತ್ರಿಕೆಗಳಿಗೆ ಪ್ರೋತ್ಸಾಹ ರೂಪದ ಜಾಹೀರಾತು

### ಬಸವ ಮಂಟಪದಲ್ಲಿ ಚನ್ನಹುಣ್ಣಿಮೆ, ಬೆಳದಿಂಗಳ ಪ್ರಸಾದ

## ಚನ್ನಹುಣ್ಣಿಮೆ ಸಮಾಜ ಸಂಘಟನೆಯ ದಿನವಾಗಲಿ: ಶ್ರೀಕಾಂತ ಸ್ವಾಮಿ



ಅಶೋಕಾ ಕೋಟೆ ವಾರ್ತೆ

ಬೀದರ: ಫೆ. 02–ಅವಿರಳ ಜ್ಞಾನಿ ಚನ್ನಬಸವಣ್ಣನವರ ಲಿಂಗೈಕ್ಯ ಸಂಸ್ಮರಣೆ ದಿನ "ಸಮಾಜ ಸಂಘಟನೆಯ ದಿನ" ವಾಗಿ ಆಚರಿಸುವಂತಾಗಬೇಕೆಂದು ಅಖಿಲ ಭಾರತ ಲಿಂಗಾಯತ ಸಮನ್ವಯ ಸಮಿತಿಯ ರಾಜ್ಯ ಸಂಚಾಲಕ ಶ್ರೀಕಾಂತ ಸ್ವಾಮಿ ನುಡಿದರು.

ಜಿಲ್ಲಾ ರಾಷ್ಟ್ರೀಯ ಬಸವ ದಳ, ಲಿಂಗಾಯತ ಸಮಾಜ ಹಾಗೂ ಕ್ರಾಂತಿ ಗಂಗೋತ್ರಿ ಅಕ್ಕನಾಗಲಾಂಬಿಕಾ ಮಹಿಳಾ ಗಣ ವತಿಯಿಂದ ನಗರದ ಬಸವ ಮಂಟಪದಲ್ಲಿ ಜರುಗಿದ ಚನ್ನಹುಣ್ಣಿಮೆ, ಬೆಳದಿಂಗಳ ಪ್ರಸಾದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಕೇವಲ 24ನೇ ವಯಸ್ಸಿನಲ್ಲಿ ಚನ್ನಬಸವೇಶ್ವರರು ಷಟಸ್ಥಲ ಚಕ್ರವರ್ತಿ ಎನಿಸಿಕೊಂಡು ವಚನ ಸಾಹಿತ್ಯ ಸಂರಕ್ಷಣೆಯಲ್ಲಿ ತೊಡಗಿ, ಲಿಂಗಾಯತ ಧರ್ಮ ಸಂರಕ್ಷಿಸಿದ್ದಾರೆ. ಅವರ ತತ್ವಾದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ವಚನಗಳ ಅಧ್ಯಯನ ಮಾಡಬೇಕೆಂದು ಸ್ವಾಮಿ ಸಲಹೆ ನೀಡಿದರು.

ಸಮ್ಮುಖ ವಹಿಸಿದ್ದ ಬಸವ ಮಂಟಪದ ಪೂಜ್ಯ ಶ್ರೀ ಸದ್ಗುರು ಸತ್ಯಾದೇವಿ ಮಾತಾಜಿ ಮಾತನಾಡಿ ವಚನ ಸಾಹಿತ್ಯ ಮರಣ ಸಾಹಿತ್ಯವಲ್ಲ. ಅದು ಜೀವನ ಸಾಹಿತ್ಯ. ಅದು ಹಿಂದು, ಇಂದು, ಮುಂದು ಎಂದೆಂದಿಗೂ ಜೀವಪರ, ಜನಪರ ಭಾವಪರ ಸಾಹಿತ್ಯವಾಗಿದೆ. ವಚನ ಎಂದರೆ ಮಂತ್ರ. ಅವುಗಳಿಗೆ ಗೌರವ ಕೊಡಬೇಕು. ಮಕ್ಕಳಿಗೂ ಅಧ್ಯಯನ ಮಾಡಿಸಬೇಕು ಎಂದರು.

ದಿವ್ಯ ಸಾನಿಧ್ಯ ವಹಿಸಿದ್ದ ಬೆಂಗಳೂರಿನ ಬಸವ ಗಂಗೋತ್ರಿಯ ಚನ್ನಬಸವೇಶ್ವರ ಜ್ಞಾನಪೀಠದ ಪೀಠಾಧ್ಯಕ್ಷರಾದ ಪೂಜ್ಯ ಶ್ರೀ ಜಗದ್ಗುರು ಡಾ. ಚನ್ನಬಸವಾನಂದ ಸ್ವಾಮೀಜಿ ಮಾತನಾಡುತ್ತ ಬಾಗಲಕೋಟೆ ಜಿಲ್ಲೆಯ ಧರ್ಮಕ್ಷೇತ್ರ ಕೂಡಲ ಸಂಗಮದಲ್ಲಿ ಎರಡು ಎಕರೆ ಜಮೀನು ಖರೀದಿಸಲಾಗಿದೆ. ಪೀಠಸ್ಥಾಪನೆ ಮಾಡಲಾಗುತ್ತಿದೆ. 770 ಅಮರ ಗಣಂಗಳ ಸಂಕೇತವಾಗಿ ಸದಸ್ಯತ್ವ ಅಭಿಯಾನ ಆರಂಭವಾಗಿದೆ. ತನ್ಮೂಲಕ ಲಿಂಗಾಯತ ಧರ್ಮಕ್ಕೆ ಸ್ವತಂತ್ರ ಧರ್ಮದ ಮಾನ್ಯತೆಗಾಗಿ ಯಾರೊಬ್ಬ ಮಠಾಧೀಶರು ಬಾಯಿ ಬಿಡುತ್ತಿಲ್ಲ. ಸಿದ್ಧರಾಮಯ್ಯನವರು ಇರೋವರೆಗೆ ಮಾತ್ರ ಕೇಂದ್ರಕ್ಕೆ ಮರು ಶಿಫಾರಸ್ಸು ಮಾಡಲು ಸಾಧ್ಯ. ಅವರು ಅಧಿಕಾರದಿಂದ ಕೆಳಗಿಳಿದರೆ ಅದು ಗಗನ ಕುಸುಮವಾಗಲಿದೆ. ಆದ್ದರಿಂದ ಕೂಡಲ ಸಂಗಮದ ಲಿಂಗಾಯತ ಧರ್ಮ ಪೀಠ ಸ್ಥಾಪನೆಗೆ ತಲಾ ರೂ. 11 ಸಾವಿರ ನೀಡಿ 770 ಅಮರ ಗಣಂಗಳ ಸಂಕೇತದ ಸದಸ್ಯತ್ವ ಪಡೆದುಕೊಳ್ಳಲು ಸೂಚಿಸಿದರು.

ವೇದಿಕೆ ಮೇಲೆ ಸ.ಪ.ಪೂ. ಕಾಲೇಜು ಕಮಠಾಣಾದ ವಿದ್ಯಾಸ್ವಾಮಿ, ಯುವ ಸಾಹಿತಿ ನಾಗೇಶ ಸ್ವಾಮಿ, ಶಿವಕುಮಾರ ಜಾಬಾ, ನಾಗನಾಥ ಚಿಟಮೆ ಉಪಸ್ಥಿತರಿದ್ದು ಮಾತನಾಡಿದರು. ಮಲ್ಲಿಕಾರ್ಜುನ ಜೈಲರ್ ಗುರುಬಸವ ಪೂಜೆ ನೆರವೇರಿಸಿದರು. ಶಿವಶರಣಪ್ಪ ಪಾಟೀಲ ಹಾರೂರಗೇರಿ ಅಧ್ಯಕ್ಷತೆ ವಹಿಸಿದ್ದರು. ನೇತೃತ್ವ ಶಿವರಾಜ ಪಾಟೀಲ ಅತಿವಾಳ ವಹಿಸಿದ್ದರು. ಉದ್ಯಮಿ ನಾಗಶೆಟ್ಟಿ ದಾಡಗಿ ಧ್ವಜಾರೋಹಣ ನೆರವೇರಿಸಿದರು. ಕಲ್ಯಾಣರಾವ ಬಂಬುಳಗಿ ತಂಡದಿಂದ ವಚನ ಗಾಯನ, ಬಸವ ಮಂಟಪದ ಮಕ್ಕಳಿಂದ ವಚನ ನೃತ್ಯ ಸಭಿಕರ ಗಮನ ಸೆಳೆಯಿತು. ಬಸವರಾಜ ಸಂಗಮದ ಪ್ರಾಸ್ತಾವಿಕ ನುಡಿಗಳನ್ನಾಡಿದರು. ರವಿಕಾಂತ ಬಿರಾದಾರ ಸ್ವಾಗತಿಸಿದರು. ಶಿವಕುಮಾರ ಪಾರಾ ನಿರೂಪಿಸಿದರೆ ಶ್ರೀನಾಥ ಕೋರೆ ವಂದಿಸಿದರು.

ಇದೇ ವೇಳೆ ಪ್ರಮುಖರಾದ ಹಾವಶೆಟ್ಟಿ ಪಾಟೀಲ, ಧನರಾಜ ನಿಟ್ಟೂರೆ, ಕಾಶಿನಾಥ ಪಾಟೀಲ, ಶಿವರಾಜ ಶೆಟಕಾರ ಸುಂದಾಳ, ಕಲ್ಲಪ್ಪ ದೇಶಮುಖ, ಬಸವರಾಜ ಪಾಟೀಲ ಲಿಂಗದಳ್ಳಿ, ಗಣಪತಿ ದೇಶಮುಖ, ಡಾ. ಧನರಾಜ ರಾಗಾ, ನಿರ್ಮಲಾ ನಿಲಂಗೆ, ವಿದ್ಯಾ ಧಾರವಾಡ, ಚನ್ನಬಸಯ್ಯ ಸ್ವಾಮಿ ಉದಗೀರ, ಗಣಪತಿ ಬಿರಾದಾರ, ಸತೀಶ ಪಾಟೀಲ, ನಾಗಯ್ಯ ಸ್ವಾಮಿ, ಮಲ್ಲಿಕಾರ್ಜುನ ಬಿರಾದಾರ ಸಂಗಮ ಸೇರಿದಂತೆ ಹಲವರಿದ್ದರು.

## ಕಮಲಾಪೂರಕ್ಕೆ ಡಿ.ಸಿ.ಭೇಟಿ: ಡಿಸೆಂಬರ್ ಅಂತ್ಯಕ್ಕೆ ಪ್ರಜಾ ಸೌಧ, ತಾಲೂಕಾ ಆಸ್ಪತ್ರೆ ಕಾಮಗಾರಿ ಮುಗಿಸಲು ಗಡುವು



ಕಲಬುರಗಿ, ಫೆ.1 ನೂತನ ತಾಲೂಕು ಕಮಲಾಪೂರನಲ್ಲಿ 8.30 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ ಪ್ರಜಾ ಸೌಧ ಮತ್ತು 42 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣದ ಹಂತದಲ್ಲಿರುವ 100 ಹಾಸಿಗೆಯ ತಾಲೂಕಾ ಆಸ್ಪತ್ರೆ ಕಾಮಗಾರಿ ಡಿಸೆಂಬರ್–2026 ಅಂತ್ಯಕ್ಕೆ ಮುಗಿಸುವಂತೆ ಗುತ್ತಿಗೆದಾರರಿಗೆ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರು ಗಡುವು ನೀಡಿದ್ದಾರೆ.

ಶನಿವಾರ ಕಮಲಾಪೂರ ತಾಲೂಕಿಗೆ ಭೇಟಿ ನೀಡಿದ ಅವರು, ಕಾಮಗಾರಿಯಲ್ಲಿ ಗುಣಮಟ್ಟ ಕಾಯ್ದುಕೊಳ್ಳವೇಕು. ಕಾಲಮಿತಿಯಲ್ಲಿ ಕೆಲಸ ಮುಗಿಸಬೇಕು. ಕಳಪೆ ಕಾಮಗಾರಿ ಸಹಿಸುವುದಿಲ್ಲ ಎಂದು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಇದಲ್ಲದೆ ನೂತನವಾಗಿ ನಿರ್ಮಾಣಗೊಂಡ ಅತಿಥಿಗೃಹ ಕಾಮಗಾರಿ ಪರಿಶೀಲಿಸಿದ ಅವರು, ಕೂಡಲೆ ಹಸ್ತಾಂತರ ಪ್ರಕ್ರಿಯೆ ಪೂರ್ಣಗೊಳಿಸುವಂತೆ ಸೂಚಿಸಿದರು. ಇದಲ್ಲದೆ ಬಿದ್ದಾಪುರ ಗ್ರಾಮದಲ್ಲಿನ ಎನ್.ಎ. ಪ್ರಸ್ತಾವನೆಯ ಭೂಮಿ ಪರಿಶೀಲಿಸಿದರು.

ತಾಲೂಕಿನ ಜೀವಣಗಿಯಲ್ಲಿ 212 ಕೋಟಿ ಹೂಡಿಕೆಯೊಂದಿಗೆ 200 ಕೆಎಲ್‌ಪಿಡಿ ಧಾನ್ಯ ಆಧಾರಿತ ಎಥೆನಾಲ್ ಡಿಸ್ಟಿಲರಿ ಘಟಕ–ಕ್ಕೆ ಭೇಟಿ ನೀಡಿ ಪ್ರಾಯೋಗಿಕ ಉತ್ಪಾದನೆ ಕಾರ್ಯ ಸಹ ಪರಿಶೀಲಿಸಿದಲ್ಲೆ ಕಮಲಾಪೂರ ತಹಶೀಲ್ದಾರ ಕಚೇರಿಯಲ್ಲಿ ಕಂದಾಯ ಇಲಾಖೆಯ ಪ್ರಗತಿ ಪರಿಶೀಲನೆ ಸಹ ನಡೆಸಿದರು.

ಸಹಾಯಕ ಆಯುಕ್ತೆ ಸಾಹಿತ್ಯ, ತಹಶೀಲ್ದಾರ ಮೊಹಮ್ಮದ್ ಮೊಹಸೀನ್, ಜಿಲ್ಲಾ ಕೈಗಾರಿಕೆ ಕೇಂದ್ರದ ಜಂಟಿ ನಿರ್ದೇಶಕ ಅಬ್ದುಲ್ ಅಜೀಮ್ ಇದ್ದರು.

## ಶಿವಶರಣ ಸಿದ್ಧರಾಮೇಶ್ವರರ ಆದರ್ಶ ಯುವ ಪೀಳಿಗೆಗೆ ಪ್ರೇರಣೆ



ಬೀದರ್, ಫೆ. 02–ಜಿಲ್ಲಾ ಭೋವಿ ಸಮಾಜ ಸಂಘದ ವತಿಯಿಂದ ನಗರದ ರಂಗ ಮಂದಿರದಲ್ಲಿ ಶ್ರೀ ಸಿದ್ಧರಾಮೇಶ್ವರ ಜಯಂತ್ಯೋತ್ಸವವನ್ನು ಶ್ರದ್ಧಾಭಕ್ತಿಯಿಂದ ಆಚರಿಸಲಾಯಿತು.

ಕಾರ್ಯಕ್ರಮದ ಅಂಗವಾಗಿ ಗಣೇಶ ಮೈದಾನದಿಂದ ಬಸವೇಶ್ವರ ವೃತ್ತ ಹಾಗೂ ಅಂಬೇಡ್ಕರ್ ವೃತ್ತ ಮೂಲಕ ರಂಗ ಮಂದಿರದವರೆಗೆ ಭವ್ಯ ಮೆರವಣಿಗೆ ನಡೆಯಿತು. ಮೆರವಣಿಗೆಯಲ್ಲಿ ಭೋವಿ ಸಮಾಜದ ಮಹಿಳೆಯರು, ಯುವಕರು ಹಾಗೂ ಹಿರಿಯರು ಸಾಂಪ್ರದಾಯಿಕ ವೇಷಭೂಷಣ ಧರಿಸಿ ಪಾಲ್ಗೊಂಡಿದ್ದು, ಡೊಳ್ಳು ಕುಣಿತ, ಭಜನೆ, ಸಾಂಸ್ಕೃತಿಕ ಕಲಾ ಪ್ರದರ್ಶನಗಳ ಮೂಲಕ ನಗರದ ರಸ್ತೆಗಳಲ್ಲಿ ಸಂಭ್ರಮದ ವಾತಾವರಣ ನಿರ್ಮಾಣವಾಯಿತು.

ಕಾರ್ಯಕ್ರಮದ ಉದ್ಘಾಟನೆಯನ್ನು ಕರ್ನಾಟಕ ರಾಜ್ಯ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ರಾಮಪ್ಪಾ ಎಂ. ಅವರು ದೀಪ ಬೆಳಗಿಸುವ ಮೂಲಕ ಮಾಡಲಾಯಿತು.

ಕರ್ನಾಟಕ ರಾಜ್ಯ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ರಾಮಪ್ಪಾ ಎಂ. ಅವರು ಮಾತನಾಡಿ, ಭೋವಿ ಸಮಾಜದ ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕ ಅಭಿವೃದ್ಧಿಗೆ ಸರ್ಕಾರದಿಂದ ಅಗತ್ಯ ಬೆಂಬಲ ನೀಡುವುದಾಗಿ ಭರವಸೆ ನೀಡಿದರು. ಮಕ್ಕಳ ಶಿಕ್ಷಣ ಮತ್ತು ಮಹಿಳಾ ಆರ್ಥಿಕ ಸಬಲೀಕರಣ ಕುರಿತು ಜಾಗೃತಿ ಮೂಡಿಸಿ, ಕನಿಷ್ಠ ಪಿಯುಸಿ ಮಟ್ಟದವರೆಗೆ ಮಕ್ಕಳಿಗೆ ಶಿಕ್ಷಣ ನೀಡಬೇಕು ಎಂದು ಪೋಷಕರಿಗೆ ಮನವಿ ಮಾಡಿದರು. "ಯಾವುದೇ ಪರಿಸ್ಥಿತಿಯಲ್ಲೂ ಮಕ್ಕಳ ಶಿಕ್ಷಣವನ್ನು ನಿಲ್ಲಿಸಬಾರದು. ಶಿಕ್ಷಣವೇ ಬಡತನ ನಿವಾರಣೆಗೆ ಶಾಶ್ವತ ಪರಿಹಾರ" ಎಂದು ಅವರು ತಿಳಿಸಿದರು. ಡಾ. ಬಿ.ಆರ್. ಅಂಬೇಡ್ಕರ್ ಅವರ ಚಿಂತನೆಗಳನ್ನು ಉಲ್ಲೇಖಿಸಿ, ಶಿಕ್ಷಣದ ಮೂಲಕವೇ ದಾರಿದ್ರ್ಯ ನಿರ್ಮೂಲನೆ ಸಾಧ್ಯವೆಂದು ಹೇಳಿದರು.

ಮಹಿಳೆಯರ ಆರ್ಥಿಕ ಸ್ವಾವಲಂಬನೆಗಾಗಿ ಕನಿಷ್ಠ ಹತ್ತು ಮಹಿಳೆಯರು ಸೇರಿ ಸಂಘ ಸ್ಥಾಪಿಸಿದರೆ ಐದು ಲಕ್ಷ ರೂಪಾಯಿ ಸಹಾಯ ನೀಡಲಾಗುವುದು ಎಂದು ತಿಳಿಸಲಾಗಿದ್ದು, ಸಣ್ಣ ಉದ್ಯಮಗಳು ಹಾಗೂ ಸ್ವಯಂ ಉದ್ಯೋಗ ಆರಂಭಿಸಲು ಪ್ರೋತ್ಸಾಹ ನೀಡುವುದಾಗಿ ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಭೋವಿ ಸಮಾಜ ಸಂಘದ ಅಧ್ಯಕ್ಷರಾದ ಶ್ರೀ ಮಾಣಿಕರಾವ ವಾಡೇಕರ್ ವಹಿಸಿ ಪ್ರಾಸ್ತಾವಿಕ ಮಾತನಾಡಿ, ಸಮಾಜದ ಏಕತೆ, ಶಿಕ್ಷಣಕ್ಕೆ ಮಹತ್ವ, ಯುವಕರ ಶಕ್ತಿಯ ಸದುಪಯೋಗ ಮತ್ತು ಸಮಾಜದ ಒಗ್ಗಟ್ಟು ಅಗತ್ಯವಿದೆ ಎಂದು ಹೇಳಿದರು.

ಕಾರ್ಯಕ್ರಮಕ್ಕೆ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದ ಬಾಗಲಕೋಟೆ ಚಿತ್ರದುರ್ಗ ಭೋವಿ (ವಡ್ಡರ) ಗುರುಪೀಠದ ಪರಮ ಪೂಜ್ಯ ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಮಹಾಸ್ವಾಮಿಗಳು ಹನ್ನೆರಡನೇ ಶತಮಾನದ ಮಹಾನ್ ಶಿವಶರಣ, ಮೂರನೇ ಶೂನ್ಯಪೀಠ ಚಕ್ರವರ್ತಿ, ಕಾಯಕಯೋಗಿ ಹಾಗೂ ಶ್ರೇಷ್ಠ ವಚನಕಾರರಾದ ಶರಣ ಸಿದ್ಧರಾಮೇಶ್ವರರ ಜಯಂತಿಯನ್ನು ಜಿಲ್ಲಾ ಭೋವಿ ಸಮಾಜ ಸಂಘದ ವತಿಯಿಂದ ಭಕ್ತಿಭಾವ ಮತ್ತು ಸಂಸ್ಕೃತಿಯೊಂದಿಗೆ ಅರ್ಥಪೂರ್ಣವಾಗಿ ಆಚರಿಸಲಾಗುವುದು.

ಸಿದ್ಧರಾಮೇಶ್ವರರು ಸೊನ್ನಲಿಗೆ (ಇಂದಿನ ಸೊಲ್ಲಾಪುರ)ಯಲ್ಲಿ ಕಾಯಕ, ದಾಸೋಹ ಮತ್ತು ಸಮಾಜಸೇವೆಯ ಮೂಲಕ ಜನಹಿತಕ್ಕಾಗಿ ದುಡಿದ ಮಹಾನ್ ಶರಣರಾಗಿದ್ದು, "ಕಪಿಲಸಿದ್ಧ ಮಲ್ಲಿಕಾರ್ಜುನ" ಎಂಬ ವಚನಾಂಕಿತದಲ್ಲಿ ವಚನಗಳನ್ನು ರಚಿಸಿದ್ದಾರೆ. ಅವರ ಜೀವನ ಆದರ್ಶಗಳು ಇಂದಿಗೂ ಯುವ ಪೀಳಿಗೆಗೆ ಪ್ರೇರಣೆಯಾಗಿವೆ ಎಂದರು.

ಕಾರ್ಯಕ್ರಮದಲ್ಲಿ ಪರಮ ಪೂಜ್ಯ ಶ್ರೀ ಗುರುಬಸವ ಪಟ್ಟದೇವರು ಹಾಗೂ ಪರಮ ಪೂಜ್ಯ ಶ್ರೀ ಶಿವಾನಂದ ಮಹಾಸ್ವಾಮಿಗಳು ಹಾಗೂ ಲಾಡಗೇರಿ ಹಿರೇಮಠ ಸಂಸ್ಥಾನದ ಶ್ರೀ ಷ.ಬ್ರ ಗಂಗಾಧರ ಶಿವಾಚಾರ್ಯರು ದಿವ್ಯ ಸಾನಿಧ್ಯ ವಹಿಸಿದ್ದರು. ಧಾರ್ಮಿಕ ಉಪನ್ಯಾಸದಲ್ಲಿ ಅವರು ಶ್ರೀ ಸಿದ್ಧರಾಮೇಶ್ವರರ ಆದರ್ಶ, ತ್ಯಾಗ, ಸೇವಾಭಾವ ಮತ್ತು ಸಾಮಾಜಿಕ ಸಮಾನತೆ ಕುರಿತು ಪ್ರೇರಣಾದಾಯಕ ಸಂದೇಶ ನೀಡಿದರು.

ಈ ಸಂದರ್ಭದಲ್ಲಿ ಉಪಾಧ್ಯಕ್ಷರಾದ ಪುಂಡಲೀಕ ನಿಂಗದಳ್ಳಿ ಹಾಗೂ ವೆಂಕಟರಾವ ಶಿಂಧೆ, ಹೈದ್ರಾಬಾದಿನ ಜಾತೀಯ ವಡ್ಡೇರಾ ಸಂಗಮದ ಅಧ್ಯಕ್ಷರಾದ ಪಿಟ್ಲಾ ಶ್ರೀಧರ, ಕಲಬುರಗಿಯ ಜಿಲ್ಲಾ ಭೋವಿ ಸಮಾಜದ ಅಧ್ಯಕ್ಷರಾದ ಮಲ್ಲಿಕಾರ್ಜುನ ಕುಸ್ತಿ, ಭಾಲ್ಕಿ ಸಿ.ಪಿ.ಐ ಹನಮರೆಡ್ಡಿ ಭೋವಿ, ಜಹಿರಾಬಾದಿನ ರಾಮಲು ವಡ್ಡೇರಾ, ಧನರಾಜ ವಡೆಯರ, ಗಿರೀಶ ವಡೆಯರ, ಸಂಜುಕುಮಾರ ವಡೆಯರ, ಗಣೇಶ ಭೋವಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯ ನಿರ್ದೇಶಕ ಸಿದ್ದಮ ಶಿಂಧೆ. ವಿವಿಧ ಸಮಾಜದ ಮುಖಂಡರು, ಗಣ್ಯರು ಹಾಗೂ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು. ವೇದಿಕೆಯಲ್ಲಿ ವಿಶೇಷ ಸಾಧಕರಿಗೆ ಸನ್ಮಾನ ನಡೆಯಿತು.

ಕಾರ್ಯಕ್ರಮದ ನಿರೂಪಣೆ ಶರಣಪ್ಪಾ ವಾಡೇಕರ ಹಾಗೂ ಡಾ. ಬಸವರಾಜ ಎನ್ ವಾಡೇಕರ್ ಅವರು ಸ್ವಾಗತ ಕೋರಿದರು.

ಜಿಲ್ಲೆಯ ವಿವಿಧ ತಾಲೂಕುಗಳಿಂದ ಸಾವಿರಾರು ಭೋವಿ ಸಮಾಜದ ಬಂಧುಗಳು ಹಾಗೂ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಭಾಗವಹಿಸಿ ಜಯಂತ್ಯೋತ್ಸವವನ್ನು ಯಶಸ್ವಿಗೊಳಿಸಿದರು.

## ಕುಷ್ಠರೋಗ ಮುಕ್ತ ಜಿಲ್ಲೆಯನ್ನಾಗಿಸಲು ಪಣತೊಟ್ಟು ಕಾರ್ಯಪ್ರವೃತರಾಗಿ, ಗ್ರಾಮ, ನಗರ ಪ್ರದೇಶಗಳ ವ್ಯಾಪ್ತಿಯಲ್ಲಿ ಹೆಚ್ಚಾಗಿ ಜಾಗೃತಿಗೊಳಿಸಿ : ಜಿಲ್ಲಾಧಿಕಾರಿ ಹರ್ಷಲ್ ಭೋಯರ್



ಯಾದಗಿರಿ : ಫೆಬ್ರವರಿ 02, :ಯಾದಗಿರಿ ಜಿಲ್ಲೆಯನ್ನು ಕುಷ್ಠರೋಗ ಮುಕ್ತ ಜಿಲ್ಲೆಯನ್ನಾಗಿಸಲು ಪಣತೊಟ್ಟು ಕಾರ್ಯಪ್ರವೃತರಾಗಿ, ಗ್ರಾಮ, ನಗರ ಪ್ರದೇಶಗಳ ವ್ಯಾಪ್ತಿಯಲ್ಲಿ ಹೆಚ್ಚಾಗಿ ಜಾಗೃತಿಯನ್ನು ಮೂಡಿಸಬೇಕು ಎಂದು ಯಾದಗಿರಿ ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ಅವರು ಹೇಳಿದರು.

ಯಾದಗಿರಿ ನಗರದ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಇತ್ತೀಚಿನ ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನ ಜಿಲ್ಲಾ ಸಮನ್ವಯ ಸಮಿತಿ (ಡಿಟಿಎಫ್) ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಗರದ ಜಿಲ್ಲಾಧಿಕಾರಿ ಕಛೇರಿಯ ಸಭಾಂಗಣದಲ್ಲಿ ನಡೆದ ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನ ಜಿಲ್ಲಾ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಅವರು ಮಾತನಾಡಿದರು. ಮಹತ್ಮಾ ಗಾಂಧಿ ಅವರು ಕುಷ್ಠರೋಗ ಮುಕ್ತ ಸಮಾಜವನ್ನು ನಿರ್ಮಿಸಲು ಶ್ರಮವಹಿಸಿದರು. ಶಂಕಿತ ಕುಷ್ಠರೋಗದ ಲಕ್ಷಣಗಳು ಚರ್ಮದ ಮೇಲಿನ ಯಾವುದೇ ತಿಳಿ, ಬಿಳಿ, ತಾಮ್ರ ಬಣ್ಣದ ಮಚ್ಚೆ, ದಪ್ಪನಾದ ಎಣ್ಣೆ ಪಸರಿಸಿದಂತಹ ಹೊಳೆಯುವ ಚರ್ಮ, ದೇಹದ ಮೇಲಿನ ಗಂಟುಗಳು, ಕಣ್ಣಿನರೆಪ್ಪೆಗಳನ್ನು ಮುಚ್ಚುವಲ್ಲಿ ತೊಂದರೆ, ಕೈ ಅಥವಾ ಕಾಲುಗಳಲ್ಲಿ ಬಹುದಿನದ ಗಾಯ, ಕೈ ಅಥವಾ ಕಾಲುಗಳಲ್ಲಿ ಬೆರಳು ಮಡಿಚಿಕೊಂಡಿರುವುದು, ನಡೆಯುವಾಗ ಕಾಲು ಎಳೆಯುವುದು, ಕೈ ಅಥವಾ ಕಾಲುಗಳಲ್ಲಿ ಜುಮ್ಮೆನಿಸುವಿಕೆ ಅಥವಾ ಮರುಗಟ್ಟುವಿಕೆ, ಅಂಗೈ ಅಥವಾ ಪಾದಗಳಲ್ಲಿ ಶೀತ, ಬಿಸಿ, ಸಂವೇದನೆ ನಷ್ಟವಾಗಿರುವುದು. ಲಕ್ಷಣಗಳು ಕಂಡು ಬಂದರೆ ತಕ್ಷಣವೇ ಹತ್ತಿರದ ಆರೋಗ್ಯ ಕೇಂದ್ರದಲ್ಲಿ ಸಾರ್ವಜನಿಕರು ಚಿಕಿತ್ಸೆ ಪಡೆಯಬೇಕು ಎಂದು ತಿಳಿಸಿದರು. ಈ ಸಭೆಯಲ್ಲಿ ಜಾಗೃತಿ ಬಿತ್ತಿ ಪತ್ರಗಳನ್ನು ಬಿಡುಗಡೆಗೊಳಿಸಲಾಯಿತು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ.ಮಹೇಶ ಬಿರದಾರ ಅವರು ಸ್ವಾಗತಿಸಿ ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನ ಜನೇವರಿ 30 ರಿಂದ ಫೆಬ್ರವರಿ 13ರ ವರೆಗೆ ಜಿಲ್ಲಾಯಾದ್ಯಂತ ಹಮ್ಮಿಕೊಳ್ಳಲಾಗಿದ್ದು, ಸಮುದಾಯ ಹಾಗೂ ವಿವಿಧ ಇಲಾಖೆಗಳ ಸಹಕಾರ ತುಂಬಾ ಅವಶ್ಯಕತೆ ಇದ್ದು ಈ ಕಾರ್ಯಕ್ರಮಕ್ಕೆ ಸಹಕರಿಸಬೇಕು ಎಂದರು.

ಜಿಲ್ಲಾ ಕುಷ್ಠರೋಗ ನಿರ್ಮೂಲಾಧಿಕಾರಿಗಳಾದ ಡಾ.ಸಂಜೀವ ಕುಮಾರ ರಾಯಚೂರಕರ್ ಅವರು ಮಾತನಾಡಿ, ತಾರತಮ್ಯವನ್ನು ಕೊನೆಗೊಳಿಸುವುದು ಘನತೆಯನ್ನು ಕಾಪಾಡುವುದು ಘೋಷವಾಕ್ಯದೊಂದಿಗೆ ಜಿಲ್ಲೆಯ ಆಶಾ ಕಾರ್ಯಕರ್ತೆಯರು, ಆರೋಗ್ಯ ಸಿಬ್ಬಂದಿಯವರು ಮನೆ ಮನೆಗೆ ತೆರಳಿ ಕುಷ್ಠರೋಗ ಸಮೀಕ್ಷೆ ನಡೆಸಲಾಗುವುದು. ಜಿಲ್ಲಾ, ತಾಲೂಕು ಹಾಗೂ ಗ್ರಾಮ ಪಂಚಾಯತಿಯ ಮಟ್ಟದಲ್ಲಿ ಜಾಗೃತಿ ಕಾರ್ಯಕ್ರಮ ಹಮ್ಮಿಕೊಂಡು ಸಾರ್ವಜನಿಕರಲ್ಲಿ ಅರಿವು ಮೂಡಿಸಲಾಗುತ್ತದೆ.

ಈ ಸಂದರ್ಭದಲ್ಲಿ ಆಕಆಔಡಾ.ಮುಭಾಷೀರ್ ಹಮ್ಮದ್ ಸಾಜೀದ್, ಖಅಊಔಡಾ.ಮಲ್ಲಪ್ಪ, ಈಫಾಔ ಡಾ.ಜೋತಿ ಕಟ್ಟಿಮನಿ, ಖಊಔ ಡಾ.ಹಣಮಂತರೆಡ್ಡಿ, ಖಊಔ ಡಾ.ಆರ್.ವಿನಾಯಕ, ಸಾರ್ವಜನಿಕ ಶಿಕ್ಷಣ ಇಲಾಖೆ, ಉಪ ನಿರ್ದೇಶಕರು ಡಾ.ಜಗನಾಥರಡ್ಡಿ, ಇಲಾಖೆ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಹಾಗೂ ಇನ್ನಿತರರು ಉಪಸ್ಥಿತರಿದ್ದರು.

## ಹೋಲಿಕೆ ಬೀಡಿ, ಮಕ್ಕಳಲ್ಲಿನ ಪ್ರತಿಭೆ ಗುರುತಿಸಿ ಎಸ್ಪಿ

### ಡಾ.ರಾಮ್.ಎಲ್.ಅರಸಿದ್ದಿ ಎಜ್ಯುಕೇರ್ ಸ್ಕೂಲ್ ವಾರ್ಷಿಕೋತ್ಸವ



ಕೊಪ್ಪಳ: ಫೆ. 02–ಮಕ್ಕಳನ್ನು ಮತ್ತೊಂದು ಮಗುವಿನ ಜೊತೆ ಹೋಲಿಕೆ ಮಾಡುವುದನ್ನು ಬಿಡಿ, ಆ ಮಗುವಿನಲ್ಲಿಯೇ ಇರುವ ವಿಶೇಷ ಪ್ರತಿಭೆಯನ್ನು ಗುರುತಿಸಿ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ರಾಮ್.ಎಲ್.ಅರಸಿದ್ದಿ ಪಾಲಕರಿಗೆ ಸಲಹೆ ನೀಡಿದರು.

ನಗರದ ಎಜುಕೇರ್ ಇಂಗ್ಲೀಷ್ ಮೀಡಿಯಮ್ ಸ್ಕೂಲ್‌ನಲ್ಲಿ ಶನಿವಾರ ಸಂಜೆ ಆಯೋಜಿಸಿದ್ದ ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಪ್ರತಿಯೊಂದು ಮಗುವಿನಲ್ಲಿ ಒಂದೊಂದು ಕಲಿಕಾ ಸಾಮರ್ಥ್ಯವಿರುತ್ತದೆ. ಅವರ ಕಲಿಕಾ ಸಾಮರ್ಥ್ಯ– ನ್ಯೂನತೆ ಗಮನಿಸಿ, ಅವರ ಬೌದ್ಧಿಕ ಮಟ್ಟ ಹೆಚ್ಚಿಸುವ ಕೆಲಸ ಮಾಡಬೇಕೆಂದು ಕರೆ ನೀಡಿದರು.

ಇತ್ತೀಚಿನ ದಿನಗಳಲ್ಲಿ ಸಣ್ಣ–ಪುಟ್ಟ ವಿಷಯಕ್ಕೆ ಮಕ್ಕಳು ಆತ್ಮಹತ್ಯೆಯ ದಾರಿ ಹಿಡಿಯುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಹೀಗಾಗಿ ಮಾನಸಿಕವಾಗಿ ಮಕ್ಕಳಲ್ಲಿ ಗಟ್ಟಿತನ ಬೆಳೆಸುವ ಕೆಲಸವಾಗಬೇಕಿದೆ ಎಂದರು.

ಕಳೆದೊಂದು ದಶಕದಿಂದ ಮಕ್ಕಳಲ್ಲಿ ಜ್ಞಾನದ ಹಸಿವು ನಿಗಿಸುತ್ತಿರುವ ಎಜ್ಯುಕೇರ್ ಇಂಗ್ಲೀಷ ಮಿಡಿಯಂ ಶಾಲೆಯ ಸಾಧನೆ ನಿಜಕ್ಕೂ ಮೆಚ್ಚುವಂತಹದ್ದು.

ನಾನು ಕೂಡ ಮೈಸೂರಿನ ರಾಮಕೃಷ್ಣ ಆಶ್ರಮದಲ್ಲಿ ಓದಿದ್ದೇನೆ. ನಾನು ಐಪಿಎಸ್ ಆದ ಬಳಿಕ ರಾಮಕೃಷ್ಣ ಆಶ್ರಮದ ಶಾಲೆಯ ಹೆಸರನ್ನು ಹೆಮ್ಮೆಯಿಂದ ಹೇಳುತ್ತಿದ್ದೇನೆ.

ಅದೇ ರೀತಿ ಈ ಶಾಲೆಯಲ್ಲಿ ಕಲಿತ ಮಕ್ಕಳು ಮುಂದೆ ಉತ್ತಮ ಭವಿಷ್ಯ ಕಂಡುಕೊಂಡ ಬಳಿಕ ಈ ಶಾಲೆಯ ಹೆಸರನ್ನು ಚಿರಸ್ಥಾಯಿಯಾಗಿಸುತ್ತಾರೆ.

ಹೀಗಾಗಿ ಮಕ್ಕಳ ಜೀವನದಲ್ಲಿ ಶಿಕ್ಷಣ ಸಂಸ್ಥೆ ಮಹತ್ತರ ಪಾತ್ರ ವಹಿಸುತ್ತದೆ ಎಂದರು.

ಕಲಾವಿದ ಅನಂತ ದೇಶಪಾಂಡೆ ಅವರು, ಹಿರಿಯ ಕವಿ ದಿ. ದ.ರಾ.ಬೇಂದ್ರೆಯವರಂತೆ ಮಾಡಿದ ಮಿಮಿಕ್ರಿ ನೋಡುಗರನ್ನು ಮಂತ್ರ ಮುಗ್ದರನ್ನಾಗಿಸಿತು.

ಥೇಟ್ ದ.ರಾ.ಬೇಂದ್ರೆಯವರಂತೆ ವೇಷ– ಭೂಷ ಧರಿಸಿದ್ದ ಅನಂತ ದೇಶಪಾಂಡೆ ಅವರನ್ನು ನೋಡಿ, ವಿದ್ಯಾರ್ಥಿಗಳು, ಪಾಲಕರು ಸೇರಿ ನೆರೆದವರು ಕಾರ್ಯಕ್ರಮದಲ್ಲಿ ಮೊದಲಿಗೆ ಒಂದು ಕ್ಷಣ ಅವಕ್ಕಾಗಿದ್ದರು. ಬಳಿಕ ವೇದಿಕೆಯ ಮೇಲೆ ಅವರ ಮಿಮಿಕ್ರಿ ಎಲ್ಲರ ಮನಸೂರೆಗೊಂಡಿತು.

ಬೇಂದ್ರೆಯವರ ನಿ ಹಿಂಗ್ ನೋಡಬೇಡ ನನ್ನಾ ಅವರ ಗೀತೆ ಸೇರಿದಂತೆ ವಿವಿಧ ಕವಿತೆಗಳನ್ನು ವಾಚನ ಮಾಡಿ, ಗಮನ ಸೆಳೆದರು.

ಕನ್ನಡಪ್ರಭ ಹುಬ್ಬಳ್ಳಿ ಆವೃತ್ತಿಯ ಸ್ಥಾನಿಕ ಸಂಪಾದಕ ಮಲ್ಲಿಕಾರ್ಜುನ ಸಿದ್ದಣ್ಣನವರ್, ಎಜ್ಯುಕೇರ್ ಇಂಗ್ಲಿಷ ಮಿಡಿಯಂ ಶಾಲೆಯ ಅಧ್ಯಕ್ಷ ಡಾ.ಶ್ರೀನಿವಾಸ ಹ್ಯಾಟಿ, ಪ್ರಾಚಾರ್ಯ ಪ್ರಶಾಂತ ಕುಲಕರ್ಣಿ ಸೇರಿ ಇನ್ನಿತರರು ಇದ್ದರು.

2ಕೆಪಿಎಲ್21 ಕೊಪ್ಪಳ ನಗರದ ಎಜುಕೇರ್ ಇಂಗ್ಲೀಷ್ ಮೀಡಿಯಮ್ ಸ್ಕೂಲ್ ನಲ್ಲಿ ಶನಿವಾರ ಸಂಜೆ ಆಯೋಜಿಸಿದ್ದ ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮ

### ವಿಚಾರ ಸಂಕಿರಣದಲ್ಲಿ ಮುಹಮ್ಮದ್ ನಸೀಮುದ್ದೀನ್ ಫರೀಸ್ ಹೇಳಿಕೆ

## ಎಲ್ಲರ ಹಿತ ಬಯಸಿದ್ದ ಬಹಮನಿ ಅರಸರು



ಅಶೋಕಾ ಕೋಟೆ ವಾರ್ತೆ

ಬೀದರ್: ಫೆ. 02–ಬಹಮನಿ ಅರಸರು ತಮ್ಮ ಆಳ್ವಿಕೆಯಲ್ಲಿ ಎಲ್ಲರ ಹಿತ ಬಯಸಿದ್ದರು ಎಂದು ಹೈದರಾಬಾದ್‌ನ ಮೌಲಾನಾ ಆಜಾದ್ ಉರ್ದು ವಿಶ್ವವಿದ್ಯಾಲಯದ ನಿವೃತ್ತ ಡೀನ್ ಮುಹಮ್ಮದ್ ನಸೀಮುದ್ದೀನ್ ಫರೀಸ್ ಹೇಳಿದರು.

ಜಮಾ ಅತೆ ಇಸ್ಲಾಮಿ ಹಿಂದ್‌ನ ತಹಕೀಕ್–ಒ–ತಸ್ನೀಫ್ ವತಿಯಿಂದ ನಗರದ ಮೊಘಲ್ ಗಾರ್ಡನ್ ಫಂಕ್ಷನ್ ಹಾಲ್‌ನಲ್ಲಿ ಭಾನುವಾರ ಆಯೋಜಿಸಿದ್ದ ಬಹಮನಿ ಯುಗ: ರಾಜಕೀಯ, ಸಾಮಾಜಿಕ, ಸಾಹಿತ್ಯ, ಶಿಕ್ಷಣ ಹಾಗೂ ಅಭಿವೃದ್ಧಿ ವಿಮರ್ಶೆ ಕುರಿತ ಐತಿಹಾಸಿಕ ವಿಚಾರ ಸಂಕಿರಣದಲ್ಲಿ ಅವರು ಮಾತನಾಡಿದರು.

ಎಲ್ಲ ಧರ್ಮ ಹಾಗೂ ವರ್ಗಗಳ ಜನರನ್ನು ವಿಶ್ವಾಸಕ್ಕೆ ತೆಗೆದು–ಕೊಂಡು ಆಡಳಿತ ನಡೆಸಿದ್ದರು. ನೆರೆ ರಾಜ್ಯಗಳೊಂದಿಗೆ ಉತ್ತಮ ಬಾಂಧವ್ಯ ಹೊಂದಿದ್ದರು. ಶಾಂತಿ ಸ್ಥಾಪಿಸಿದ್ದರು ಎಂದು ತಿಳಿಸಿದರು.

ಶಿಕ್ಷಣಕ್ಕಾಗಿ ಅನೇಕ ಶಿಕ್ಷಣ ಸಂಸ್ಥೆಗಳನ್ನು ಆರಂಭಿಸಿದ್ದರು. ಉರ್ದು ಭಾಷೆ, ಸಾಹಿತ್ಯಕ್ಕೆ ಪ್ರೋತ್ಸಾಹ ನೀಡಿದ್ದರು. ಇರಾನ್, ಇರಾಕ್, ಸಿರಿಯಾದಿಂದ ಇಸ್ಲಾಮಿ ವಿದ್ವಾಂಸರನ್ನು ಕರೆಸಿ ಆಧ್ಯಾತ್ಮ ಪ್ರಗತಿಗೂ ಪ್ರಯತ್ನಿಸಿದ್ದರು ಎಂದು ಹೇಳಿದರು.

ಖರೇಜ್ ವ್ಯವಸ್ಥೆ ಅನುಷ್ಠಾನಗೊಳಿಸಿದ್ದರು. ಅದರಿಂದ ನೀರಿನ ಸಂರಕ್ಷಣೆ ಸಾಧ್ಯವಾಗಿತ್ತು ಎಂದು ತಿಳಿಸಿದರು.

ಬಹಮನಿ ಸಾಮ್ರಾಜ್ಯದಲ್ಲಿ ವಿದ್ವಾಂಸರು, ಇತಿಹಾಸ ತಜ್ಞರು, ತತ್ವಜ್ಞಾನಿಗಳು ಇದ್ದರು ಎಂದು ಹೇಳಿದರು.

ಜಮಾ ಅತೆ ಇಸ್ಲಾಮಿ ಹಿಂದ್‌ನ ರಾಜ್ಯ ಕಾರ್ಯದರ್ಶಿ ಲಬೀದ್ ಶಾಫಿ ಮಾತನಾಡಿ, ಇತಿಹಾಸ ಅರಿಯದವರು ಇತಿಹಾಸ ನಿರ್ಮಿಸಲಾರರು. ಹೀಗಾಗಿ ಎಲ್ಲರೂ ಇತಿಹಾಸ ತಿಳಿಯಬೇಕು ಎಂದು ತಿಳಿಸಿದರು.

ಪ್ರಸ್ತುತ ಕೆಲ ಕೋಮುವಾದಿ ಶಕ್ತಿಗಳು ಇತಿಹಾಸವನ್ನು ಸಮಾಜದಲ್ಲಿ ದ್ವೇಷ ಹರಡಲು ಬಳಸುತ್ತಿವೆ.

ಇತಿಹಾಸ ತಿರುಚುವ ಕೆಲಸ ಮಾಡುತ್ತಿವೆ. ಹೀಗಾಗಿ ಬಹಮನಿ ಅರಸರ ಇತಿಹಾಸ ತಿಳಿಸಲು ಜಮಾ ಅತೆ ಇಸ್ಲಾಮಿ ಹಿಂದ್ ವಿಚಾರ ಸಂಕಿರಣ ಹಮ್ಮಿಕೊಂಡಿರುವುದು ಶ್ಲಾಘನೀಯ ಎಂದರು.

ಹೈದರಾಬಾದ್‌ನ ರಾಷ್ಟ್ರೀಯ ಉರ್ದು ವಿಶ್ವವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಮುಹಮ್ಮದ್ ಫಹೀಮುದ್ದೀನ್ ಅವರು ಬಹಮನಿ ಆಡಳಿತದಲ್ಲಿ ಧರ್ಮ ಹಾಗೂ ಸೂಫಿಸಂ ಕುರಿತು, ಹೈದರಾಬಾದ್‌ನ ಕೇಂದ್ರೀಯ ವಿಶ್ವವಿದ್ಯಾಲಯದ ಡಾ. ರೈಸ್ ಫಾತಿಮಾ ಅವರು ಬಹಮನಿ ಆಡಳಿತದಲ್ಲಿ ಸುಭದ್ರ ಆರ್ಥಿಕ ಸ್ಥಿತಿ ಕುರಿತು, ಡಾ. ಮಂಜೂರ ಅಹಮ್ಮದ್ ಅವರು ಬಹಮನಿ ಆಡಳಿತದಲ್ಲಿ ಉರ್ದು ಸಾಹಿತ್ಯದ ಉಗಮ ಹಾಗೂ ಅಭಿವೃದ್ಧಿ ಕುರಿತು, ಡಾ. ಅಬ್ದುಲ್ ಮಜೀದ್ ಅವರು ಬಹಮನಿ ಆಡಳಿತ ಕಾಲದ ವಾಸ್ತು ಶಿಲ್ಪ ಕುರಿತು, ಡಾ. ಮುಹಮ್ಮದ್ ಸಮೀವುದ್ದೀನ್ ಅವರು ಬಹಮನಿ ಆಡಳಿತದಲ್ಲಿನ ಶಿಕ್ಷಣ ಪದ್ಧತಿ ಕುರಿತು, ಡಾ. ಮೈಮೂನಾ ಬೇಗಂ ಅವರು ಬಹಮನಿ ಆಡಳಿತದ ನಾಣ್ಯದ ಕುರಿತು, ಡಾ. ಮುಹಮ್ಮದ್ ಮಜೀದ್ ಅವರು ಬಹಮನಿ ಸಾಮ್ರಾಜ್ಯದ ಪತನ, ನಂತರದ ಸ್ಥಿತಿ ಹಾಗೂ ಲಿಪಿ ಕುರಿತು, ಡಾ. ಇಸ್ಮಾಯಿಲ್ ಖಾನ್ ಅವರು ಮಹಮೂದ್ ಗವಾನರ ಕುರಿತು, ಡಾ. ಮುಸ್ತಾಕ್ ಅಹಮ್ಮದ್ ಅವರು ಬಹಮನಿ ಅರಸರ ಕಾಲದಲ್ಲಿನ ರಾಜಕೀಯ ಸ್ಥಿತಿ ಕುರಿತು ಉಪನ್ಯಾಸ ನೀಡಿದರು.

ಡಾ. ಹಷ್ಮತ್ ಫಾತೆಹಖಾನಿ, ಡಾ. ನಿಷಾತ್ ಅಹಮ್ಮದ್, ಡಾ. ಮುಹಮ್ಮದ್ ಖಾಲಿದ್ ಮುಬಸ್ಸಿರುಝಫರ್, ಪ್ರೊ. ಮುಹಮ್ಮದ್ ನಸೀಮುದ್ದೀನ್ ಫಾರೀಸ್ ವಿವಿಧ ಗೋಷ್ಠಿಗಳ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಮಾ ಅತೆ ಇಸ್ಲಾಮಿ ಹಿಂದ್‌ನ ತಹಕೀಕ್–ಒ–ತಸ್ನೀಫ್ ವಿಭಾಗದ ಮುಖ್ಯಸ್ಥ ಶಂಶುದ್ದೀನ್ ಪ್ರಾಸ್ತಾವಿಕವಾಗಿ ಮಾತನಾಡಿದರು.

ಜಮಾ ಅತೆ ಇಸ್ಲಾಮಿ ಹಿಂದ್‌ನ ಸ್ಥಳೀಯ ಘಟಕದ ಅಧ್ಯಕ್ಷ ಮುಹಮ್ಮದ್ ಮೌಅಝುಂ ಉದ್ಘಾಟನಾ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು. ಇತಿಹಾಸಕಾರ ಅಬ್ದುಲ್ ಸಮದ್ ಭಾರತಿ, ಜಮಾ ಅತೆ ಇಸ್ಲಾಮಿ ಹಿಂದ್‌ನ ಜಿಲ್ಲಾ ಸಂಚಾಲಕ ಇಕ್ಬಾಲ್ ಗಾಝಿ, ರಾಜ್ಯ ಸಲಹಾ ಮಂಡಳಿ ಸದಸ್ಯ ಮುಹಮ್ಮದ್ ಆಸಿಫುದ್ದೀನ್, ಡಾ. ಇರ್ಷಾದ್ ನವೀದ್, ಮುಹಮ್ಮದ್ ಸಲಾವುದ್ದೀನ್ ಮತ್ತಿತರರು ಇದ್ದರು.

ಆರಂಭದಲ್ಲಿ ಹಾಫಿಝ್ ಸೈಯ್ಯದ್ ಅತೀಕುಲ್ಲಾಹ ಅವರು ಕುರ್‌ಆನ್ ಪಠಣ ಮಾಡಿದರು.

ಡಾ. ಮುಹಮ್ಮದ್ ರಫೀಕ್, ಡಾ. ಇಸ್ಮಾಯಿಲ್ ಖಾನ್, ಮುಹಮ್ಮದ್ ಜಮೀಲ್ ಅಹಮ್ಮದ್, ಮುಹಮ್ಮದ್ ಎಹತೆಶಾಮ್ ನಿರೂಪಿಸಿದರು. ಮುಹಮ್ಮದ್ ಆರಿಫುದ್ದೀನ್ ವಂದಿಸಿದರು.